ಸಂಪುಟ: 13 Volume | ಸಂಚಿಕೆ: 286 Issue | ಪುಟಗಳು 08 Pages | ಗುರುವಾರ 01 ಜನವರಿ 2026 | ₹6 | PRGINO.120927 (RNINO: KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

ಸಂಪಾದಕರು: ರಮೇಶ ರೆಡ್ಡಿ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

**ಬೆಳಗು**

ಇರುವೆಗಳು ಸಂಗ್ರಹಿಸಿದ ಕಾಳು, ಜೇನುನೊಣಗಳು ಕೂಡಿಟ್ಟ ಜೇನುತುಪ್ಪ, ಜಿಪುಣನ ಸಂಪತ್ತು ಇವೆಲ್ಲಾ ಸಂಪೂರ್ಣ ನಾಶವಾಗುವವು.

–ಸುಭಾಷಿತ






**ಇಲ್ಲಿ ಏನುಂಟು, ಏನಿಲ್ಲ..?** ಅಕಾಡೆಮಿಯಲ್ಲಿ ಅನುಭವಿ ಉಪನ್ಯಾಸಕರಿದ್ದಾರೆ. ಅತ್ಯುತ್ತಮ ಬೋಧನಾ ಸಾಮಗ್ರಿ ಇದೆ. ಮುದ್ರಿತಾ ನೋಟ್ಸ್ ನೀಡಲಾಗುತ್ತದೆ. ಪ್ರತಿ ವಾರ ಮಾದರಿ ಪರೀಕ್ಷೆ, 27/7 ಗ್ರಂಥಾಲಯ ವ್ಯವಸ್ಥೆ ಹೀಗೆ ಎಲ್ಲವೂ ಇದೆ.

# ಮಿಲಿಂದ್ ಮುಳೆ ಸ್ಪರ್ಧಾರ್ಥಿಗಳ ಮೆದುಳ ಬೆಳಗುವ ಮಿಂಚಿನ ಮಳೆ

## ಅಕ್ಷರ ದಾಸೋಹಿ ಸ್ಪರ್ಧಾ ಕಿರಣ ಕರಿಯರ್ ಅಕಾಡೆಮಿ | ಸ್ಪರ್ಧಾತ್ಮಕ ಪರೀಕ್ಷೆಗೂ ಸ್ಪರ್ಧಾಳುಗಳಿಗೆ ಉಚಿತ ತರಬೇತಿ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಸ್ಪರ್ಧಾತ್ಮಕ ಪರೀಕ್ಷೆಗೂ ಉಚಿತ ತರಬೇತಿ ಟ ಟ ನಿರಂತರ ಜ್ಞಾನ ದಾಸೋಹಕ್ಕೆ ಆದ್ಯತೆ. ಸ್ಪರ್ಧಾತ್ಮಕ ಪರೀಕ್ಷೆಗೆ ಇರುವ ಮಹತ್ವ ಎಲ್ಲರಿಗೂ ತಿಳಿದಿದೆ. ಹಾಗೆಯೇ ಈ ಪರೀಕ್ಷೆಗೆ ತರಬೇತಿ ನೀಡುವುದನ್ನೇ ಕಾಯಕ ಮಾಡಿಕೊಂಡ, ಅಧಿಕ ಶುಲ್ಕ ಪಡೆಯುವ ಸಂಸ್ಥೆಗಳು ಇವೆ. ಆದರೆ ಭಾಲ್ಕಿ ಪಟ್ಟಣದಲ್ಲಿರುವ ಸ್ಪರ್ಧಾ ಕಿರಣ ಕರಿಯರ್ ಅಕಾಡೆಮಿ ಮಾತ್ರ ಇದಕ್ಕೆ ಅಪವಾದವಾಗಿದೆ.



**ಸಾರ್ವಜನಿಕರ ಮೆಚ್ಚುಗೆ:** ವಿದ್ಯಾವಂತ ಯುವಕರು ಉತ್ತಮ ಭವಿಷ್ಯ ರೂಪಿಸಿಕೊಳ್ಳಲಿ ಎಂಬ ಕಾರಣಕ್ಕೆ ಈ ಸಂಸ್ಥೆ ಆರಂಭಿಸಿದವರು ಭಾಲ್ಕಿ ತಾಲೂಕಿನ ಭಾಟಸಾಂಗವಿ ಗ್ರಾಮದ ಮಿಲಿಂದ ಮುಳೆ. ಎಂಎಸ್‌ಸಿ ಭೌತಶಾಸ್ತ್ರ, ಬಿಎಡ್, ಡಾಕ್ಟರೇಟ್ ಪದವಿ ಪಡೆದ ಇವರು ಉಚಿತವಾಗಿಯೇ ತರಬೇತಿ, ಉದ್ಯೋಗ ಮಾರ್ಗದರ್ಶನ ನೀಡುವ ಮೂಲಕ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

**ಸ್ಪರ್ಧಾಕಿರಣ ಹುಟ್ಟಿಗೆ ಕಾರಣ:** ನಾನು ಕಡು ಬಡತನದಲ್ಲಿ ಕಷ್ಟಪಟ್ಟು ಓದಿ ಇಂದು ಖಾಸಗಿ ಕಾಲೇಜಿನಲ್ಲಿ ಉಪನ್ಯಾಸಕನಾಗಿ ಸೇವೆ ಸಲ್ಲಿಸುತ್ತಿದ್ದೇನೆ. ಇಂದು ಅದೆಷ್ಟೋ ವಿದ್ಯಾರ್ಥಿಗಳಿಗೆ ಬೇರೆ ಊರುಗಳಿಗೆ ಹೋಗಿ ತರಬೇತಿ ಪಡೆಯಲು ಕಷ್ಟವಾಗುತ್ತದೆ. ಇದನ್ನು ಅರಿತುಕೊಂಡೆ ಸ್ಪರ್ಧಾ ಕಿರಣ ಕರಿಯರ್ ಅಕಾಡೆಮಿಯನ್ನು 2021 ರಲ್ಲಿ ಆರಂಭಿಸಿದ್ದೇನೆ. ಟಿ ಇ ಟಿ, ಸಿಇಟಿ, ಪಿಡಿಒ ,ಎಫ್ ಡಿ ಎ, ಎಸ್ ಡಿ ಎ, ಪೊಲೀಸ್ ಕಾನ್ಸ್ಟೇಬಲ್, ಗ್ರಾಮ ಆಡಳಿತ ಅಧಿಕಾರಿ ಮುಂತಾದ ಹುದ್ದೆಗಳಿಗೆ ಉಚಿತವಾಗಿ ಅತ್ಯುತ್ತಮ ತರಬೇತಿ ನೀಡಲಾಗುತ್ತದೆ ಮಿಲಿಂದ ಮುಳೆ ಎನ್ನುತ್ತಾರೆ.

### ಸುಶಿಕ್ಷಿತ ಕುಟುಂಬ, ಪರಿಣಾಮಕಾರಿ ಬೋಧನೆ

ಭಾಟಸಾಂಗವಿ ಸರಕಾರಿ ಪ್ರೌಢಶಾಲೆಯಲ್ಲಿ ಓದಿದ ಮಿಲಿಂದ್ ಮುಳೆ, ಅವರ ಹಿರಿಯ ಸಹೋದರ ಕಾರ್ಯನಿರ್ವಾಹಕ ಇಂಜಿನಿಯರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಇನ್ನೊಬ್ಬ ಸಹೋದರ ಎಂಬಿಬಿಎಸ್ ಮುಗಿಸಿ ಎಂಡಿ ಯಲ್ಲಿ ಓದುತ್ತಿದ್ದಾರೆ. ಮಿಲಿಂದ್ ಮುಳೆ ಡಾಕ್ಟರೇಟ್, ಎಂಎಸ್‌ಸಿ, ಬಿಎಡ್ ಮುಗಿಸಿ ಬೋಧನೆಯ ಜೊತೆಗೆ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಯನ್ನು ಪರಿಣಾಮಕಾರಿಯಾಗಿ ನೀಡುತ್ತಿದ್ದಾರೆ.

### ಸಾಧನೆ ಹಾದಿಯ ಹೆಜ್ಜೆ ಗುರುತು..!

◆ ನಮ್ಮಲ್ಲಿ ತರಬೇತಿ ಪಡೆದವರ ಬೈಕಿ ಶಿಕ್ಷಕರ ಅರ್ಹತಾ ಪರೀಕ್ಷೆ ಅಂದರೆ ಟಿಇಟಿಯಲ್ಲಿ 68 ಸಿಇಟಿ ಯಲ್ಲಿ ಐದು ವಿದ್ಯಾರ್ಥಿಗಳು ಶಿಕ್ಷಕ ಹುದ್ದೆಗೆ ಆಯ್ಕೆಯಾಗಿದ್ದಾರೆ. ಇದೊಂದು ಸಂತಸದ ಸಂಗತಿ. ನಮ್ಮ ಶ್ರಮ ಫಲ ನೀಡುತ್ತಿದೆ ಸಮಾಜಕ್ಕೆ ಸಣ್ಣ ಪ್ರಮಾಣದಲ್ಲಾದರೂ ಕೊಡುಗೆ ನೀಡುತ್ತಿರುವ ಸಮಾಧಾನ ಇದೆ ಎಂದು ಹೇಳುತ್ತಾರೆ ಡಾ. ಮಿಲಿಂದ್.

◆ ಬಡವನಾಗಿ ಹುಟ್ಟಿರಬಹುದು ಆದರೆ ಬಡವನಾಗಿ ಸಾಯಬಾರದು, ಜೀವನದಲ್ಲಿ ಧನಾತ್ಮಕ ಆಲೋಚನೆಗಳನ್ನು ಹೊಂದಬೇಕು ಎಂಬ ಧೋರಣೆಯನ್ನು ಬೆಳೆಸಿಕೊಂಡ ವ್ಯಕ್ತಿ ಸಮಾಜಮುಖಿ ಕಾರ್ಯ ಮಾಡಲು ಸಾಧ್ಯ. ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಧನಾತ್ಮಕ ಆಲೋಚನೆ, ದಿನಪತ್ರಿಕೆಗಳನ್ನು ಓದುವ ಹವ್ಯಾಸ ಇರಬೇಕು. ಸ್ಪರ್ಧಾ ಕಿರಣ ಕರಿಯರ್ ಅಕಾಡೆಮಿಯಲ್ಲಿ ಇವೆಲ್ಲವನ್ನೂ ಬೆಳೆಸಲು ವ್ಯಕ್ತಿತ್ವ ವಿಕಸನ ತರಬೇತಿ ಸೇರಿದಂತೆ ಹಲವು ಕಾರ್ಯಕ್ರಮಗಳಿವೆ.

◆ ಬಾಲ್ಕಿಯಲ್ಲಿ ಸ್ಪರ್ಧಾತ್ಮಕ ಪರೀಕ್ಷೆಯ ವಾತಾವರಣವನ್ನು ನಿರ್ಮಿಸಬೇಕು. ಇಲ್ಲಿನ ವಿದ್ಯಾರ್ಥಿಗಳು ಹೆಚ್ಚು ಹೆಚ್ಚು ಸರ್ಕಾರಿ ಹುದ್ದೆ ಪಡೆಯುವಂತಾಗಬೇಕು ಎನ್ನುವುದು ನನ್ನ ಜೀವನದ ಮಹತ್ವಾಕಾಂಕ್ಷೆಯ ಗುರಿ.

◆ ಬಡವನಾಗಿ ಹುಟ್ಟಿರಬಹುದು ಆದರೆ ಬಡವನಾಗಿ ಸಾಯಬಾರದು, ಜೀವನದಲ್ಲಿ ಧನಾತ್ಮಕ ಆಲೋಚನೆಗಳನ್ನು ಹೊಂದಬೇಕು ಎಂಬ ಧೋರಣೆಯನ್ನು ಬೆಳೆಸಿಕೊಂಡ ವ್ಯಕ್ತಿ ಸಮಾಜಮುಖಿ ಕಾರ್ಯ ಮಾಡಲು ಸಾಧ್ಯ. ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಧನಾತ್ಮಕ ಆಲೋಚನೆ, ದಿನಪತ್ರಿಕೆಗಳನ್ನು ಓದುವ ಹವ್ಯಾಸ ಇರಬೇಕು. ಸ್ಪರ್ಧಾ ಕಿರಣ ಕರಿಯರ್ ಅಕಾಡೆಮಿಯಲ್ಲಿ ಇವೆಲ್ಲವನ್ನೂ ಬೆಳೆಸಲು ವ್ಯಕ್ತಿತ್ವ ವಿಕಸನ ತರಬೇತಿ ಸೇರಿದಂತೆ ಹಲವು ಕಾರ್ಯಕ್ರಮಗಳಿವೆ.

◆ ಬಾಲ್ಕಿಯಲ್ಲಿ ಸ್ಪರ್ಧಾತ್ಮಕ ಪರೀಕ್ಷೆಯ ವಾತಾವರಣವನ್ನು ನಿರ್ಮಿಸಬೇಕು. ಇಲ್ಲಿನ ವಿದ್ಯಾರ್ಥಿಗಳು ಹೆಚ್ಚು ಹೆಚ್ಚು ಸರ್ಕಾರಿ ಹುದ್ದೆ ಪಡೆಯುವಂತಾಗಬೇಕು ಎನ್ನುವುದು ನನ್ನ ಜೀವನದ ಮಹತ್ವಾಕಾಂಕ್ಷೆಯ ಗುರಿ.

### ಸ್ಪರ್ಧಾ ಕಿರಣ ಕರಿಯರ್ ರೂವಾರಿಯ ತಿರುಳು

- ಸ್ಪರ್ಧಾರ್ಥಿಗಳಿಗೆ ನಿರಂತರವಾಗಿ ಉಚಿತ ಜ್ಞಾನ ದಾಸೋಹಕ್ಕೆ ಒತ್ತು
- ಬಾಲ್ಕಿಯಲ್ಲಿ ಸ್ಪರ್ಧಾತ್ಮಕ ಪರೀಕ್ಷೆಯ ವಾತಾವರಣವನ್ನು ನಿರ್ಮಿಸಬೇಕು
- ಬಡವನಾಗಿ ಹುಟ್ಟಿರಬಹುದು ಆದರೆ ಬಡವನಾಗಿ ಸಾಯಬಾರದು ಬದುಕಲ್ಲಿ ಧನಾತ್ಮಕ ಆಲೋಚನೆ ಇರಿಸಿಕೊಳ್ಳಬೇಕೆಂಬ ಉದಾತ್ತ ಧೋರಣೆ
- ಇಲ್ಲಿ ತರಬೇತಿ ಪಡೆದವರ ಬೈಕಿ ಶಿಕ್ಷಕರ ಅರ್ಹತಾ ಪರೀಕ್ಷೆ ಅಂದರೆ ಟಿಇಟಿಯಲ್ಲಿ 68, ಸಿಇಟಿಯಲ್ಲಿ 5 ವಿದ್ಯಾರ್ಥಿಗಳು ಶಿಕ್ಷಕ ಹುದ್ದೆಗೆ ಆಯ್ಕೆ



**ಡಾ. ಮಿಲಿಂದ್ ಮುಳೆ ಅವರ ನಿಸ್ವಾರ್ಥ, ಪ್ರಮಾಣಿಕ ಕಾರ್ಯ–ಕ್ಕೆ ಇಡೀ ನಾಡಿನ ಸಾರ್ವಜನಿಕರಿಂದ ಮೆಚ್ಚುಗೆ**

### ಕೊಡುಗೈ ದಾನಿಯ ಝಲಕ್

1. ಸತ್ಯಕಲಾ ರೂರಲ್ ಎಜುಕೇಶನ್ ಟ್ರಸ್ಟ್ (ರಿ) ಸ್ಥಾಪಿಸಿ ಗಾಂಧಿ ಜಯಂತಿ ಎಂದು 2003 ರಲ್ಲಿ ತಾನು ಓದಿದ ಭಾಟಸಾಂಗವಿ ಸರಕಾರಿ ಪ್ರೌಢಶಾಲೆಗೆ ಒಂದು ಲಕ್ಷ ರೂಪಾಯಿ ಮೌಲ್ಯದ ಪುಸ್ತಕದ ಕೊಡುಗೆ.
2. ಸರಕಾರಿ ಪಿಯು ಕಾಲೇಜಿನ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ವ್ಯಕ್ತಿತ್ವ ವಿಕಸನ, ಸ್ಪರ್ಧಾತ್ಮಕ ಪುಸ್ತಕ ಕೊಡುಗೆ.

ನಮ್ಮಲ್ಲಿ ತರಬೇತಿ ಪಡೆದವರ ಬೈಕಿ ಶಿಕ್ಷಕರ ಅರ್ಹತಾ ಪರೀಕ್ಷೆ ಅಂದರೆ ಟಿಇಟಿಯಲ್ಲಿ 68 ಸಿಇಟಿ ಯಲ್ಲಿ ಐದು ವಿದ್ಯಾರ್ಥಿಗಳು ಶಿಕ್ಷಕ ಹುದ್ದೆಗೆ ಆಯ್ಕೆಯಾಗಿದ್ದಾರೆ. ಇದೊಂದು ಸಂತಸದ ಸಂಗತಿ. ನಮ್ಮ ಶ್ರಮ ಫಲ ನೀಡುತ್ತಿದೆ ಸಮಾಜಕ್ಕೆ ಸಣ್ಣ ಪ್ರಮಾಣದಲ್ಲಾದರೂ ಕೊಡುಗೆ ನೀಡುತ್ತಿರುವ ಸಮಾಧಾನ ಇದೆ.

–ಡಾ. ಮಿಲಿಂದ್ ಮುಳೆ, ಶಿಕ್ಷಣ ತಜ್ಞ
ಸ್ಪರ್ಧಾ ಕಿರಣ ಕರಿಯರ್ ಅಕಾಡೆಮಿಯ ರೂವಾರಿ.

ಸ್ಪರ್ಧಾರ್ಥಿಗಳಿಗೆ ನಿರಂತರವಾಗಿ ಜ್ಞಾನ ದಾಸೋಹ ಉಚಿತವಾಗಿ ನೀಡಲಾಗುತ್ತಿದೆ. ಪಿಯುಸಿ ಹಂತದಿಂದಲೇ ಸ್ಪರ್ಧಾತ್ಮಕ ಪರೀಕ್ಷೆಗಳ ಅರಿವು, ಅವುಗಳನ್ನು ಎದುರಿಸುವ ಬಗ್ಗೆ ತಿಳಿದುಕೊಳ್ಳಿ. 24/7 ಗ್ರಂಥಾಲಯದ ಸೌಲಭ್ಯವಿದೆ ಬಳಸಿಕೊಳ್ಳಿ. ಪರೀಕ್ಷೆಯ ಬಗ್ಗೆ ಹಾಗೂ ವಿದ್ಯಾಭ್ಯಾಸಕ್ಕೆ ಯಾವುದೇ ಸಮಸ್ಯೆಗಳಿದ್ದರೆ ನೇರವಾಗಿ ನನ್ನನ್ನು ಭೇಟಿ ಮಾಡಿ. ಇಲ್ಲವೇ ನನ್ನ ಮೊಬೈಲ್ ಸಂಖ್ಯೆ ಹೀಗಿದೆ: 9731295156

–ಡಾ. ಮಿಲಿಂದ್ ಮುಳೆ, ಶಿಕ್ಷಣ ತಜ್ಞ, ಸ್ಪರ್ಧಾ ಕಿರಣ ಕರಿಯರ್ ಅಕಾಡೆಮಿಯ ರೂವಾರಿ






# ವೈವಿಧ್ಯತೆಯ ನಡುವೆ ಬಾಳುವ ಪಾಠ ಭೋದಿಸಿದ ಗುರು

## ನೈತಿಕತೆ ಇಲ್ಲದ ಅಹಂಕಾರದ ಭಾಷೆಯಲ್ಲಿ ಕೋಮುವಾದ ಮಾತಾಡುವ ಬಗ್ಗೆ ನಾರಾಯಣಗುರುಗಳು ಎಚ್ಚರಿಸಿದ್ದರು: ಸಿ.ಎಂ

- ಮಲ್ಲಮ್ಮ ನುಡಿ ವಾರ್ತೆ ಕೇರಳ (ತಿರುವನಂತಪುರ):



ವೈವಿಧ್ಯತೆಯ ನಡುವೆ ಮನುಷ್ಯರು ಒಗ್ಗಟ್ಟಾಗಿ ಬಾಳುವ ಸಹೃದಯಿ ಭಾರತ ನಿರ್ಮಾಣ ನಾರಾಯಣಗುರುಗಳ ಗುರಿಯಾಗಿತ್ತು.ನೈತಿಕತೆ ಇಲ್ಲದ ಅಹಂಕಾರದ ಭಾಷೆಯಲ್ಲಿ ಕೋಮುವಾದ ಮಾತಾಡುವ ಬಗ್ಗೆ ನಾರಾಯಣಗುರುಗಳು ಎಚ್ಚರಿಸಿದ್ದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಭಿಪ್ರಾಯಪಟ್ಟರು.

ಕೇರಳ ತಿರುವನಂತಪುರದ 93ನೇ ಶಿವಗಿರಿ ತೀರ್ಥಯಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದರು.

ನಾರಾಯಣ ಗುರುಗಳು ಕೇವಲ ಒಬ್ಬ ಸಂತ ಮಾತ್ರ ಆಗಿರಲಿಲ್ಲ. ಸಮಾನತೆ ಮತ್ತು ನೈತಿಕತೆಯ ಚಳವಳಿಯಾಗಿದ್ದರು. ಹೀಗಾಗಿ ಶಿವಗಿರಿ ತೀರ್ಥಯಾತ್ರೆ ಕೂಡ ಚಳವಳಿಯ ಸ್ವರೂಪ ಪಡೆದು ಜಾತಿ ದೌರ್ಜನ್ಯವನ್ನು ಅಳಿಸಿ ಸಮಾಜವನ್ನು ಸಾಮಾಜಿಕ ನ್ಯಾಯದ ಕಡೆ ಮುನ್ನಡೆಸಬೇಕು ಎಂದರು.

ಇದೇ ನಾರಾಯಣ ಗುರುಗಳು ಕಂಡ ಭಾರತ. ಇದೇ ಶಿವಗಿರಿ ಪ್ರತಿಪಾದಿಸುವ ಭಾರತ. ಇಂಥಾ ಭಾರತವನ್ನು ನಾವು ಒಟ್ಟಾಗಿ ಗಟ್ಟಿಗೊಳಿಸಬೇಕಿದೆ ಎಂದರು. ಶಿವಗಿರಿ ಮಠವು ಕೇವಲ ಒಂದು ಯಾತ್ರಾ ಕೇಂದ್ರವಾಗಿರದೇ,ಭಾರತದ ಆತ್ಮಸಾಕ್ಷಿಯ ನೈತಿಕ ವಿಶ್ವವಿದ್ಯಾಲಯವಾಗಿದೆ. ಈ ಪವಿತ್ರ ಕ್ಷೇತ್ರದಲ್ಲಿ ನಿಮ್ಮ ಮುಂದೆ ನಿಂತಿರುವುದು ನನ್ನ ಸೌಭಾಗ್ಯ. ಇದು ಬೌದ್ಧಿಕ ಮತ್ತು ವಿಶ್ವದ ಮಾನವಕುಲದ ಚಳವಳಿಯಾಗಿದೆ. ಇದು ಭೌಗೋಳಿಕವಲ್ಲ, ನೈತಿಕತೆಯ ಪ್ರವಾಸ ಎಂದು ಮೆಚ್ಚುಗೆ ಸೂಚಿಸಿದರು. ರಾಜಕಾರಣ ನೈತಿಕತೆಯಿಂದ ದೂರವಾಗುತ್ತಾ, ಧರ್ಮವು ನೈತಿಕತೆಗಿಂತ ಹೆಚ್ಚಾಗಿ ಅಧಿಕಾರಕ್ಕಾಗಿ ಆಯುಧವಾಗುತ್ತಿರುವ ಅಪಾಯದ ದಿನಗಳಲ್ಲಿ ಶಿವಗಿರಿ ಒಂದು ನೈತಿಕ ಚಳವಳಿಯಾಗಿ ನಮಗೆ ಆದರ್ಶವಾಗಬೇಕು.ಶಿವಗಿರಿ ಮಠ 'ಜೀವಂತ ಸಂವಿಧಾನ'ದಂತೆ ಕಾರ್ಯನಿರ್ವಹಿಸುತ್ತಿದೆ ಎಂದರು.

ಶಿವಗಿರಿ ತೀರ್ಥಯಾತ್ರೆಯು ಭಾರತದ ಮೂಲ 'ಕೋಮು-ವಿರೋಧಿ' ಯೋಜನೆಯಾಗಿದೆ. ಸಮಾಜವು ಕೃತಕವಾಗಿ ಸೃಷ್ಟಿಸಲ್ಪಟ್ಟ ದ್ವೇಷದಿಂದ ಧ್ರುವೀಕರಣಗೊಳ್ಳುತ್ತಿರುವಾಗ, ಶಿವಗಿರಿಯು ಪ್ರಾಬಲ್ಯಕ್ಕಿಂತ 'ಸಂವಾದ'ವನ್ನು, ಶ್ರೇಣೀಕೃತ ವ್ಯವಸ್ಥೆಗಿಂತ 'ಸಮಾನತೆ'ಯನ್ನು ಮತ್ತು ಸಾಂಕೇತಿಕತೆಗಿಂತ 'ನೈತಿಕತೆ'ಯನ್ನು ಎತ್ತಿ ಹಿಡಿಯುತ್ತದೆ ಎಂದರು.

"ಆಧುನಿಕ ರಾಷ್ಟ್ರ ನಿರ್ಮಾಣದಲ್ಲಿ ಶಿವಗಿರಿ ತೀರ್ಥಯಾತ್ರೆಯ ಪಾತ್ರ" ಎನ್ನುವುದು ಕೇವಲ ಸಾಂಕೇತಿಕವಲ್ಲ. ಇದು ಇಂದಿನ ತುರ್ತು ಅಗತ್ಯ ಮತ್ತು ನಮ್ಮ ಕಾಲದ ಬಿಕ್ಕಟ್ಟುಗಳಿಗೆ ನೇರ ಉತ್ತರ. ಇದರ ಹಿಂದಿರುವ ಶಕ್ತಿ ಶ್ರೀ ನಾರಾಯಣ ಗುರುಗಳು ಕೇವಲ ಒಬ್ಬ ಸಂತನಲ್ಲ, ಬದಲಾಗಿ ಭಾರತದ ಶ್ರೇಷ್ಠ ಸಾಮಾಜಿಕ ದಾರ್ಶನಿಕರಲ್ಲಿ ಒಬ್ಬರು.ನಾರಾಯಣ ಗುರುಗಳು ಅನ್ಯಾಯದ ಚೌಕಟ್ಟಿನೊಳಗೆ ಸುಧಾರಣೆಯನ್ನು ಬಯಸಲಿಲ್ಲ. ಅವರು ಅನ್ಯಾಯದ ಬೇರುಗಳನ್ನೇ ಕಿತ್ತೆಸೆದರು.ಕೇರಳವು ಜಾತಿ ತಾರತಮ್ಯ, ಮೌಢ್ಯಾಚರಣೆ ಮತ್ತು ಅಸಮಾನತೆಯಿಂದ ಉಸಿರುಗಟ್ಟುತ್ತಿದ್ದಾಗ, "ಮಾನವಕುಲಕ್ಕೆ ಒಂದೇ ಜಾತಿ, ಒಂದೇ ಧರ್ಮ, ಒಬ್ಬನೇ ದೇವರು" ಎಂಬ ಸತ್ಯವನ್ನು ಘೋಷಿಸಿದರು.ಇದು ಕೇವಲ ಕಾವ್ಯಾತ್ಮಕ ಹೇಳಿಕೆಯಲ್ಲ. ಇದು ಜಾತಿ ತಾರತಮ್ಯ ಸೋಂಕಿನ ಮನುಸ್ಮೃತಿ ಆಧಾರಿತ ಶ್ರೇಣೀಕೃತ ವ್ಯವಸ್ಥೆ, ಧಾರ್ಮಿಕ ಏಕಸ್ವಾಮ್ಯತೆ ಮತ್ತು ಸಾಮಾಜಿಕ ಬಹಿಷ್ಕಾರಕ್ಕೆ ನೀಡಿದ ನೇರ ಸವಾಲಾಗಿತ್ತು ಎಂದರು.

***ಹೀಗೆ ನಾರಾಯಣಗುರುಗಳು ಆಧ್ಯಾತ್ಮಿಕತೆ, ವೈಚಾರಿಕತೆ, ಮಾನವತಾವಾದ ಮತ್ತು ಸಾಮಾಜಿಕ ನ್ಯಾಯವನ್ನು ಬೆಸೆಯುವ ಮೂಲಕ ಆಧುನಿಕ ಭಾರತದ ಸೈದ್ಧಾಂತಿಕ ಹಾದಿಯನ್ನು ನಿರ್ಮಿಸಿದರು.**

***ಜಾತಿ ಮಾಯವಾಗಿಲ್ಲ, ಅದು ತನ್ನ ಸ್ವರೂಪವನ್ನು ಬದಲಿಸಿಕೊಂಡಿದೆ. ಕೋಮುವಾದವು ಈಗ ಶ್ರೇಣೀಕೃತ ವ್ಯವಸ್ಥೆಯ ಬಗ್ಗೆ ಬಹಿರಂಗವಾಗಿ ಮಾತನಾಡುವುದಿಲ್ಲ; ಅದು ಗುರುತು, ಭಯ ಮತ್ತು ಅಹಂಕಾರದ ಭಾಷೆಯಲ್ಲಿ ಮಾತನಾಡುತ್ತಿದೆ.**

***ನಾರಾಯಣ ಗುರುಗಳು ಈ ಅಪಾಯವನ್ನು ಮುನ್ಸೂಚಿಸಿದ್ದರು. ಧರ್ಮವು ಕರುಣೆ ಮತ್ತು ನೈತಿಕತೆಯಿಂದ ದೂರವಾದಾಗ, ಅದು ಕೇವಲ ಅಧಿಕಾರ ಚಲಾಯಿಸುವ ಸಾಧನವಾಗುತ್ತದೆ ಎಂದು ಅವರು ಅರ್ಥಮಾಡಿಕೊಂಡಿದ್ದರು.**

***ಧಾರ್ಮಿಕ ಬಹುಸಂಖ್ಯಾತವಾದ, ನ್ಯಾಯ ಮತ್ತು ಸಮಾನತೆಯಿಲ್ಲದ ಯಾವುದೇ ರಾಷ್ಟ್ರೀಯತೆ ಅಥವಾ ರಾಜಕೀಯವು ಮನುಕುಲಕ್ಕೆ ಶಾಪ ಎಂದು ಗುರುಗಳು ಎಚ್ಚರಿಸಿದ್ದರು.**

***ಸಾಮಾಜಿಕ ನ್ಯಾಯವಿಲ್ಲದ ರಾಷ್ಟ್ರ ನಿರ್ಮಾಣವು ಕೇವಲ ಆಡಳಿತಾತ್ಮಕ ವ್ಯವಸ್ಥೆಯಾಗಲಿದೆಯೇ ಹೊರತು ಪ್ರಜಾಪ್ರಭುತ್ವವಾಗುವುದಿಲ್ಲ ಎಂದ ಅವರ ಸಂದೇಶ ಸಾರಿದ್ದರು.**

***ಕೇರಳದಲ್ಲಿ ನೆಲೆಸಿದ್ದರೂ, ನಾರಾಯಣ ಗುರುಗಳ ಪ್ರಭಾವವು ಭಾಷೆ ಮತ್ತು ರಾಜ್ಯದ ಗಡಿಗಳನ್ನು ಮೀರಿ ಕರ್ನಾಟಕದ ಕರಾವಳಿ, ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಮತ್ತು ಮಲೆನಾಡು ಭಾಗಗಳಲ್ಲಿ ಸುಧಾರಣಾ ಚಳವಳಿಗಳನ್ನು ರೂಪಿಸಿತು.**

***ಕರ್ನಾಟಕ ಕರಾವಳಿಯ ಬಿಲ್ಲವ, ಈಡಿಗ, ಮೊಗವೀರ ಮತ್ತು ಇತರ ಹಿಂದುಳಿದ ಸಮುದಾಯಗಳು ನಾರಾಯಣ ಗುರುಗಳ ಸ್ವಾಭಿಮಾನ, ಶಿಕ್ಷಣ ಮತ್ತು ಸಂಘಟನೆಯ ಕರೆಯಿಂದ ಸ್ಫೂರ್ತಿ ಪಡೆದವು. ಇದು ಈ ಪ್ರದೇಶದಲ್ಲಿ ಕೋಮು ಶಕ್ತಿಗಳ ವಿಭಜನೆಯ ಪ್ರಯತ್ನಗಳಿಗೆ ಬಲವಾದ ಪ್ರತಿರೋಧವನ್ನು ಒಡ್ಡಲು ಪ್ರಮುಖ ಕಾರಣವಾಗಿದೆ.**

***ಬಸವಣ್ಣನವರ 'ಕಾಯಕ' ತತ್ವವು ನಾರಾಯಣ ಗುರುಗಳ ಆರ್ಥಿಕ ಸ್ವಾವಲಂಬನೆಯ ಚಿಂತನೆಯಲ್ಲಿ ಪ್ರತಿಧ್ವನಿಸುತ್ತದೆ.**

**ಬಸವಣ್ಣನವರು ವಚನಗಳ ಮೂಲಕ ಭಕ್ತಿಯನ್ನು ಜನಸಾಮಾನ್ಯರ ಕೈಗೆ ನಿಲುಕುವಂತೆ ಮಾಡಿದರೆ, ನಾರಾಯಣ ಗುರುಗಳು ದೈವತ್ವವನ್ನೇ ಎಲ್ಲರಿಗೂ ಹಂಚುವ ಮೂಲಕ ಮನುಷ್ಯರು ಹುಟ್ಟಿನಿಂದ ಮೇಲುಕೀಳಲ್ಲ, ಅಸ್ತಿತ್ವದಿಂದ ಸಮಾನರು ಎಂದು ಸಾರಿದರು.**

***ಅವರಿಬ್ಬರೂ ಧರ್ಮವನ್ನು ಬಹಿಷ್ಕಾರದ ಸಾಧನದಿಂದ ಸಾಮಾಜಿಕ ನ್ಯಾಯದ ಭಾಷೆಯನ್ನಾಗಿ ಪರಿವರ್ತಿಸಿದರು.**

***ಕರ್ನಾಟಕ ಸರ್ಕಾರವು ಸಮಾನತೆ ಮತ್ತು ಮಾನವಘನತೆಯನ್ನು ಆದ್ಯತೆಯಾಗಿಸುವ ಮೂಲಕ ನಾರಾಯಣ ಗುರುಗಳ ಆದರ್ಶಗಳನ್ನು ಮುಂದುವರಿಸುತ್ತಿದೆ.**

***2016ರಲ್ಲಿ 'ನಾರಾಯಣ ಗುರು ಜಯಂತಿ'ಯನ್ನು ಘೋಷಿಸುವ ಮೂಲಕ, ಅವರ ಸಾಮಾಜಿಕ ಸಾಮರಸ್ಯದ ಸಂದೇಶವು ಕರ್ನಾಟಕದ ಮೂಲೆ ಮೂಲೆಗೂ ತಲುಪುವಂತೆ ಮಾಡಲಾಗುತ್ತಿದೆ.**

***ಅವರ ಬರವಣಿಗೆಗಳನ್ನು ಕನ್ನಡಕ್ಕೆ ಅನುವಾದಿಸಿ ಪ್ರಕಟಿಸಲಾಗುತ್ತಿದೆ, ಈ ಮೂಲಕ ನಾವು ಜ್ಞಾನವನ್ನು ಎಲ್ಲರಿಗೂ ಮುಕ್ತಗೊಳಿಸಿ, ಜನರಲ್ಲಿ ವಿಮರ್ಶಾತ್ಮಕ ಪ್ರಜ್ಞೆಯನ್ನು ಜಾಗೃತಗೊಳಿಸಲಾಗುತ್ತಿದೆ.**

***ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ 'ಬ್ರಹ್ಮಶ್ರೀ ನಾರಾಯಣ ಗುರು ಅಧ್ಯಯನ ಪೀಠ'ವನ್ನು ಸ್ಥಾಪಿಸುವ ಮೂಲಕ ಅವರ ಪರಂಪರೆಯನ್ನು ಗಟ್ಟಿಗೊಳಿಸಲು 2013 ರಲ್ಲಿ ?1 ಕೋಟಿ ಮತ್ತು 2023 ರಲ್ಲಿ ಹೆಚ್ಚುವರಿ ?22 ಕೋಟಿ ಅನುದಾನವನ್ನು ನೀಡಲಾಗಿದೆ.**

***ಹುಟ್ಟು ಎಂದಿಗೂ ಮನುಷ್ಯನ ಭವಿಷ್ಯವನ್ನು ನಿರ್ಧರಿಸಬಾರದು ಎಂಬ ಗುರುಗಳ ನಂಬಿಕೆಯಲ್ಲಿ ಇಟ್ಟಿರುವ ಈ ಹೆಜ್ಜೆಗಳು, ಸಾಮಾಜಿಕ ನ್ಯಾಯದ ಕುರಿತ ಕರ್ನಾಟಕದ ಬದ್ಧತೆಯನ್ನು ಪ್ರತಿಬಿಂಬಿಸುತ್ತವೆ.**

***ನಾನು ಧಾರ್ಮಿಕ ಮುಖಂಡರಿಗೆ ದ್ವೇಷದ ವಿರುದ್ಧ ಧ್ವನಿಯೆತ್ತಲು ಹಾಗೂ ವಿದ್ವಾಂಸರಿಗೆ ನಾರಾಯಣ ಗುರುಗಳ ತತ್ವಜ್ಞಾನವನ್ನು ತರಗತಿಗಳಿಗೆ ಕೊಂಡೊಯ್ಯಲು ಕರೆ ನೀಡುತ್ತೇನೆ. ಯುವಜನತೆಯು ಅನ್ಯಾಯವನ್ನು ಪ್ರಶ್ನಿಸಲು ಮತ್ತು ರಾಜಕೀಯ ಸಂಸ್ಥೆಗಳು ನೈತಿಕ ಕರೆ ನೀಡುತ್ತೇನೆ.**

## ಜನವರಿ 2 ಕ್ಕೆ ಮನೆಗಳ ವಿತರಣೆ

- ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:



ಯಲಹಂಕ ಕೋಗಿಲು ಬಡಾವಣೆಯಲ್ಲಿ ಅಕ್ರಮ ಮನೆಗಳ ತೆರವು ಹಿನ್ನೆಲೆಯಲ್ಲಿ ಅರ್ಹ ಸಂತ್ರಸ್ತರಿಗೆ ಬಿಬಿಎಂಪಿ ಹಾಗೂ ರಾಜೀವ್ ಗಾಂಧಿ ವಸತಿ ನಿಗಮ ವತಿಯಿಂದ ಪರ್ಯಾಯವಾಗಿ ಶಾಶ್ವತ ವಸತಿ ವ್ಯವಸ್ಥೆ ಮಾಡಿಕೊಡುವ ಬಗ್ಗೆ ದಾಖಲೆ ಪರಿಶೀಲನೆ ಮುಂದುವರಿದಿದೆ.

ಈ ವಿಚಾರದಲ್ಲಿ ಅರ್ಹ ರಿಗೆ ಮಾತ್ರ ವಸತಿ ವ್ಯವಸ್ಥೆ ಮಾಡಿಕೊಡುವುದು ಸರ್ಕಾರದ ಉದ್ದೇಶ. ಹೀಗಾಗಿ ತರಾತುರಿ ಮಾಡದೆ ಸಮಗ್ರವಾಗಿ ದಾಖಲೆ ಪರಿಶೀಲನೆ ಮಾಡಲು ಮುಖ್ಯಮಂತ್ರಿಯವರು ಸೂಚನೆ ನೀಡಿದ್ದು, ಕಂದಾಯ ಇಲಾಖೆ ಹಾಗೂ ಬಿಬಿಎಂಪಿ ಅಧಿಕಾರಿಗಳು ಆ ಕಾರ್ಯದಲ್ಲಿ ನಿರತರಾಗಿದ್ದಾರೆ.

ಈ ಹಿನ್ನೆಲೆಯಲ್ಲಿ ಜನವರಿ ಒಂದರಂದು ಉದ್ದೇಶಿಸಲಾಗಿದ್ದ ಮನೆಗಳ ವಿತರಣೆ ಜನವರಿ 2 ಕ್ಕೆ ಮುಂದೂಡಿಕೆ ಮಾಡಲಾಗಿದೆ ಎಂದು ವಸತಿ ಸಚಿವ ಜಮೀರ್ ಅಹಮದ್ ಖಾನ್ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

## ಉದ್ದೇಶಿತ ಕಾಮಗಾರಿಯ ಸ್ಥಳ ಪರಿಶೀಲನೆ ನಡೆಸಿದ ಬಳ್ಳಾರಿ ಲೋಕಸಭಾ ಸದಸ್ಯ ಈ.ತುಕಾರಾಂ

- ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:



ಬಳ್ಳಾರಿ ನಗರದಲ್ಲಿ ಹೆಚ್ಚುತ್ತಿರುವ ಸಂಚಾರ ದಟ್ಟಣೆ ನಿವಾರಣೆ ಹಾಗೂ ಸಾರ್ವಜನಿಕ-ರಿಗೆ ಸುಗಮ,ಸುರಕ್ಷಿತ ಸಂಚಾರ ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ಬಳ್ಳಾರಿ ಸಂಸದರಾದ ಈ.ತುಕಾರಾಮ್ ಅವರು ಸುಧಾಕ್ರಾಸ್ ಮೂಲಕ ಅಲ್ಲಿಪುರದವರೆಗೆ ನಾಲ್ಕು ಲೇನ್ (ಫೋರ್ ಲೈನ್) ರಸ್ತೆ ನಿರ್ಮಾಣ ಯೋಜನೆ ಸಂಬಂಧ ಸ್ಥಳ ಪರಿಶೀಲನೆ ನಡೆಸಿದರು.ಸಂದಭ-ರ್ದಲ್ಲಿ ರಾಷ್ಟ್ರೀಯ ಸುಧಾಕ್ರಾಸ್‌ನಿಂದ ಅಲ್ಲಿಪುರದವರೆಗೆ ಹೆದ್ದಾರಿ ಪ್ರಾಧಿಕಾರದ ಅಧಿಕಾ-ರಿಗಳೊಂದಿಗೆ ಸಂಸದರು ಸುದೀರ್ಘ ಚರ್ಚೆ ನಡೆಸಿ, ಹಳೆಯ ರಾಷ್ಟ್ರೀಯ ಹೆದ್ದಾರಿ 67 ಮಾರ್ಗದ ಅಗಲೀಕರಣ ಹಾಗೂ ಸಮಗ್ರ ಅಭಿವೃದ್ಧಿ ಬಗ್ಗೆ ಮಾಹಿತಿ ಪಡೆದರು. ನಗರ ವ್ಯಾಪ್ತಿಯಲ್ಲಿ ದಿನೇದಿನೇ ವಾಹನ ಸಂಚಾರ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಈ ಮಾರ್ಗದಲ್ಲಿ ನಿರಂತರ ಸಂಚಾರ ದಟ್ಟಣೆ ಉಂಟಾಗುತ್ತಿದ್ದು. ಸಾರ್ವಜನಿಕರು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ ಎಂದು ಅವರು ಅಧಿಕಾರಿಗಳಿಗೆ ವಿವರಿಸಿದರು.ನಾಲ್ಕು ಲೇನ್ ರಸ್ತೆ ನಿರ್ಮಾಣವಾದಲ್ಲಿ, ನಗರ ಪ್ರವೇಶ ಹಾಗೂ ನಿರ್ಗಮನ ಸುಗಮವಾಗುವುದರ ಅಪಘಾತಗಳ ಜೊತೆಗೆ, ಪ್ರಮಾಣ ಗಣನೀಯವಾಗಿ ಕಡಿಮೆಯಾಗಲಿದೆ ಎಂದು ಸಂಸದ ತುಕಾರಾಮ್ ಅಭಿಪ್ರಾಯಪಟ್ಟರು. ಅಲ್ಲದೆ, ಕೈಗಾ-ರಿಕಾ ಪ್ರದೇಶಗಳು, ವ್ಯಾಪಾರ ವಲಯಗಳು ಹಾಗೂ ಸುತ್ತಮುತ್ತಲ ಗ್ರಾಮಗಳಿಗೆ ಈ ಮಾರ್ಗವು ಪ್ರಮುಖ ಸಂಪರ್ಕ ಸಾಧನವಾಗಿರುವುದರಿಂದ, ನಾಲ್ಕು ಲೈನ್ ರಸ್ತೆ ನಿರ್ಮಾಣವು ನಗರಾಭಿವೃದ್ಧಿಗೆ ಹೊಸ ವೇಗ ನೀಡಲಿದೆ ಎಂದು ಸಂಸದರು ತಿಳಿಸಿದರು..ಮಾತನಾಡಿದ ಸಂಸದ ತುಕಾರಾಮ್ ಅವರು. "ಬಳ್ಳಾರಿ ಅಭಿವೃದ್ಧಿಯನ್ನು ನಗರದ ಸುಧಾಕ್ರಾಸ್‌ನಿಂದ ಗಮನದಲ್ಲಿಟ್ಟುಕೊಂಡು ಸಂಚಾರ ಮೂಲಸೌಕರ್ಯ ಬಲಪಡಿಸುವುದು ಅಗತ್ಯವಾಗಿದೆ. ಅಲ್ಲಿಪುರ ಮಾರ್ಗದಲ್ಲಿ ನಾಲ್ಕುಪಥದ ರಸ್ತೆ ನಿರ್ಮಾಣಕ್ಕೆ ಕೇಂದ್ರ ಸರ್ಕಾರದ ಮಟ್ಟದಲ್ಲಿ ಅಗತ್ಯ ಅನುದಾನ ಮತ್ತು ಅನುಮೋದನೆ ಪಡೆಯಲು ಎಲ್ಲ ಪ್ರಯತ್ನಗಳನ್ನು ಮಾಡಲಾಗುವುದು ಎಂದು ಭರವಸೆ ನೀಡಿದರು.ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಯೋಜನೆಯ ಸಾಧ್ಯತೆಗಳ ಬಗ್ಗೆ ಪ್ರಾಥಮಿಕ ಸಮೀಕ್ಷೆ ನಡೆಸಲಾಗಿದ್ದು, ಶೀಘ್ರದಲ್ಲೇ ವಿವರವಾದ ವರದಿ ತಯಾರಿಸಿ. ಕೇಂದ್ರ ಕಳುಹಿಸುವ ಮೂಲಕ ಸರ್ಕಾರಕ್ಕೆ ರಸ್ತೆ ಕಾಮಗಾರಿ ಮಾಡಲು ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಲ್ಲಂ ಪ್ರಶಾಂತ್ ಸೇ-ರಿದಂತೆ ಇನ್ನಿತರರು ಉಪಸ್ಥಿತರಿದ್ದರು.



ಗೋಕರ್ಣ : ಇಲ್ಲಿಯ ಮುಖ್ಯ ಕಡಲ ತೀರದಲ್ಲಿ 2025ರ ಕೊನೆಯ ಸೂರ್ಯಾಸ್ತದ ಸೊಬಗನ್ನು ಸವಿಯಲು ಆಗಮಿಸಿದ ಪ್ರವಾಸಿಗರು ಸೂರ್ಯನ ಸೊಬಗನ್ನು ತಮ್ಮ ಕ್ಯಾಮೆರಾದಲ್ಲಿ ಸೆರೆಹಿಡಿಯಲು ತವಕಿಸುತ್ತಿರುವುದು.

## ಗುಣಮಟ್ಟದ ಶಿಕ್ಷಣ ಪಡೆದು ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಿ



- ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:

ವಿದ್ಯಾರ್ಥಿಗಳು ಎಲ್ಲಾ ರಂಗಗಳಲ್ಲಿಯೂ ಸಾಧನೆ ಮಾಡುವುದರೊಂದಿಗೆ ಗುಣಮಟ್ಟದ ಶಿಕ್ಷಣ ಪಡೆದು ಮಾನವೀಯ, ನೈತಿಕ ಮೌಲ್ಯಗಳನ್ನು ಬೆಳೆಸಿಕೊಂಡು ಜೀವನದಲ್ಲಿ ಮುಂದೆ ಬರಬೇಕು ಎಂದು ಅರಣ್ಯ, ಪರಿಸರ ಹಾಗು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅಭಿಪ್ರಾಯಪಟ್ಟರು.

ಪಟ್ಟಣದ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಭಾಲ್ಕಿ ವತಿಯಿಂದ ಬುಧವಾರ ಆಯೋಜಿಸಿದ್ದ 2025-26ನೇ ಸಾಲಿನ ತಾಲೂಕು ಮಟ್ಟದ ಪ್ರಾಥಮಿಕ ಹಾಗು ಪ್ರೌಢಶಾಲಾ ಮಕ್ಕಳ ಪ್ರತಿಭಾ ಕಾರಂಜಿ/ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಗ್ರಾಮೀಣ ಭಾಗದ ವಿದ್ಯಾರ್ಥಿಗಳಲ್ಲಿ ಸಾಕಷ್ಟು ಪ್ರತಿಭೆ ಇರುತ್ತದೆ, ಆದರೆ ಆ ಪ್ರತಿಭೆ ಗುರುತಿಸಲು ಸೂಕ್ತ ವೇದಿಕೆ ಸಿಗುತ್ತಿರಲಿಲ್ಲ. ಈ ನಿಟ್ಟಿನಲ್ಲಿ ಬುನಾದಿ ಮಟ್ಟದಲ್ಲಿಯೇ ಗ್ರಾಮೀಣ ಭಾಗದ ಮಕ್ಕಳ ಪ್ರತಿಭೆಯನ್ನು ಗುರುತಿಸುವ ನಿಟ್ಟಿನಲ್ಲಿ 2002 ರಲ್ಲಿ ಸರ್ಕಾರ ಪ್ರತಿಭಾ ಕಾರಂಜಿ/ಕಲೋತ್ಸವ ಕಾರ್ಯಕ್ರಮ ಜಾರಿಗೆ ತಂದಿತ್ತು. ಅಂದಿನಿಂದ ಇಂದಿನವರೆಗೆ ಗ್ರಾಮೀಣ ಮಕ್ಕಳಿಗೆ ಸೂಕ್ತ ವೇದಿಕೆ ಸಿಗುತ್ತಿದ್ದು, ಇಲ್ಲಿಯ ಮಕ್ಕಳು ಜಿಲ್ಲಾ, ರಾಜ್ಯ ಮಟ್ಟದಲ್ಲಿ ಗುರುತಿಸಿಕೊಳ್ಳುತ್ತಿದ್ದಾರೆ ಎಂದರು. ವಿದ್ಯಾರ್ಥಿಗಳಲ್ಲಿ ಶಿಸ್ತು, ಸಂಯಮ, ನಿಷ್ಠೆ ಇರಬೇಕು, ಶಿಸ್ತಿನಿಂದ ಗುಣಮಟ್ಟದ ಶಿಕ್ಷಣ ಪಡೆದು ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳುವುದು ವಿದ್ಯಾರ್ಥಿಗಳ ಜವಾಬ್ದಾರಿಯಾಗಿದೆ. ಈ ಭಾಗದ ಶಿಕ್ಷಣಕ್ಕಾಗಿ ನಮ್ಮ ಸರ್ಕಾರ ಸಾಕಷ್ಟು ಅನುದಾನ ನೀಡುತ್ತಲಿದೆ. ಪ್ರಸ್ತುತ ಸಾಲಿನಲ್ಲಿ ಕ.ಕ ಭಾಗಕ್ಕೆ 125 ರಿಂದ 150 ಕೋಟಿ ರೂ ಶಿಕ್ಷಣಕ್ಕಾಗಿ ನೀಡಲಾಗಿದೆ. ನನ್ನ ಎರಡುವರೆ ವರ್ಷಗಳ ಅವಧಿಯಲ್ಲಿ ಶಿಕ್ಷಣಕ್ಕೆ 500 ಕೋಟಿ ರೂ. ಅನುದಾನ ನೀಡಿ, ಇಲ್ಲಿಯ ಶಿಕ್ಷಣದ ಮೂಲಭೂತ ಸೌಕರ್ಯಗಳನ್ನು ತಕ್ಕ ಮಟ್ಟಿಗೆ ಸರಿಪಡಿಸಲಾಗಿದೆ. ಶೈಕ್ಷಣಿಕ

> “ಭಾಲ್ಕಿಯ ಸರ್ಕಾರಿ ಶಾಲೆಯ ವಿದ್ಯಾರ್ಥಿಯಾಗಿ ಇಂದು ನಾನು ರಾಜ್ಯದ ಮಂತ್ರಿಯಾಗಿದ್ದೇನೆ, ಇಲ್ಲಿಯ ಮಕ್ಕಳು ಯಾವ ಮಟ್ಟಕ್ಕೆ ಬೆಳೆಯುತ್ತಾರೆಯೋ ತಿಳಿದಿಲ್ಲ. ಹೀಗಾಗಿ ಮಕ್ಕಳ ಪ್ರತಿಭೆಗೆ ತಕ್ಕ ಅವಕಾಶ ನೀಡಿ ಅವರ ಏಳ್ಗೆಗಾಗಿ ಎಲ್ಲರೂ ಶ್ರಮಿಸಬೇಕು. ಅಲ್ಲದೇ ಶಾಲಾ ಆವರಣದಲ್ಲಿ ಗಿಡ ಮರಗಳನ್ನು ಬೆಳೆಸಿ ಪರಿಸರ ರಕ್ಷಣೆಗೆ ಎಲ್ಲರೂ ಸಹಕರಿಬೇಕು.
> **- ಈಶ್ವರ ಖಂಡ್ರೆ, ಜಿಲ್ಲಾ ಉಸ್ತುವಾರಿ ಸಚಿವರು. ಬೀದರ್**

ಕಾರ್ಯಗಳಿಗಾಗಿ ಮೂಲಭೂತ ಸೌಕರ್ಯಗಳಿಗೆ ಯಾವುದೇ ರೀತಿಯ ಕುಂದು ಕೊರತೆಯಾಗದಂತೆ ನೋಡಿಕೊಳ್ಳಲಾಗಿದೆ. ವಿದ್ಯಾರ್ಥಿಗಳು ತಮ್ಮ ಆರೋಗ್ಯಕ್ಕೆ ಹೆಚ್ಚಿನ ಗಮನ ಕೊಟ್ಟು ಚಾರಿತ್ರ ವಂತರಾಗಿ ಬಾಳಬೇಕು ಎಂದು ಹೇಳಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಹೆಚ್.ಜಿ.ಸುರೇಶ ಅಧ್ಯಕ್ಷತೆ ವಹಿಸಿದ್ದರು. ಇದೇವೇಳೆ ಸರ್ಕಾರಿ ನೌಕರರ ಸಂಘದ 2026ನೇ ಸಾಲಿನ ನೂತನ ಕ್ಯಾಲಂಡರ್ ಬಿಡುಗಡೆ ಮಾಡಿದರು. ಅಲ್ಲದೇ ವಿದ್ಯಾರ್ಥಿಗಳಿಗೆ ಸಚಿವ ಈಶ್ವರ ಖಂಡ್ರೆ ಬಿಸಿಯೂಟ ಬಡಿಸಿದರು.

ಕಾರ್ಯಕ್ರಮದಲ್ಲಿ ಸಹಾಯಕ ಆಯುಕ್ತ ಪ್ರಕಾಶ ಕುದರಿ, ಡಯಟ್ ಪ್ರಾಂಶುಪಾಲ ಗುರುಪ್ರಸಾದ, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ, ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ, ಪುರಸಭೆ ಮುಖ್ಯಾಧಿಕಾರಿ ಸಂಗಮೇಶ ಕಾರಬಾರಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸೂರ್ಯಕಾಂತ ಸುಂ-ಟೆ, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ದತ್ತು ಕಾಟಕರ, ಸಂಜಯಕುಮಾರ, ಹಣಮಂತ ಕಾರಾಮುಂಗೆ, ಭೀಮಣ್ಣ ಕೊಂಕಣೆ, ಅಶೋಕ ತಾಂಬೋಳೆ, ಉತ್ತಮ ಸಿಂಧೆ, ಕ್ಷೇತ್ರ ಸಮನ್ವಯಾಧಿಕಾರಿ ರಾಜಕುಮಾರ ಜೊಳದಪಕೆ, ರೋಹಿದಾಸ ರಾಠೋಡ, ಮಲ್ಲಿನಾಥ ಸಜ್ಜನ್, ಶಿವಕುಮಾರ ಫುಲಾರಿ, ಪ್ರತಿಭಾ ಕಾರಂಜಿ ನೋಡಲ್ ಅಧಿಕಾರಿ ಕುಸುಮಕುಮಾರಿ ರೆಡ್ಡಿ, ಸಿಆರ್‌ಪಿ ಮಲ್ಲಿಕಾರ್ಜುನ ಕನ್ನಾಳೆ, ಮಲ್ಲಿನಾಥ ಸಜ್ಜನ್, ಬಿಆರ್‌ಪಿ ಚೇತನಾ ಸಂತೋಷಕುಮಾರ ಚನಶೆಟ್ಟಿ ಉಪಸ್ಥಿತರಿದ್ದರು. ಹಣಮಂತ ಕಾರಾಮುಂಗೆ ಸ್ವಾಗತಿಸಿದರು. ದೀಪಕ ಥಮಕೆ ನಿರೂಪಿಸಿದರು.

## ಗುಣಮಟ್ಟದ ಶಿಕ್ಷಣ ಪಡೆದು ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಿ

- ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:



ವಿದ್ಯಾರ್ಥಿಗಳು ಎಲ್ಲಾ ರಂಗಗಳಲ್ಲಿಯೂ ಸಾಧನೆ ಮಾಡುವುದರೊಂದಿಗೆ ಗುಣಮಟ್ಟದ ಶಿಕ್ಷಣ ಪಡೆದು ಮಾನವೀಯ, ನೈತಿಕ ಮೌಲ್ಯಗಳನ್ನು ಬೆಳೆಸಿಕೊಂಡು ಜೀವನದಲ್ಲಿ ಮುಂದೆ ಬರಬೇಕು ಎಂದು ಅರಣ್ಯ, ಪರಿಸರ ಹಾಗು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅಭಿಪ್ರಾಯಪಟ್ಟರು.

ಪಟ್ಟಣದ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಭಾಲ್ಕಿ ವತಿಯಿಂದ ಬುಧವಾರ ಆಯೋಜಿಸಿದ್ದ 2025-26ನೇ ಸಾಲಿನ ತಾಲೂಕು ಮಟ್ಟದ ಪ್ರಾಥಮಿಕ ಹಾಗು ಪ್ರೌಢಶಾಲಾ ಮಕ್ಕಳ ಪ್ರತಿಭಾ ಕಾರಂಜಿ/ ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಗ್ರಾಮೀಣ ಭಾಗದ ವಿದ್ಯಾರ್ಥಿಗಳಲ್ಲಿ ಸಾಕಷ್ಟು ಪ್ರತಿಭೆ ಇರುತ್ತದೆ, ಆದರೆ ಆ ಪ್ರತಿಭೆ ಗುರುತಿಸಲು ಸೂಕ್ತ ವೇದಿಕೆ ಸಿಗುತ್ತಿರಲಿಲ್ಲ. ಈ ನಿಟ್ಟಿನಲ್ಲಿ ಬುನಾದಿ ಮಟ್ಟದಲ್ಲಿಯೇ ಗ್ರಾಮೀಣ ಭಾಗದ ಮಕ್ಕಳ ಪ್ರತಿಭೆಯನ್ನು ಗುರುತಿಸುವ ನಿಟ್ಟಿನಲ್ಲಿ 2002 ರಲ್ಲಿ ಸರ್ಕಾರ ಪ್ರತಿಭಾ ಕಾರಂಜಿ/ಕಲೋತ್ಸವ ಕಾರ್ಯಕ್ರಮ ಜಾರಿಗೆ ತಂದಿತ್ತು. ಅಂದಿನಿಂದ ಇಂದಿನವರೆಗೆ ಗ್ರಾಮೀಣ ಮಕ್ಕಳಿಗೆ ಸೂಕ್ತ ವೇದಿಕೆ ಸಿಗುತ್ತಿದ್ದು, ಇಲ್ಲಿಯ ಮಕ್ಕಳು ಜಿಲ್ಲಾ, ರಾಜ್ಯ ಮಟ್ಟದಲ್ಲಿ ಗುರುತಿಸಿಕೊಳ್ಳುತ್ತಿದ್ದಾರೆ ಎಂದರು. ವಿದ್ಯಾರ್ಥಿಗಳಲ್ಲಿ ಶಿಸ್ತು, ಸಂಯಮ, ನಿಷ್ಠೆ ಇರಬೇಕು, ಶಿಸ್ತಿನಿಂದ ಗುಣಮಟ್ಟದ ಶಿಕ್ಷಣ ಪಡೆದು ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳುವುದು ವಿದ್ಯಾರ್ಥಿಗಳ ಜವಾಬ್ದಾರಿಯಾಗಿದೆ. ಈ ಭಾಗದ ಶಿಕ್ಷಣಕ್ಕಾಗಿ ನಮ್ಮ ಸರ್ಕಾರ ಸಾಕಷ್ಟು ಅನುದಾನ ನೀಡುತ್ತಲಿದೆ. ಪ್ರಸ್ತುತ ಸಾಲಿನಲ್ಲಿ ಕ.ಕ ಭಾಗಕ್ಕೆ 125 ರಿಂದ 150 ಕೋಟಿ ರೂ ಶಿಕ್ಷಣಕ್ಕಾಗಿ ನೀಡಲಾಗಿದೆ. ನನ್ನ ಎರಡುವರೆ ವರ್ಷಗಳ ಅವಧಿಯಲ್ಲಿ ಶಿಕ್ಷಣಕ್ಕೆ 500 ಕೋಟಿ ರೂ. ಅನುದಾನ ನೀಡಿ, ಇಲ್ಲಿಯ ಶಿಕ್ಷಣದ ಮೂಲಭೂತ ಸೌಕರ್ಯಗಳನ್ನು ತಕ್ಕ ಮಟ್ಟಿಗೆ ಸರಿಪಡಿಸಲಾಗಿದೆ. ಶೈಕ್ಷಣಿಕ ಕಾರ್ಯಗಳಿಗಾಗಿ ಮೂಲಭೂತ ಸೌಕರ್ಯಗಳಿಗೆ ಯಾವುದೇ ರೀತಿಯ ಕುಂದು ಕೊರತೆಯಾಗದಂತೆ ನೋಡಿಕೊಳ್ಳಲಾಗಿದೆ. ವಿದ್ಯಾರ್ಥಿಗಳು ತಮ್ಮ ಆರೋಗ್ಯಕ್ಕೆ ಹೆಚ್ಚಿನ ಗಮನ ಕೊಟ್ಟು ಚಾರಿತ್ರ ವಂತರಾಗಿ ಬಾಳಬೇಕು ಎಂದು ಹೇಳಿದರು.

> ಭಾಲ್ಕಿಯ ಸರ್ಕಾರಿ ಶಾಲೆಯ ವಿದ್ಯಾರ್ಥಿಯಾಗಿ ಇಂದು ನಾನು ರಾಜ್ಯದ ಮಂತ್ರಿಯಾಗಿದ್ದೇನೆ, ಇಲ್ಲಿಯ ಮಕ್ಕಳು ಯಾವ ಮಟ್ಟಕ್ಕೆ ಬೆಳೆಯುತ್ತಾರೆಯೋ ತಿಳಿದಿಲ್ಲ. ಹೀಗಾಗಿ ಮಕ್ಕಳ ಪ್ರತಿಭೆಗೆ ತಕ್ಕ ಅವಕಾಶ ನೀಡಿ ಅವರ ಏಳ್ಗೆಗಾಗಿ ಎಲ್ಲರೂ ಶ್ರಮಿಸಬೇಕು. ಅಲ್ಲದೇ ಶಾಲಾ ಆವರಣದಲ್ಲಿ ಗಿಡ ಮರಗಳನ್ನು ಬೆಳೆಸಿ ಪರಿಸರ ರಕ್ಷಣೆಗೆ ಎಲ್ಲರೂ ಸಹಕರಿಬೇಕು.
> ಈಶ್ವರ ಖಂಡ್ರೆ, ಜಿಲ್ಲಾ ಉಸ್ತುವಾರಿ ಸಚಿವರು. ಬೀದರ್

ಕ್ಷೇತ್ರಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಹೆಚ್.ಜಿ.ಸುರೇಶ ಅಧ್ಯಕ್ಷತೆ ವಹಿಸಿದ್ದರು. ಇದೇವೇಳೆ ಸರ್ಕಾರಿ ನೌಕರರ ಸಂಘದ 2026ನೇ ಸಾಲಿನ ನೂತನ ಕ್ಯಾಲಂಡರ್ ಬಿಡುಗಡೆ ಮಾಡಿದರು. ಅಲ್ಲದೇ ವಿದ್ಯಾರ್ಥಿಗಳಿಗೆ ಸಚಿವ ಈಶ್ವರ ಖಂಡ್ರೆ ಬಿಸಿಯೂಟ ಬಡಿಸಿದರು.

ಕಾರ್ಯಕ್ರಮದಲ್ಲಿ ಸಹಾಯಕ ಆಯುಕ್ತ ಪ್ರಕಾಶ ಕುದರಿ, ಡಯಟ್ ಪ್ರಾಂಶುಪಾಲ ಗುರುಪ್ರಸಾದ, ತಾ.ಪಂ.ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ, ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ, ಪುರಸಭೆ ಮುಖ್ಯಾಧಿಕಾರಿ ಸಂಗಮೇಶ ಕಾರಬಾರಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸೂರ್ಯಕಾಂತ ಸುಂಟೆ, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ದತ್ತು ಕಾಟಕರ, ಸಂಜಯಕುಮಾರ,

ಹಣಮಂತ ಕಾರಾಮುಂಗೆ, ಭೀಮಣ್ಣ ಕೊಂಕಣೆ, ಅಶೋಕ ತಾಂಬೋಳೆ, ಉತ್ತಮ ಸಿಂಧೆ, ಕ್ಷೇತ್ರ ಸಮನ್ವಯಾಧಿಕಾರಿ ರಾಜಕುಮಾರ ಜೊಳದಪಕೆ, ರೋಹಿದಾಸ ರಾಠೋಡ, ಮಲ್ಲಿನಾಥ ಸಜ್ಜನ್, ಶಿವಕುಮಾರ ಫುಲಾರಿ, ಪ್ರತಿಭಾ ಕಾರಂಜಿ ನೋಡಲ್ ಅಧಿಕಾರಿ ಕುಸುಮಕುಮಾರಿ ರೆಡ್ಡಿ, ಸಿಆರ್‌ಪಿ ಮಲ್ಲಿಕಾರ್ಜುನ ಕನ್ನಾಳೆ, ಮಲ್ಲಿನಾಥ ಸಜ್ಜನ್, ಬಿಆರ್‌ಪಿ ಚೇತನಾ ಸಂತೋಷಕುಮಾರ ಚನಶೆಟ್ಟಿ ಉಪಸ್ಥಿತರಿದ್ದರು. ಹಣಮಂತ ಕಾರಾಮುಂಗೆ ಸ್ವಾಗತಿಸಿದರು. ದೀಪಕ ಥಮಕೆ ನಿರೂಪಿಸಿದರು. ವ್ಯವಸ್ಥಾಪಕ ಶಿವಕುಮಾರ ಫುಲಾರಿ ವಂದಿಸಿದರು.

# ಜಯಂತಿಗಳನ್ನು ವಿಜೃಂಭಣೆಯಿಂದ ಆಚರಿಸಿ: ಎಡಿಸಿ



ಬೀದರ,ಡಿಸೆಂಬರ್.31(ಕರ್ನಾಟಕ ವಾರ್ತೆ):– ಇದೇ ಜ.1 ರಂದು ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣ ದಿನಾಚರಣೆ, ಜ.14 ರಂದು ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಹಾಗೂ ಜ.19 ರಂದು ಮಹಾಯೋಗಿ ವೇಮನ ಜಯಂತಿ ಹಾಗೂ ಜ.21 ರಂದು ಅಂಬೀಗರ ಚೌಡಯ್ಯ

ಜಯಂತಿಗಳನ್ನು ಕಳೆದ ವರ್ಷದಂತೆ ಈ ವರ್ಷವು ಎಲ್ಲರೂ ಸೇರಿ ವಿಜೃಂಭಣೆಯಿಂದ ಆಚರಿಸೋಣ ಎಂದು ಬೀದರ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಕರಾಳೆ ಹೇಳಿದರು.

ಅವರು ಬುಧವಾರ ಬೀದರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಮರಣ ದಿನಾಚರಣೆ, ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ, ಮಹಾಯೋಗಿ ವೇಮನ ಜಯಂತಿ ಹಾಗೂ ಅಂಬೀಗರ ಚೌಡಯ್ಯ ಜಯಂತಿಗಳ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜ.1 ರಂದು ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಮರಣ ದಿನಾಚರಣೆ, ಜ.14 ರಂದು ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಹಾಗೂ ಜ.19 ರಂದು ಮಹಾಯೋಗಿ ವೇಮನ ಜಯಂತಿ ಹಾಗೂ ಜ.21 ರಂದು ಅಂಬೀಗರ ಚೌಡಯ್ಯ

ಜಯಂತಿಗಳನ್ನು ಜಿಲ್ಲೆಯ ಸರಕಾರಿ/ಅರೆಸರಕಾರಿ/ಅನುದಾನಿತ/ಅನುದಾನ ರಹಿತ ಶಾಲಾ ಕಾಲೇಜುಗಳು/ನಿಗಮ/ಮಂಡಳಿ ಮತ್ತು ಇತರೆ ಸರ್ಕಾರದ ಸ್ವಾಮ್ಯದ ಕಚೇರಿಗಳಲ್ಲಿ ಮಹನೀಯರ ಭಾವಚಿತ್ರಗೆ ಪೂಜೆ ಸಲ್ಲಿಸುವ ಮೂಲಕ ಆಚರಿಸಲು ತೀರ್ಮಾನಿಸಲಾಯಿತು.

ಈ ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಸಿಂಧೆ, ಜಿಲ್ಲಾ ಮಟ್ಟದ ಅಧಿಕಾರಿಗಳು, ಅಂಬೀಗರ ಚೌಡಯ್ಯ ಸಮಾಜದ ಅಧ್ಯಕ್ಷ ಜಗನ್ನಾಥ ಜಮಾದರ, ಪದಾಧಿಕಾರಿಗಳಾದ

ಸುನೀಲ ಭಾವಿಕಟ್ಟಿ, ಮಾರುತಿ ಮಾಸ್ಟರ್, ವೇಮನ ಸಮಾಜದ ಅಧ್ಯಕ್ಷ ಶ್ರೀಕಾಂತ ರೆಡ್ಡಿ ಹಾಗೂ ಪದಾಧಿಕಾರಿಗಳು, ವಿಶ್ವಕರ್ಮ ಸಮಾಜದ ಮುಖಂಡರಾದ ಪ್ರಶಾಂತ ಹಾಗೂ ಪದಾಧಿಕಾರಿಗಳು ಹಾಗೂ ಶಿವಯೋಗಿ ಸಿದ್ಧರಾಮೇಶ್ವರ ಸಮಾಜದ

ಜಿಲ್ಲಾಧ್ಯಕ್ಷ ಮಾಣಿಕರಾವ ವಾಡೇಕರ, ಪದಾಧಿಕಾರಿಗಳಾದ ವೆಂಕಟರಾವ ಸಿಂದೆ, ಗಿರೀಶ್ ವಡೇಯರ, ಗಣೇಶ ಭೋವಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸಿದ್ಧರಾಮಯ್ಯ ಜ, 3ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಜನವರಿ 03 ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಅಂದು ಮಧ್ಯಾಹ್ನ 12 ಗಂಟೆಗೆ ಬೆಂಗಳೂರಿನ ಹೆಚ್‌ಎಎಲ್ ವಿಮಾನನಿಲ್ದಾಣದಿಂದ ನಿರ್ಗಮಿಸಿ, ಬಳ್ಳಾರಿ ಜಿಲ್ಲೆಯ ತೋರಣಗಲ್ಲು ಏರಸ್ಟ್ರಿಪಗೆ 12.50ಕ್ಕೆ ಆಗಮಿಸುವರು. ಜಿಂದಾಲನಿಂದ 1.30ಕ್ಕೆ ಹೊರಟು 2 ಗಂಟೆಗೆ ಸಿಂಧನೂರಿನ ಸರ್ಕ್ಯೂಟ್ ಹೌಸ್ ಹತ್ತಿರದ ಹೆಲಿಪ್ಯಾಡಗೆ ಆಗಮಿಸುವರು. ಮಧ್ಯಾಹ್ನ 2 ಗಂಟೆ ನಂತರ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ.

ಮಧ್ಯಾಹ್ನ 3 ಗಂಟೆಗೆ ಸಿಂಧನೂರ ಸರ್ಕ್ಯೂಟ್ ಹೌಸ್ ಹತ್ತಿರದ ಹೆಲಿಪ್ಯಾಡನಿಂದ ನಿರ್ಗಮಿಸಿ, 3.30ಕ್ಕೆ ಸಿಂಧನೂರು ತಾಲ್ಲೂಕಿನ ಸೋಮಲಾಪುರ ಗ್ರಾಮದ ಶ್ರೀ ಅಂಬಾಮಠದ ಆವರಣದಲ್ಲಿನ ಹೆಲಿಪ್ಯಾಡಗೆ ಆಗಮಿಸಿ, ಅಂಬಾಮಠದ ಆವರಣದಲ್ಲಿ ಸಿಂಧನೂರ ತಾಲೂಕಾಡಳಿತ, ತಾಲ್ಲೂಕು ಪಂಚಾಯತ್, ಧಾರ್ಮಿಕ ದತ್ತಿ ಇಲಾಖೆ ಹಾಗೂ ಶ್ರೀ ಅಂಬಾದೇವಿ ವ್ಯವಸ್ಥಾಪನಾ ಸಮಿತಿಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಿರುವ

ಶ್ರೀ ಅಂಬಾ ಮಹೋತ್ಸವ-2026ರ ಜಾತ್ರಾ ಮಹೋತ್ಸವ, ಶ್ರೀ ಅಂಬಾದೇವಿ ಮಹಾರಥೋತ್ಸವ ಮತ್ತು ಜಂಬೂ ಸವಾರಿಗೆ ಚಾಲನೆ ಹಾಗೂ ಸಿಂಧನೂರು ವಿಧಾನಸಭಾ ಕ್ಷೇತ್ರದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಲೋಕಾರ್ಪಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ.

ಸಂಜೆ 5 ಗಂಟೆಗೆ ಸೋಮಲಾಪುರ ಗ್ರಾಮದ ಶ್ರೀ ಅಂಬಾಮಠದ ಆವರಣದ ಹೆಲಿಪ್ಯಾಡನಿಂದ ನಿರ್ಗಮಿಸಿ,

5.30ಕ್ಕೆ ಬಳ್ಳಾರಿ ಜಿಲ್ಲೆಯ ತೋರಣಗಲ್ಲು ಏರಸ್ಟ್ರಿಪಗೆ ತೆರಳಿ, ಅಲ್ಲಿಂದ ವಿಶೇಷ ವಿಮಾನದ ಮೂಲಕ ಬೆಂಗಳೂರಿನತ್ತ ಪ್ರಯಾಣ ಬೆಳೆಸುವರು ಎಂದು ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿಗಳಾದ ಕೆ.ಚಿರಂಜೀವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸತ್ಯಾಗ್ರಹ ಸ್ಮಾರಕ ವಿದ್ಯಾಲಯ ಶೆಟಗೇರಿ



ಅಂಕೋಲಾ: ನಮ್ಮ ಶಾಲೆಯಲ್ಲಿ 63ನೇಯ ವಾರ್ಷಿಕೋತ್ಸವ ನಡೆಯಿತು. ಈ ಸ್ನೇಹಸಮ್ಮೇಲನವು ಹೈಸ್ಕೂಲಿನ ವಿದ್ಯಾರ್ಥಿನೀಯರ ಸ್ವಾಗತಗೀತೆಯೊಂದಿಗೆ ಪ್ರಾರಂಭವಾಯಿತು. ಈ ಸಮ್ಮೇಲನದ ಅಧ್ಯಕ್ಷತೆಯನ್ನು ನಮ್ಮ ಶಾಲೆಯ ಹಳೆವಿದ್ಯಾರ್ಥಿಯಾದ ಶ್ರೀ ಆರ್‌ವಿ.ನಾಯಕ. ನಿವೃತ್ತ ಎಂ.ಎಂ.ಎಲ್ ಅಧಿಕಾರಿಗಳು, ಬೆಲೆಕೇರಿ, ಅಂಕೋಲಾ ಅವರು ಮಾತನಾಡಿ ಮಕ್ಕಳಲ್ಲಿ ಕ್ರಿಯಾತ್ಮಕವಾದ ಚಟುವಟಿಕೆಗಳು ಬೆಳೆಯಬೇಕು ಅದಕ್ಕೆ ಪೂರಕವಾದ ವಾತಾವರಣವನ್ನು ಶಾಲೆಯವರು ನಿರ್ಮಿಸಿದ್ದಾರೆ. ಜೀವನದಲ್ಲಿ ಛಲ ಎಂಬುದು ಇರಬೇಕು ಅದಕ್ಕೆ ತಕ್ಕಂತೆ ಪ್ರಯತ್ನವನ್ನು ಆಗಬೇಕು, ಶ್ರೇಷ್ಠ ಮತ್ತು ಕನಿಷ್ಠ ಎಂಬ ಬೇಧ-ಭಾವವನ್ನು ದೂರ ಮಾಡಬೇಕು. ದೈಹಿಕ ಮತ್ತು ಮಾನಸಿಕವಾಗಿ ಆರೋಗ್ಯವಂತರಾದರೆ ಮಾತ್ರ ನಿರ್ಧರಿಸಿದ ಗುರಿ ಮುಟ್ಟಲು ಸಾಧ್ಯ ಅದಕ್ಕೆ ಪಾಲಕರು, ಶಿಕ್ಷಕರು ವಿದ್ಯಾರ್ಥಿಗಳಿಗೆ ಪ್ರೋತ್ಸಾಹಿಸಿದರಲ್ಲಿ ಉತ್ತಮ ಪ್ರಜೆಗಳಾಗುವದರಲ್ಲಿ ಸಂದೇಹವಿಲ್ಲವೆಂದು ಅಭಿಪ್ರಾಯಪಟ್ಟರು.

ಮುಖ್ಯ ಅತಿಥಿಯಾಗಿ ಆಗಮಿಸಿದ ಶ್ರೀ ನಾಗರಾಜಗೌಡ. ಹಿರಿಯ ಉಪನ್ಯಾಸಕರು, ಜಿಲ್ಲಾ ಶಿಕ್ಷಣ ತರಬೇತಿ ಸಂಸ್ಥೆ ಕುಮಟಾ(ಉ.ಕ) ಅವರು ಮಾತನಾಡಿ ಇಂದಿನ ವಿದ್ಯಾರ್ಥಿಗಳಿಗೆ ಶಿಕ್ಷಣವು ವಿದ್ಯಾರ್ಥಿಗಳು ಕಟ್ಟಿಕೊಂಡು ಬದುಕಿನ ಕನಸಿಗೆ ವಿದ್ಯಾರ್ಥಿಗಳು ಸದಾ-ಕಾಲ ಜಾಗೃತವಾಗಿದ್ದು ಅದನ್ನು ನನಸಾಗಿಸಲು ಅವಿರತ ಪ್ರಯತ್ನ ಪರಿಶ್ರಮ ನಿರಂತರವಾಗಿದ್ದರೆ ವ ಪಾತ್ರ ಯಶಸ್ಸು ದೊರಕಬಲ್ಲದು. ಸಾಧನೆಯೇ ನಮ್ಮ ಜೀವನದ ಗುರಿಯಾಗಿರಬೇಕು ಅಂತರಂಗದ ಆಸೆಗೆ ಪ್ರೋತ್ಸಾಹ ನೀಡಬೇಕು, ಮುಂದಿನ ಭವಿಷ್ಯದ ಬಗ್ಗೆ ತಂತ್ರಜ್ಞಾನದಿಂದ ಜ್ಞಾನ ಪಡೆಯಬೇಕು. ಸಮಾಜದ ಉತ್ತಮ ಪ್ರಜೆಯಾಗಿ ಬದುಕಿ ಎಂದು ಮಾರ್ಗದರ್ಶನ ನೀಡಿದರು.

ವೇದಿಕೆಯ ಮೇಲೆ ಶಿಕ್ಷಣ ಸಮಿತಿಯ ಕಾರ್ಯಾಧ್ಯಕ್ಷರಾದ ಶ್ರೀ ರಮಾನಂದ ಬಿ.ನಾಯಕ, ಉಪಸ್ಥಿತರಿದ್ದರು. ಮುಖ್ಯಾಧ್ಯಾಪಕರಾದ ಶ್ರೀ ಎನ್.ವಿರಾಕೊಡವರವರು ಅಧ್ಯಕ್ಷ ಮತ್ತು ಮುಖ್ಯ ಅತಿಥಿಗಳ ಪರಿಚಯ ಮಾಡಿ ಸ್ವಾಗತಿಸಿ ಶಾಲೆಯ ವಾರ್ಷಿಕ ವರದಿಯನ್ನು ಓದಿದರು. ಜಾಗೃತಿ ಹಸ್ತ ಪತ್ರಿಕೆಯನ್ನು ಶ್ರೀ ಆರ್‌ವಿ.ನಾಯಕ ಅನಾವರಣಗೊಳಿಸಿದರು, ಶ್ರೀ ನಾಗರಾಜಗೌಡ ಕಲಾಜ್ಯೋತಿ ಹಸ್ತಪತ್ರಿಕೆಯನ್ನು ಬಿಡುಗಡೆಗೊಳಿಸಿದರು.

ಬಹುಮಾನ ಇಟ್ಟವರ ಯಾದಿಯನ್ನು ಶ್ರೀಮತಿ ಶಾಂತಲಾ ಎನ್ ನಾಯಕ ಓದಿದರು. ಕುಮಾರ ಶ್ರವಣದೇವಿದಾಸ ನಾಯಕ, ಕುಮಾರಿ ಸ್ಮೃತಿ ಎಸ್. ನಾಯಕ, ಕು.ನಾಗವೇಣಿ ಟಿ, ಗೌಡ. ಕು.ಕೀರ್ತನಾ ಆರ್.ಆಗೇರ. ಕು.ಸಿಂಚನಾ ಎಸ್‌ಗೌಡ. ಇವರು ವಿವಿಧ ಸ್ಪರ್ಧೆಯಲ್ಲಿ ಬಹುಮಾನ ಪಡೆದ ವಿದ್ಯಾರ್ಥಿ/ನೀಯರ ಯಾದಿಯನ್ನು ವಾಚಿಸಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದ ಮುಖ್ಯಾಧ್ಯಾಪಕರಾದ ಶ್ರೀ ಎನ್.ವಿರಾಕೊಡವರವರು ಶಿಕ್ಷಣ ಸಮಿತಿಯ ಕಾರ್ಯಾಧ್ಯಕ್ಷರಾದ ಶ್ರೀ ರಮಾನಂದ ಬಿ.ನಾಯಕ ಹಾಗು ಅಧ್ಯಕ್ಷರು, ಅತಿಥಿಗಳು ಸನ್ಮಾನಿಸಿ ಗೌರವಿಸಿದರು. ಕಾರ್ಯಕ್ರಮ ನಿರ್ವಹಣೆಯನ್ನು ಶಿಕ್ಷಕರಾದ ಶ್ರೀ ಎಂ.ಎಸ್‌ದೇವಾಡಿಗ ನಿರ್ವಹಿಸಿದರು. ಅಭಾರಮನ್ನಣೆಯಾ ಲಘುಮನರಂಜನಾ ಕಾರ್ಯಕ್ರಮವನ್ನು ಶಿಕ್ಷಕರಾದ ಶ್ರೀ ರಾಜು ಜಿ.ಶೆಡಗೇರಿ ನಡೆಸಿಕೊಟ್ಟರು. ಅಧ್ಯಕ್ಷರಾಗಿ ಆಗಮಿಸಿದ ಶ್ರೀ ಆರ್.ವಿ.ನಾಯಕ ಅವರು ಶಾಲೆಯ ಅಭಿವೃದ್ಧಿಗೆ 50,000ರೂಗಳನ್ನು ನೀಡಿದರು. ಅವರಿಗೆ ಅಭಿನಂದನೆಗಳು. ಕೊನೆಯಲ್ಲಿ ನಮ್ಮ ಹೈಸ್ಕೂಲಿನ ಯಕ್ಷಗಾನ ರಂಗಶಿಕ್ಷಣ ಕೇಂದ್ರದ ವಿದ್ಯಾರ್ಥಿಗಳಿಂದ "ಸಹದೇವದಿಗ್ವಿಜಯ" ಎಂಬ ಯಕ್ಷಗಾನವನ್ನು ಪ್ರದರ್ಶಿಸಲಾಯಿತು.

# ಅಂತಿಮ ಮತದಾರರ ಪಟ್ಟಿ ಪ್ರಕಟ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಕರ್ನಾಟಕ ವಿಧಾನಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಗೆ ಸಂಬಂಧಿಸಿದಂತೆ ಬಳ್ಳಾರಿ ನಗರ ವ್ಯಾಪ್ತಿಯ ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದೆ ಎಂದು 94-ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಯಾದ ಬಳ್ಳಾರಿ ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ ಅವರು ತಿಳಿಸಿದ್ದಾರೆ. ಅಂತಿಮ ಮತದಾರರ ಪ್ರತಿಯನ್ನು ತಿದ್ದುಪಡಿಗಳೊಂದಿಗೆ ಪ್ರಕಟಿಸಲಾಗಿದ್ದು, ಮಹಾನಗರ ಪಾಲಿಕೆಯ ಕಚೇರಿಯಲ್ಲಿ ಪರಿಶೀಲನೆಗೆ ಲಭ್ಯವಿದ್ದು, ಮತದಾರರು ಪರಿಶೀಲಿಸಿಕೊಳ್ಳಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೇಂದ್ರ ಪುರಸ್ಕೃತ ಯೋಜನೆಯಾದ ಅಮೃತ್ 2.0 ಅಭಿಯಾನದ ಅಮೃತ್ ಮಿತ್ರ ಕಾರ್ಯಕ್ರಮ ತಾಂತ್ರಿಕೇತರ ಚಟುವಟಿಕೆಯಡಿ ಪಾಲಿಕೆ ವ್ಯಾಪ್ತಿಯಲ್ಲಿ ಅನುಮೋದಿತ 19 ಪಾರ್ಕ್‌ಗಳನ್ನು ನಿರ್ವಹಣೆ ಮಾಡಲು ಡೇ-ನಲ್ಮ್ ಅಭಿಯಾನದಡಿ ಅರ್ಹ ಮಹಿಳಾ ಸ್ವಸಹಾಯ ಸಂಘಗಳಿಂದ ಆಸಕ್ತಿ ವ್ಯಕ್ತಪಡಿಸುವಿಕೆಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅರ್ಹ ಸ್ವಸಹಾಯ ಸಂಘದ ಸದಸ್ಯರು ಮಹಾನಗರ ಪಾಲಿಕೆಯ ವಲಯ ಕಚೇರಿ-2 ರಲ್ಲಿನ ಡೇ-ನಲ್ಮ್ ಶಾಖೆಯಿಂದ ನಿಗಧಿತ ನಮೂನೆಯ ಅರ್ಜಿ ಪಡೆದು ಭರ್ತಿ ಮಾಡಿ ಅಗತ್ಯ ದಾಖಲೆಗಳನ್ನು ಲಗತ್ತಿಸಿ ಜನವರಿ 14 ಸಂಜೆ 05.30 ರೊಳಗಾಗಿ ಮುಚ್ಚಿದ ಲಕೋಟೆಯಲ್ಲಿ ಮರಳಿ ಇದೇ ಶಾಖೆಗೆ ಸಲ್ಲಿಸಬೇಕು.

ಮಹಿಳಾ ಸ್ವಸಹಾಯ ಸಂಘಗಳು ಆಸಕ್ತಿಯುಳ್ಳ ಪಾರ್ಕ್‌ಗಳವಾರು ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಬಹುದು.ಸೂಚನೆ:

ಪಾಲಿಕೆ ವ್ಯಾಪ್ತಿಯ 19 ಪಾರ್ಕ್‌ಗಳ ವಿವರಗಳನ್ನು ವಲಯ ಕಚೇರಿ-02 ರಲ್ಲಿರುವ ಡೇ-ನಲ್ಮ್ ಶಾಖೆಯಿಂದ ಖುದ್ದಾಗಿ ಅಥವಾ ಪಾಲಿಕೆಯ ವೆಬ್‌ಸೈಟ್ www.ballaricity.mrc.gov.in ನಲ್ಲಿ ಪಡೆಯಬಹುದು.

ಹೆಚ್ಚಿನ ಮಾಹಿತಿಗಾಗಿ ಬಳ್ಳಾರಿ ಮಹಾನಗರ ಪಾಲಿಕೆ ಕಚೇರಿಗೆ ಸಂಪರ್ಕಿಸಬಹುದು ಎಂದು ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹರಾಜು ಪ್ರಕ್ರಿಯೆಗೆ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :**

ವಡಗೇರಾ ತಾಲೂಕಿನ ಹೈಯ್ಯಾಳ (ಬಿ) ಗ್ರಾಮದಲ್ಲಿ 2026ರ ಜನವರಿ 14 ರಿಂದ 22ರ ವರೆಗೆ ಶ್ರೀ ಹೈಯ್ಯಾಳಲಿಂಗೇಶ್ವರ ಜಾತ್ರೆಯಲ್ಲಿ ತೆಂಗಿನಕಾಯಿ ಮಾರಾಟ ಹರಾಜು ಪ್ರಕ್ರಿಯೆಗೆ ಆಹ್ವಾನಿಸಲಾಗಿದೆ ಎಂದು ವಡಗೇರಾ ತಹಸೀಲ್ದಾರ ಅವರು ತಿಳಿಸಿದ್ದಾರೆ.

ವಡಗೇರಾ ತಾಲೂಕಿನ ಹೈಯ್ಯಾಳ (ಬಿ) ಗ್ರಾಮದ ಶ್ರೀ ಹೈಯ್ಯಾಳಲಿಂಗೇಶ್ವರ ದೇವಸ್ಥಾನ ಜಾತ್ರೆಯಲ್ಲಿ ತೆಂಗಿನಕಾಯಿ ಹರಾಜು ಪ್ರಕ್ರಿಯೆ ಜರುಗಿಸಲು 2026ರ ಜನವರಿ 3 ರಂದು ಬೆಳಿಗ್ಗೆ 12 ಗಂಟೆಗೆ ತಹಸೀಲ್ ಕಾರ್ಯಾಲಯ ವಡಗೇರಾದಲ್ಲಿ ಏರ್ಪಡಿಸಿದೆ. ತಾವುಗಳು ಭಾಗವಹಿಸಬೇಕು, ಸರಿಯಾದ ಸಮಯಕ್ಕೆ ಹಾಜರಾಗಬೇಕು.

ಷರತ್ತುಗಳು : ಹರಾಜಿನಲ್ಲಿ ಭಾಗವಹಿಸುವವರು 25000 ರೂ.ಗಳ ಠೇವಣಿ ಇಟ್ಟು ಭಾಗವಹಿಸಬೇಕು, ಹರಾಜು ಆದ ನಂತರ 3 ದಿನಗಳಲ್ಲಿ ಹರಾಜಿನ ಪೂರ್ತಿ ಹಣವನ್ನು ತುಂಬತಕ್ಕದ್ದು, ತುಂಬಲು ತಪ್ಪಿದ್ದಲ್ಲಿ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಂಡು ಪುನಃ ಹರಾಜನ್ನು ನಡೆಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಸ್ತೆ ಸುರಕ್ಷತಾ ಜಾಗೃತಿ ಹೊಂದುವುದು ಮುಖ್ಯ: ಶೆಟ್ಟಿ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಸಾರ್ವಜನಿಕರು ರಸ್ತೆ ಸಂಚಾರ ನಿಯಮಗಳ ಅರಿವು, ರಸ್ತೆಗಳಲ್ಲಿ ಸುರಕ್ಷಿತ ಸಂಚಾರ ಕುರಿತು ಜಾಗೃತಿ ಹೊಂದಬೇಕು ಎಂದು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶಶಿಧರ ಶೆಟ್ಟಿ ಅವರು ಹೇಳಿದರು.

ಬುಧವಾರದಂದು ಎಲ್ಲಾ ಜಿಲ್ಲೆಗಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು, ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ವರ್ಚುವಲ್ ಮೂಲಕ ಏರ್ಪಡಿಸಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ಅಪಘಾತ ಪ್ರಕರಣಗಳನ್ನು ಕಡಿಮೆಗೊಳಿಸಲು ಮತ್ತು ರಸ್ತೆಗಳಲ್ಲಿ ಸುರಕ್ಷಿತವಾಗಿ ಸಂಚರಿಸುವ ಬಗ್ಗೆ ಜಾಗೃತಿ ಮೂಡಿಸಲು ರಾಜ್ಯಾದ್ಯಂತ ವಿವಿಧ ಇಲಾಖೆಗಳ ಸಹಭಾಗಿತ್ವದೊಂದಿಗೆ ಜ.01 ರಿಂದ 30 ರ ವರೆಗೆ ರಸ್ತೆ ಸುರಕ್ಷತಾ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಅವರು ತಿಳಿಸಿದರು.

ರಾಜ್ಯದಲ್ಲಿ ರಸ್ತೆ ಅಪಘಾತಗಳಿಂದಾಗಿ ಪ್ರತಿ ವರ್ಷ ಲಕ್ಷಾಂತರ ಜನರು ತಮ್ಮ ಪ್ರಾಣ ಕಳೆದುಕೊಳ್ಳುತ್ತಿದ್ದಾರೆ. ಅತಿವೇಗ, ಕುಡಿದು ವಾಹನ ಚಲಾಯಿಸುವುದು. ಹೆಲ್ಮೆಟ್ ಧರಿಸದೇ ವಾಹನ ಚಲಾಯಿಸುವುದು, ಸಂಚಾರ ನಿಯಮಗಳ ಉಲ್ಲಂಘನೆ, ಅಜಾಗರೂಕ ಚಾಲನೆ ಮತ್ತು ಅರಿವಿನ ಕೊರತೆ ಅಪಘಾತಗಳಿಗೆ ಪ್ರಮುಖ ಕಾರಣಗಳಾಗಿವೆ. ನಾಗರಿಕರಲ್ಲಿ ಜವಾಬ್ದಾರಿಯುತವಾದ ಅರಿವು ಮೂಡಿಸಲು ಈ ಅಭಿಯಾನದ ಉದ್ದೇಶವಾಗಿದೆ ಎಂದರು.

ವಿಶೇಷವಾಗಿ ಶಾಲಾ-ಕಾಲೇಜು ಮಕ್ಕಳಲ್ಲಿ ಸಂಚಾರ ನಿಯಮಗಳ ಕುರಿತು ಅರಿವು ಮೂಡಿಸಲಾಗುವುದು. 18 ವರ್ಷದೊಳಗಿನ ಮಕ್ಕಳು ವಾಹನಗಳನ್ನು ಚಲಾಯಿಸುತ್ತಿರುವುದು ಕಂಡುಬರುತ್ತಿದ್ದು, ವಾಹನ ನೀಡುವ ಪೋಷಕರ ಮೇಲೆ ಕ್ರಮ ಜರುಗಿಸಲಾಗುವುದು. ರಾಷ್ಟ್ರೀಯ ಹೆದ್ದಾರಿ ರಸ್ತೆಯಲ್ಲಿ ಕೆಟ್ಟುನಿಂತ ವಾಹನಗಳನ್ನು ರಸ್ತೆಯ ಮಧ್ಯದಲ್ಲಿ ನಿಲ್ಲಿಸದೇ ರಸ್ತೆ ಬದಿಗೆ ಹಾಕಿ ರಿಪೇರಿ ಮಾಡಬೇಕು. ಈ ಎಲ್ಲಾ ರಸ್ತೆ ಸುರಕ್ಷತೆಯ ಬಗ್ಗೆ ಇರುವ ಎಲ್ಲಾ ವಿಷಯಗಳ ಕುರಿತು ಜನವರಿ-1 ರಿಂದ 30 ರವರೆಗೆ ನಡೆಯುವ ರಸ್ತೆ ಸುರಕ್ಷತಾ ಜಾಗೃತಿ ಅಭಿಯಾನದ ಮೂಲಕ ಎಲ್ಲಾರಿಗೂ ತಿಳುವಳಿಕೆ ನೀಡಲಾಗುವುದು.

ಇದರ ಸಂಬಂಧವಾಗಿ ಶಾಲಾ-ಕಾಲೇಜುಗಳು, ಪೊಲೀಸ್ ಠಾಣೆಗಳು, ಸರ್ಕಾರಿ ಕಚೇರಿಗಳು ಹಾಗೂ ಇತರೆ ಸಾರ್ವಜನಿಕ ಸ್ಥಳಗಳಲ್ಲಿ ಅಭಿಯಾನ ಕಾರ್ಯಕ್ರಮ, ಬೀದಿ ನಾಟಕ ಮತ್ತು ಜಾಥಾ ಹಮ್ಮಿಕೊಳ್ಳಬೇಕು. ಶಾಲಾ-ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ ಹಾಗೂ ಭಾಷಣ ಸ್ಪರ್ಧೆ ಆಯೋಜಿಸಲಾಗುವುದು ಎಂದು ಅವರು ತಿಳಿಸಿದರು.

ಸಾರಿಗೆ ಇಲಾಖೆ, ಪೊಲೀಸ್, ಸಂಚಾರ ಇಲಾಖೆ, ಶಿಕ್ಷಣ ಇಲಾಖೆ, ಆರೋಗ್ಯ ಮತ್ತು ಕಲ್ಯಾಣ ಕುಟುಂಬ ಸೇವೆಗಳು, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಲೋಕೋಪಯೋಗಿ ಇಲಾಖೆ, ವಕೀಲರ ಸಂಘ, ವಿಮಾ ಕಂಪನಿಗಳು ಮತ್ತು ಎನ್‌ಜಿಓ ಸಂಸ್ಥೆಗಳಲ್ಲಿ ಎಲ್ಲಾ ಶಾಲೆಗಳು, ಕಾಲೇಜುಗಳು, ಸಾರ್ವಜನಿಕ/ಖಾಸಗಿ ಸಂಸ್ಥೆಗಳು, ಸಮುದಾಯ ಕೇಂದ್ರಗಳು, ಕ್ಲಬ್, ಆಸ್ಪತ್ರೆಗಳು, ಪೊಲೀಸ್ ಮತ್ತು ಸಂಚಾರ ಕಚೇರಿಗಳಲ್ಲಿ ಪಿಎಲ್‌ವಿ ಮತ್ತು ಎನ್‌ಜಿಓ ಪ್ರತಿನಿಧಿಗಳನ್ನು ಒಳಗೊಂಡಂತೆ ರಸ್ತೆ ಸುರಕ್ಷತಾ ಕ್ರಮಗಳ ಕುರಿತು ಅಭಿಯಾನ ಮೂಲಕ ಜನರಲ್ಲಿ ಜಾಗೃತಿ ಮೂಡಿಸಲಾಗುವುದು ಎಂದರು.

ರಸ್ತೆ ನಿಯಮಗಳ ಪಾಲನೆ, ಅಪಘಾತ ತಡೆಗಟ್ಟುವಿಕೆ ಮತ್ತು ಸುರಕ್ಷಿತ ರಸ್ತೆ ಸಂಚಾರದ ಕುರಿತು ಜನಸಾಮಾನ್ಯರು, ಯುವಜನರು ಸೇರಿದಂತೆ ಪ್ರತಿಯೊಬ್ಬರಿಗೂ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಜಾಗೃತಿ ಜಾಥಾ, ಬೀದಿ ನಾಟಕ ಮತ್ತು ಎಲ್ಲಾ ಶಾಲಾ-ಕಾಲೇಜುಗಳಲ್ಲಿ ರಸ್ತೆ ಸುರಕ್ಷತಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದರು.

ಬೆಂಗಳೂರು ವಕೀಲರ ಸಂಘದ ಅಧ್ಯಕ್ಷ ವಿವೇಕ ರೆಡ್ಡಿ ಅವರು ಮಾತನಾಡಿ, ಅಪಘಾತಗಳನ್ನು ಕಡಿಮೆಗೊಳಿಸಲು ಎಲ್ಲರೂ ಒಗ್ಗೂಡಿ ಅರಿವು ಮೂಡಿಸುವ ಮೂಲಕ ಜಾಗೃತಿ ಹೊಂದಬೇಕಿದೆ. ಇದರಿಂದ ಅಪಘಾತಗಳನ್ನು ಶೂನ್ಯಕ್ಕೆ ತರಬಹುದಾಗಿದೆ ಎಂದು ತಿಳಿಸಿದರು.

ಅಪಘಾತಗಳಿಂದಾಗಿ ಆಗುವ ಅಂಗವಿಲತೆ ವೈಫಲ್ಯವು ಕುಟುಂಬಗಳನ್ನು ಬಹಳಷ್ಟು ಸಂಕಷ್ಟಕ್ಕೇ ದೂಡಲಿದೆ. ಸಂಚಾರಿ ಮಾರ್ಗಸೂಚಿಗಳನ್ನು ಪಾಲನೆ ಮಾಡುವುದರಿಂದ ಅಪಘಾತ ಘಟನೆಗಳನ್ನು ಕಡಿಮೆ ಮಾಡಬಹುದಾಗಿದ್ದು, ಇದರಿಂದ ಸಮಾಜಕ್ಕೆ ಕೊಡುಗೆ ನೀಡಿದಂತಾಗುತ್ತದೆ ಎಂದರು.

ವಿಡಿಯೋ ಸಂವಾದದ ಬಳಿಕ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಮಾತನಾಡಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಎಲ್ಲಾ ತಾಲ್ಲೂಕು ಕಾನೂನು ಸೇವಾ ಸಮಿತಿ ಮತ್ತು ಇತರೆ ಪಾಲುದಾರ ಇಲಾಖೆಗಳ ಸಹಯೋಗದೊಂದಿಗೆ ಜ.01 ರಿಂದ 30 ರ ವರೆಗೆ ಜಿಲ್ಲೆಯಲ್ಲಿ ರಸ್ತೆ ಸುರಕ್ಷತಾ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಡಿ ಹಮ್ಮಿಕೊಂಡಿರುವ ರಸ್ತೆ ಸುರಕ್ಷತಾ ಜಾಗೃತಿ ಕಾರ್ಯಕ್ರಮಗಳಿಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಸಾರಿಗೆ ಇಲಾಖೆ, ಶಿಕ್ಷಣ ಇಲಾಖೆ, ನಗರ ಸ್ಥಳೀಯ ಸಂಸ್ಥೆಗಳು ಸೇರಿದಂತೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳ ಅಗತ್ಯ ಸಹಕಾರದೊಂದಿಗೆ ಅಭಿಯಾನ ಯಶಸ್ವಿಗೊಳಿಸಲಾಗುವುದು ಎಂದರು.

ವಿಡಿಯೋ ಸಂವಾದದಲ್ಲಿ ವಾರ್ತಾ ಇಲಾಖೆಯ ವಾರ್ತಾ ಸಹಾಯಕ ವಿ.ಸಿ.ಗುರುರಾಜ ಹಾಗೂ ಇತರರು ಭಾಗವಹಿಸಿದ್ದರು.

# ಸಂವಾದ ಕಾರ್ಯಕ್ರಮ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಕರ್ನಾಟಕ ಮಾಹಿತಿ ಆಯೋಗ ಕಲಬುರಗಿ ಪೀಠದ ಆಯುಕ್ತರಾದ ಬಿ.ವೆಂಕಟಸಿಂಗ್, ಬೆಂಗಳೂರು ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ರಾಜಶೇಖರ.ಎಸ್ ಹಾಗೂ ರುದ್ರಣ ಹರ್ತಿಕೋಟೆ ಇವರ ನೇತೃತ್ವದಲ್ಲಿ ಜ.03 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಮಾಹಿತಿ ಹಕ್ಕು ಕಾಯ್ದೆಯ ಕುರಿತು ಕಾರ್ಯಾಗಾರ ಹಾಗೂ ಸಂವಾದ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಕಾರ್ಯಾಲಯದ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ತಿಳಿಸಿದ್ದಾರೆ.

# ಕೃಷಿ ಇಲಾಖೆ ವತಿಯಿಂದ ನೋಂದಣಿಗೆ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಅಂತರಾಷ್ಟ್ರೀಯ ವಾಣಿಜ್ಯ ಮೇಳ-2026ರ ಅಂಗವಾಗಿ ಕೃಷಿ ಇಲಾಖೆ ವತಿಯಿಂದ ಜಿಲ್ಲಾ ಮಟ್ಟದ ಸಿರಿಧಾನ್ಯ ಮತ್ತು ಮರೆತುಹೋದ ಖಾದ್ಯಗಳ ಪಾಕ ಸ್ಪರ್ಧೆಯನ್ನು ಜನವರಿ 02 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಬಿ.ಡಿ.ಎ.ಎ ಆವರಣದಲ್ಲಿ ಏರ್ಪಡಿಸಲಾಗಿದ್ದು, ಆಸಕ್ತರು ಸ್ಪರ್ಧೆಯಲ್ಲಿ ಭಾಗವಹಿಸಲು ನೋಂದಣಿಗೆ ಆಹ್ವಾನಿಸಲಾಗಿದೆ.

ಜಿಲ್ಲೆಯ ಆಸಕ್ತ ಸಾರ್ವಜನಿಕರು ಭಾಗವಹಿಸಲು ಜ.01 ರೊಳಗಾಗಿ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಅಥವಾ ಜಂಟಿ ಕೃಷಿ ನಿರ್ದೇಶಕರು ಕಚೇರಿಯಲ್ಲಿ ನಿಗದಿತ ನಮೂನೆ ಅರ್ಜಿ ಪಡೆದು ಭರ್ತಿಮಾಡಿ ತಮ್ಮ ಭಾವ ಚಿತ್ರದೊಂದಿಗೆ ಹೆಸರು, ವಿಳಾಸ ಮತ್ತು ತಯಾರಿಸುವ ಖಾದ್ಯ, ಬೇಕಾಗುವ ಸಾಮಗ್ರಿಗಳು, ತಯಾರಿಸಲು ಬೇಕಾಗುವ ಸಮಯ ಹಾಗೂ ವಿಧಾನದ ಸಂಕ್ಷಿಪ್ತ ಮಾಹಿತಿಯೊಂದಿಗೆ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಅಥವಾ ಜಂಟಿ ಕೃಷಿ ನಿರ್ದೇಶಕರ ಕಚೇರಿಗೆ ಅರ್ಜಿ ನಮೂನೆಯನ್ನು ಜ.01 ರ ಮಧ್ಯಾಹ್ನ 03 ಗಂಟೆಯೊಳಗಾಗಿ ಅಥವಾ ಹಳೆಯ ತಾಲ್ಲೂಕು ಕಚೇರಿ ಆವರಣದ ಜಂಟಿ ಕೃಷಿ ನಿರ್ದೇಶಕರ ಕಚೇರಿಗೆ ಸಲ್ಲಿಸಬಹುದು.

ಪ್ರತಿ ಸ್ಪರ್ಧೆಗೆ ಒಂದೇ ತಿನಿಸು ಮಾಡಲು ಅವಕಾಶವಿದ್ದು, ಜಿಲ್ಲೆಯ ಎಲ್ಲಾ ಸಾರ್ವಜನಿಕರು ಭಾಗವಹಿಸಬಹುದು. ವಿದ್ಯಾರ್ಥಿಗಳು ಮತ್ತು ಕೃಷಿ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸಲು ಅವಕಾಶವಿಲ್ಲ. ಹಿಂದಿನ ಸಾಲಿನಲ್ಲಿ ರಾಜ್ಯ ಮಟ್ಟದಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನ ಪಡೆದವರು ಮರೆತುಹೋದ ಖಾದ್ಯಗಳ ಪಾಕಸ್ಪರ್ಧೆಯಲ್ಲಿ ಭಾಗವಹಿಸಬಹುದು.

ಮನೆಯಲ್ಲೇ ತಯಾರಿಸಿದ ಸಿರಿಧಾನ್ಯದ ಖಾದ್ಯ ಪ್ರದರ್ಶಿಸುವುದಕ್ಕೆ ಬಳಸುವ ಸಾಮಗ್ರಿಗಳ ಮಾದರಿಗಳನ್ನು ಕಡ್ಡಾಯವಾಗಿ ಪ್ರದರ್ಶಿಸಬೇಕು. ಜಿಲ್ಲಾ ಮಟ್ಟದಲ್ಲಿ ಅತ್ಯುತ್ತಮ ಒಂದು ಸಿಹಿ, ಖಾರ ಸಿರಿಧಾನ್ಯ ಖಾದ್ಯಗಳಿಗೆ ಮಾತ್ರ ಮತ್ತು ಮರೆತುಹೋದ ಖಾದ್ಯದ ತಿನಿಸನ್ನು ಆಯ್ಕೆ ಮಾಡಲಾಗುವುದು. ಜಿಲ್ಲಾ ಮಟ್ಟಕ್ಕೆ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನ ಸಿಹಿ, ಖಾರ (ಸಿರಿಧಾನ್ಯ ಖಾದ್ಯಗಳಿಗೆ ಮಾತ್ರ) ಮತ್ತು ಖಾದ್ಯದ ತಿನಿಸಿಗೆ ಬಹುಮಾನ ಕ್ರಮವಾಗಿ ರೂ.5000/-, 3000/- ಹಾಗೂ 2000/-ಗಳನ್ನು ನೀಡಲಾಗುವುದು. ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಂಟಿ ಕೃಷಿ ನಿರ್ದೇಶಕರ ಕಚೇರಿ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಹಾಗೂ ಬಳ್ಳಾರಿ ದೂ.08392-276224, ಸಿರುಗುಪ್ಪ ಮೊ.827792800, ಸಂಡೂರು ಮೊ.8277927999 ಗೆ ಸಂಪರ್ಕಿಸಬಹುದು. ಎಂದು ಜಂಟಿ ಕೃಷಿ ನಿರ್ದೇಶಕ ಕೆ.ಎಂ. ಸೋಮಸುಂದರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನರಲ್ಲಿ ಆರೋಗ್ಯ ಅರಿವು ಮೂಡಿಸುವುದು ಅಗತ್ಯ: ರವಿ ಕುಮಾರ್

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**



ಕಲಾತಂಡಗಳ ಮೂಲಕ ಜನರಲ್ಲಿ ಆರೋಗ್ಯದ ಬಗ್ಗೆ ಅರಿವು ಮೂಡಿಸುವುದು ಅಗತ್ಯವಾಗಿದೆ ಎಂದು ಸಮುದಾಯ ಆರೋಗ್ಯ ಅಧಿಕಾರಿ ರವಿ ಕುಮಾರ್ ಅವರು ಹೇಳಿದರು.

ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಾಹಿತಿ ಶಿಕ್ಷಣ ಸಂವಹನ ವಿಭಾಗ ಬಳ್ಳಾರಿ, ಚಿಗುರು ಕಲಾತಂಡ ಇಬ್ರಾಹಿಂಪುರ ಇವರ ಸಹಯೋಗದಲ್ಲಿ ಬಿ.ಬೆಳಗಲ್ ತಾಂಡ ಗ್ರಾಮದಲ್ಲಿ ಆರೋಗ್ಯ ಅಭಿಯಾನದಡಿ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಕುರಿತು ಜಾನಪದ ಕಲಾ ಪ್ರದರ್ಶನ ಮೂಲಕ ಹಮ್ಮಿಕೊಂಡಿದ್ದ ಆರೋಗ್ಯ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಕಲಾತಂಡಗಳು ಆರೋಗ್ಯ ಜಾಗೃತಿ ಕುರಿತು ಇತರೆ ಗ್ರಾಮಗಳಲ್ಲಿ ಕೂಡ ವಿವಿಧ ಸಾಂಕ್ರಾಮಿಕ, ಅಸಾಂಕ್ರಾಮಿಕ ರೋಗಗಳು ಹಾಗೂ ಇತರೆ ವಿಷಯಗಳ ಕುರಿತು ಅರಿವು ಮೂಡಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಹೆರಿಗೆ ತಾಯಂದಿರ ಆರೋಗ್ಯ, ಗರ್ಭಿಣಿ ಆರೋಗ್ಯ, ತಾಯಿ ಕಾರ್ಡ್, ಕುಷ್ಠರೋಗ, ರಕ್ತ ಹೀನತೆ, ತಾಯಿ ಎದೆ ಹಾಲಿನ ಮಹತ್ವ, ಬಾಲ್ಯ ವಿವಾಹ, ಆಂಬುಲೆನ್ಸ್ ಸೇವೆ, ಹದಿಹರಿಯದವರ ಆರೋಗ್ಯ ಸಮಸ್ಯೆಗಳು, ಲಸಿಕೆಗಳು ಹಾಗೂ ಇನ್ನಿತರೆ ವಿಷಯಗಳ ಕುರಿತು ಕಲಾವಿದರು ಅಭಿನಯ ಮತ್ತು ಜಾಗೃತಿ ಗೀತೆಗಳ ಮೂಲಕ ಜನರಲ್ಲಿ ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರಾದ ಡಾ.ಆಶಾರಾಣಿ, ಆಶಾ ಕಾರ್ಯಕರ್ತರಾದ ಲಲಿತ ಬಾಯಿ, ತಿಪ್ಪಮ್ಮ, ಪಾರುಬಾಯಿ, ವಸಂತ ಬಾಯಿ, ಜ್ಯೋತಿಬಾಯಿ, ಗ್ರಾಮದ ಹಿರಿಯರಾದ ಲಚ್ಚನಾಯಕ, ಮಂಜುನಾಥ್ ನಾಯಕ, ಶಿವನಾಯಕ್, ಮೇಘನಾಯಕ್, ಚಿಗುರು ಕಲಾ ತಂಡದ ಕಲಾವಿದರಾದ ಹುಲುಗಪ್ಪ ಎಸ್.ಎಂ., ಎಚ್.ರಮೇಶ್, ಹೆಚ್.ಜಿ.ಸುಂಕಪ್ಪ, ಎರಿಸ್ವಾಮಿ, ಸೈಪುಲ್ಲ, ವೆಂಕಟೇಶ್, ಸರ್ವ ಮಂಗಳಮ್ಮ, ದಿವ್ಯ ಸೇರಿದಂತೆ ಅಂಗನವಾಡಿ ಕಾರ್ಯಕರ್ತರು, ಶಾಲೆಯ ಶಿಕ್ಷಕರು, ಶಾಲಾ ಮಕ್ಕಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಶರಣ ಸಂಸ್ಕೃತಿ ಉತ್ಸವ 2025.



ಮಲ್ಲಮ್ಮ ನುಡಿ ವಾರ್ತೆ.

ಬಸವಕಲ್ಯಾಣ-ಹುಲಸೂರ ಪಟ್ಟಣದಲ್ಲಿ ಲಿಂ.ಪೂಜ್ಯಶ್ರೀ ಜಗದ್ಗುರು ಬಸವಕುಮಾರ ಮಹಾ ಶಿವಯೋಗಿಗಳವರ 50. ನೇಯ ಸುವರ್ಣ ಮಹೋತ್ಸವ ಅಂಗವಾಗಿ ಶ್ರೀ ಗುರು ಬಸವೇಶ್ವರ ಸಂಸ್ಥಾನ ಮಠ ಹುಲಸೂರನಲ್ಲಿ ಶಿಕ್ಷಣ ಸಂಸ್ಥೆಯ ಹಳೆ ವಿದ್ಯಾರ್ಥಿಗಳ ಸಮಾವೇಶದಲ್ಲಿ ಜೆ.ಬಿ.ಕೆ ಪ್ರೌಢ ಶಾಲೆ ಬಸವಕಲ್ಯಾಣದ ಎಸ್.ಎಸ್.ಎಲ್.ಸಿ1994-95 ಸಾಲಿನ ಹಳೆ ವಿದ್ಯಾರ್ಥಿಗಳಿಗೆ ಪೂಜ್ಯ ಶ್ರೀ ಡಾ.ಶಿವಾನಂದ ಮಹಾಸ್ವಾಮಿಗಳು ಸನ್ಮಾಸಿ ಗೌರವಿಸಿದರು.ಈ ಸಂದರ್ಭದಲ್ಲಿ ಸಾಯಗಾಂವದ ಪೂಜ್ಯ ಶ್ರೀ ಶಿವಾನಂದ ದೇವರು ಹಾಗೂ ಇನ್ನಿತರರು ಪೂಜ್ಯರು ಹಾಗೂ ಬಳವಂತರಾವ ಪಾಟೀಲ್ ಜಂಟಿ ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಹಾಗೂ ಹಳೆ ವಿದ್ಯಾರ್ಥಿಗಳಲ್ಲಿ ಡಾ.ಧನರಾಜ ಚಂದನಕೆರೆ, ಅಲ್ಲಾವುದ್ದೀನ್ ಪಟೇಲ, ಗಿರಿಧರ ಧಾನುರೆ,ಬಾಲಾಜಿ ಖಂಡಾಳೆ,ಬಂಡೆಪ್ಪಾ, ಸೂರ್ಯಕಾಂತ ಬೇಲೂರೆ, ವಿಜಯಕುಮಾರ ಗುದಗೆ,ರಾಮಲಿಂಗ ಸ್ವಾಮಿ, ರೇವಣಸಿದ್ದ ಸ್ವಾಮಿ, ಮಲ್ಲಿಕಾರ್ಜುನ ಸ್ವಾಮಿ, ನಿತಿನ್ ಸುತ್ರಾವೆ,ರುಪೇಶ,ಮಹೇಶ ಶೀಲವಂತ,ವಿಜಯಕುಮಾರ ಗೌರಕರ, ವಿವೇಕಾನಂದ, ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.



ಬಸವಕಲ್ಯಾಣ:-ಬೇಲೂರಿನ ಉರಿಲಿಂಗ ಪೆದ್ದಿ ಮಠದ ಪೂಜ್ಯ ಶ್ರೀ ಪಂಚಾಕ್ಷರಿ ಸ್ವಾಮೀಜಿಗಳು ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನಪತ್ರಿಕೆ ವೀಕ್ಷಿಸುತಿರುವ ದೃಶ್ಯ ಕಾಣಬಹುದು. ಈ ಸಂದರ್ಭದಲ್ಲಿ ವರದಿಗಾರರಾದ ಡಿ.ಕೆ.ಪ್ರಹ್ಲಾದ ವರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ.)

# ಪಿಯುಸಿ ಫಲಿತಾಂಶ ಸುಧಾರಣೆಗೆ ಪೂರ್ವ ಸಿದ್ಧತೆ ಅಗತ್ಯ

**ಮಸ್ಕಿ ತಾಪಂ ಇಒ ಅಮರೇಶ್ ಸಲಹೆ / ಪಿಯು ಕಾಲೇಜಿನಲ್ಲಿ ಕಾರ್ಯಾಗಾರ**

- **ಮಲ್ಮನ ನುಡಿ ವಾರ್ತೆ ಮಸ್ಕಿ :**

ಪಿಯುಸಿ ಫಲಿತಾಂಶ ಸುಧಾರಣೆ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಶಿಸ್ತುಬದ್ಧ ಅಧ್ಯಯನಕ್ಕೆ ಒತ್ತು ನೀಡಬೇಕು ಎಂದು ಮಸ್ಕಿ ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಅಮರೇಶ್ ಸಲಹೆ ನೀಡಿದರು.

ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಸೋಮವಾರ ಪಿಯು ಫಲಿತಾಂಶ ಬಲವರ್ಧನೆ ಹಾಗೂ ವೃತ್ತಿ ಮಾರ್ಗದರ್ಶನ ಕುರಿತು ಏರ್ಪಡಿಸಿದ್ದ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದರು.

ಆಧುನಿಕ ಯುಗದಲ್ಲಿ ವಿದ್ಯಾರ್ಥಿಗಳ ಮುಂದೆ ಅನೇಕ ವೃತ್ತಿಗಳ ಆಯ್ಕೆಗಳಿದ್ದು, ಉಜ್ವಲ ಭವಿಷ್ಯಕ್ಕೆ ಪಿಯುಸಿ ಫಲಿತಾಂಶ ಮಾನದಂಡವಾಗಿರಲಿದೆ. ಹೀಗಾಗಿ ವಿದ್ಯಾರ್ಥಿಗಳು ಸಮಯ ವ್ಯರ್ಥ ಮಾಡದೇ ಪರೀಕ್ಷೆಗೆ ಅಗತ್ಯ ಸಿದ್ಧತೆ ಕೈಗೊಳ್ಳಬೇಕು. ಮುಂದೆ ಆಯ್ಕೆ ಮಾಡಬೇಕಾದ ಕೋರ್ಸ್‌ಗಳ ಕುರಿತು ಅಗತ್ಯ ಮಾರ್ಗದರ್ಶನ ನೀಡಲು ಸಂಪನ್ಮೂಲ ವ್ಯಕ್ತಿಗಳಿಂದ ಕಾರ್ಯಾಗಾರ ಏರ್ಪಡಿಸಲಾಗುವುದು. ಮಸ್ಕಿ ಕೇಂದ್ರ ಸರ್ಕಾರದ ಮಹತ್ವಕಾಂಕ್ಷೆ ತಾಲೂಕು ಕಾರ್ಯಕ್ರಮವಾಗಿರುವುದರಿಂದ ಎಸ್ಸೆಸ್ಸೆಲ್ಸಿ, ಪಿಯುಸಿ ಫಲಿತಾಂಶದ ಬಗ್ಗೆ ಹೆಚ್ಚಿನ ನಿಗಾ ವಹಿಸಲಾಗಿದೆ. ವಿದ್ಯಾರ್ಥಿಗಳು, ಉಪನ್ಯಾಸಕರು ಒಗ್ಗೂಡಿ ಪರೀಕ್ಷೆ ಎದುರಿಸುವ ಕುರಿತು ನೀಲನಕ್ಷೆ ರೂಪಿಸಿದಾಗ ಉತ್ತಮ ಫಲಿತಾಂಶ ಪಡೆಯಬಹುದಾಗಿದೆ. ವಿದ್ಯಾರ್ಥಿಗಳು ಸಾಮಾಜಿಕ ಮಾಧ್ಯಮ, ದೂರದರ್ಶನ ವೀಕ್ಷಣೆಯಿಂದ ದೂರ ಇದ್ದು, ಗರಿಷ್ಠ ಸಮಯವನ್ನು ಓದಿಗೆ ಮೀಸಲು ಇಡಬೇಕು.ಗುಂಪು ಅಧ್ಯಯನಕ್ಕೆ ಒತ್ತು ನೀಡಬೇಕು ಎಂದರು.

ಸಂಪನ್ಮೂಲ ವ್ಯಕ್ತಿಗಳಾದ ಮಂಜುಳಾ ಮಾತನಾಡಿ,ಪರೀಕ್ಷೆ ಎದುರಿಸಲು ಬೇಕಾದ ಮಾನಸಿಕ ದೃಢತೆ ಕಾಯ್ದುಕೊಳ್ಳಲು ಅನುಸರಿಸಬೇಕಾದ ಕ್ರಮಗಳ ಕುರಿತು ವಿವರಿಸಿ, ಅಗತ್ಯ ಇದ್ದಲ್ಲಿ ಮಾನಸಿಕ ತಜ್ಞರ ಮಾರ್ಗದರ್ಶನ ಪಡೆಯಲು ತಿಳಿಸಿದರು.

ಈ ವೇಳೆ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ ಏರ್ಪಡಿಸಿ, ಬಹುಮಾನ ವಿತರಿಸಲಾಯಿತು. ಕಾಲೇಜು ಪ್ರಾಚಾರ್ಯರಾದ ಆರ್.ಕೆ. ರಂಗಪ್ಪ ಅಧ್ಯಕ್ಷತೆ ವಹಿಸಿದ್ದರು. ಉಪನ್ಯಾಸಕರಾದ ಮಹಾಂತೇಶ್ ಮಸ್ಕಿ, ರಂಗಪ್ಪ, ಕಾರ್ಯಕ್ರಮ ಸಂಯೋಜಕರಾದ ಮಹತ್ವಕಾಂಕ್ಷೆ ತಾಲೂಕು ಫೆಲೋ ಕಲ್ಲೇಶ ಶಿದ್ರಾಹುತರ ಇತರರಿದ್ದರು.



ಮಸ್ಕಿ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಸೋಮವಾರ ಪಿಯು ಫಲಿತಾಂಶ ಬಲವರ್ಧನೆ ಹಾಗೂ ವೃತ್ತಿ ಮಾರ್ಗದರ್ಶನ ಕುರಿತು ಏರ್ಪಡಿಸಿದ್ದ ಕಾರ್ಯಾಗಾರದಲ್ಲಿ ಮಸ್ಕಿ ತಾಪಂ ಇಒ ಅಮರೇಶ್ ಮಾತನಾಡಿದರು.

# ಉಸ್ತುವಾರಿ ಸಮಿತಿ ಸಭೆ: 17 ದೌರ್ಜನ್ಯ ಪ್ರಕರಣಗಳಿಗೆ ಶಿಕ್ಷೆ : ಡಿಸಿ ಸಂಗಪ್ಪ

- **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಡಿಸೆಂಬರ್ 30 (ಕರ್ನಾಟಕ ವಾರ್ತೆ): ಜಿಲ್ಲೆಯಲ್ಲಿ ದೌರ್ಜನ್ಯ ಪ್ರಕರಣಗಳಡಿ ದಾಖಲಾದ ಒಟ್ಟು 178 ಪ್ರಕರಣಗಳ ಪೈಕಿ ಕಳೆದ 6 ತಿಂಗಳಲ್ಲಿ 17 ಪ್ರಕರಣಗಳಿಗೆ ಶಿಕ್ಷೆ ಆಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.



ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿಂದು ಜಿಲ್ಲಾಮಟ್ಟದ ಜಾಗೃತಿ ನಿಯಂತ್ರಣ ಹಾಗೂ ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಕಳೆದ 2 ವರ್ಷಗಳಲ್ಲಿ ಎಪ್ರೀಲ್ ಮಾಹೆಯಿಂದ ಇಲ್ಲಿವರೆಗೆ ಒಟ್ಟು 33 ಪ್ರಕರಣಗಳು ದಾಖಲಾಗಿದ್ದು, ಹಿಂದಿನ ಬಾಕಿ 145 ಸೇರಿ ಒಟ್ಟು 178 ಪ್ರಕರಣಗಳ ಪೈಕಿ 17 ಪ್ರಕರಣಗಳಿಗೆ ಶಿಕ್ಷೆಯಾಗಿದೆ. ದೌರ್ಜನ್ಯ ಪ್ರಕರಣಗಳಲ್ಲಿ ತನಿಖೆಯನ್ನು ಚುರುಕುಗೊಳಿಸಿ ಶಿಕ್ಷೆಯ ಪ್ರಮಾಣವನ್ನು ಹೆಚ್ಚಿಸಲು ಕ್ರಮಕೈಗೊಳ್ಳಬೇಕು ಎಂದು ತಿಳಿಸಿದರು.

ಪ್ರಸಕ್ತ ಸಾಲಿನಲ್ಲಿ 47 ದೌರ್ಜನ್ಯ ಪ್ರಕರಣಗಳ ಪೈಕಿ 35 ಪ್ರಕರಣಗಳಿಗೆ ಒಟ್ಟು 58.25 ಲಕ್ಷ ರೂ. ಗಳನ್ನು ನೊಂದ ಸಂತ್ರಸ್ಥರಿಗೆ ನೀಡಲಾಗಿದೆ. ಉಳಿದ 12 ಪ್ರಕರಣಗಳಿಗೆ ಪರಿಹಾರಧನ ವಿತರಿಸಲು ಸಮಾಜ ಕಲ್ಯಾಣ ಇಲಾಖೆ ಆಯುಕ್ತರಿಗೆ ಪತ್ರ ಬರೆಯಲಾಗಿದೆ. ಇಂತಹ ಪ್ರಕರಣಗಳನ್ನು ನಡೆಯದಂತೆ ಕ್ರಮವಹಿಸಲು ತಾಲೂಕಾವಾರು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿವುದರ ಜೊತೆಗೆ ಪ್ರತಿ ತಿಂಗಳು ತಾಲೂಕಾವಾರು ಕಡ್ಡಾಯವಾಗಿ ಜಾಗೃತಿ ಸಭೆ ನಡೆಸಲು ಜಿಲ್ಲಾಧಿಕಾರಿಗಳು ತಿಳಿಸಿದರು.

ಗ್ರಾಮ ಪಂಚಾಯತಿವಾರು ಪರಿಶಿಷ್ಟ ಜಾತಿ ಮತ್ತು ಪಂಗಡದ ಕಲ್ಯಾಣಕ್ಕಾಗಿ ಕಾಯ್ದಿರಿಸಿದ ಶೇ.25 ರಷ್ಟು ಅನುದಾನವನ್ನು ನಿಗದಿತ ಅವಧಿಯಲ್ಲಿ ಖರ್ಚು ಭರಿಸಬೇಕು. ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮೀಸಲಿಟ್ಟ ಅನುದಾನ ಹಾಗೂ ಶೇ.24.10 ಅನುದಾನದ ಪ್ರಗತಿಯನ್ನು ಪರಿಶೀಲಿಸಿದಾಗ ಪರಿಶಿಷ್ಟ ಜಾತಿ ಅನುದಾನ ಶೇ.89.30, ಪರಿಶಿಷ್ಟ ಪಂಗಡ ವರ್ಗದ ಅನುದಾನ ಶೇ.88.98 ರಷ್ಟು ಖರ್ಚಾಗಿದ್ದು, ಉಳಿದ ಅನುದಾನ ಸಂಪೂರ್ಣವಾಗಿ ಖರ್ಚು ಭರಿಸಲು ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲೆಯ ವಿವಿಧ ನಿಗಮಗಳಲ್ಲಿ ಬಾಕಿ ಇರುವ ಬೋರವೆಲ್‌ಗಳಿಗೆ ವಿದ್ಯುದ್ದೀಕರಣ ಕಲ್ಪಿಸಲು ಸಂಬಂಧಿಸಿದ ನಿಗಮದ ಅಧಿಕಾರಿಗಳಿಗೆ ಸೂಚನೆ ನೀಡಿದರು. ವಾಲ್ಮೀಕಿ ನಿಗಮದಲ್ಲಿ ಬೋರವೆಲ್ ಕೊರೆಯಲು 3 ವರ್ಷದಿಂದ ಬಾಕಿ ಉಳಿದಿದ್ದು, ಬೋರವೆಲ್ ಏಜೆನ್ಸಿಯವರಿಗೆ ಡ್ರಿಲ್ ಮಾಡಿದ ಮೊತ್ತ ಪಾವತಿಗೆ ನಿಗದ ವ್ಯವಸ್ಥಾಪಕ ನಿರ್ದೇಶಕರಿಗೆ ದೂರವಾಣಿ ಮೂಲಕ ಕರೆ ಮಾಡಿ ಕ್ರಮವಹಿಸಿ ಬೋರವೆಲ್ ಕೊರೆಯಲು ಅನುಕೂಲ ಮಾಡಿಕೊಡುವಂತೆ ಜಿಲ್ಲಾಧಿಕಾರಿಗಳು ಕೇಳಿಕೊಂಡರು.

ದೌರ್ಜನ್ಯ ಕಾಯ್ದೆಗಳ ಕುರಿತು ಜಿಲ್ಲಾ ಜಾಗೃತಿ ಸಮಿತಿ ಸದಸ್ಯರಿಗೆ ಒಂದು ಕಾರ್ಯಾಗಾರದ ಅಗತ್ಯವಿದೆ ಎಂದು ಸದಸ್ಯರು ಸಭೆಗೆ ತಿಳಿಸಿದಾಗ ಕಾರ್ಯಾಗಾರ ಆಯೋಜನೆಗೆ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ರಮೇಶ ಚವ್ಹಾಣ ಅವರಿಗೆ ತಿಳಿಸಿದರು.

ಸಭೆಯಲ್ಲಿ ಜಿ.ಪಂ ಉಪಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಡಿವಾಯ್‌ಎಸ್‌ಪಿ ಗಜಾನನ ಸುತಾರ, ಸರಕಾರಿ ಅಭಿಯೋಜಕ ಬಿ.ಡಿ.ಬಾಗವಾನ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಮೇಶ ಚವ್ಹಾಣ ಸೇರಿದಂತೆ ಜಿಲ್ಲಾ ಮಟ್ಟದ ಜಾಗೃತಿ ನಿಯಂತ್ರಣ ಹಾಗೂ ಉಸ್ತುವಾರಿ ಸಮಿತಿ ಸದಸ್ಯರಾದ ಯಮನಪ್ಪ ಪೂಜಾರ, ಶಿವಾನಂದ ಮಾದರ, ಫಕೀರಪ್ಪ ಮಾದರ, ಬಸವರಾಜ ಪಾತ್ರೋಟ, ಗೋವಿಂದಪ್ಪ ಕೌಲಗಿ ಹಾಗೂ ಇತರರು ಉಪಸ್ಥಿತರಿದ್ದರು.

# ಹೊಸ ವರ್ಷಾಚರಣೆಗೆ ಸಜ್ಜುಗೊಂಡ ಗೋಕರ್ಣದ ರೆಸಾರ್ಟ್



- **ಮಲ್ಲಮ್ಮ ನುಡಿ ವಾರ್ತೆ ಗೋಕರ್ಣ :**

ಹೊಸವರ್ಷಾಚರಣೆ ಎಂದಕೂಡಲೇ ಪ್ರವಾಸಿಗರಿಗೆ ಮೊದಲಿಗೆ ನೆನಪಿಗೆ ಬರುವುದು ಗೋಕರ್ಣ. ಇಲ್ಲಿ ಹಲವು ಬೀಚ್‌ಗಳಿಗೆ, ಜಂಗಲ್ ರೆಸಾರ್ಟ್, ಯಶಾರಾಮಿ ಹೊಟೇಲ್‌ಗಳಿಂದ ಹಿಡಿದು ಸಣ್ಣಮಟ್ಟದ ಹೋಮ್‌ಸ್ಟೇಗಳು ಕೂಡ ಇರುವುದರಿಂದ ಅವರಿಗೆ ಅನುಕೂಲಕ್ಕೆ ತಕ್ಕಂತೆ ಎಲ್ಲಿಯಾದರೂ ಸ್ಥಳ ಸಿಗುತ್ತದೆ ಎಂಬ ನಂಬಿಕೆಯಿಂದ ಇಲ್ಲಿಗೆ ಆಗಮಿಸುತ್ತಾರೆ. ಪ್ರತಿವರ್ಷ ಕ್ರಿಸ್‌ಮಸ್‌ಗಿಂತಲೂ ಮುಂಚಿತವಾಗಿಯೇ ಗೋಕರ್ಣಕ್ಕೆ ಲಗ್ಗೆ ಇಡುವ ಪ್ರವಾಸಿಗರು ವರ್ಷಾಚರಣೆ ಮುಗಿದ ನಂತರವು ಕೆಲವು ದಿನ ಇದ್ದು ತೆರಳುತ್ತಾರೆ. ಈ ಅವಧಿಯಲ್ಲಿ ಸುಮಾರು ಒಂದರಿಂದ ಒಂದುವರೆ ಲಕ್ಷದಷ್ಟು ಪ್ರವಾಸಿಗರು ಗೋಕರ್ಣದಲ್ಲಿ ಇರುತ್ತಾರೆ. ಹೀಗಾಗಿ ಗೋಕರ್ಣದಲ್ಲಿ ಈಗ ಎಲ್ಲಿ ನೋಡಿದರೂ ವಾಹನಗಳ ದಟ್ಟಣೆ ಕಂಡುಬರುತ್ತದೆ.

ಪೊಲೀಸ್ ನಿರೀಕ್ಷಕ ಶ್ರೀಧರ ಎಸ್.ಆರ್. ಈ ಬಾರಿ ವಿಶೇಷವಾಗಿ ಟ್ರಾಫಿಕ್‌ಜಾಮ್ ಆಗದಂತೆ ತಮ್ಮ ಸಿಬ್ಬಂದಿಗಳನ್ನು ನೇಮಿಸಿದ್ದಾರೆ. ಜತೆಗೆ ಗೃಹರಕ್ಷಕ ದಳದವರು ಕೂಡ ಕರೆಸಿಕೊಂಡಿದ್ದಾರೆ. ಆದರೂ ಕೂಡ ಅಲ್ಲಲ್ಲಿ ಅಲ್ಪಸ್ವಲ್ಪ ಟ್ರಾಫಿಕ್ ಸಮಸ್ಯೆ ಉಂಟಾಗುತ್ತಿದೆ ಎಂದರೆ ಇಡೀ ಗೋಕರ್ಣದಲ್ಲಿ ಬಂದ ಲಕ್ಷಾಂತರ ಪ್ರವಾಸಿಗರನ್ನು ನೋಡಿಕೊಳ್ಳಬೇಕಾದ ಜವಾಬ್ದಾರಿ ಪೊಲೀಸರ ಮೇಲೆ ಬಿದ್ದಂತಾಗಿದೆ. ಗೋಕರ್ಣದಲ್ಲಿ ಎಲ್ಲ ಕಡೆಯಲ್ಲಿಯೂ ಹೊಟೇಲ್ 15 ದಿನಗಳ ಮುಂಚಿತವಾಗಿಯೇ ಬುಕಿಂಗ್ ಆಗಿರುವುದರಿಂದ ಇತರೆ ಪ್ರವಾಸಿಗರು ಗಂಗಾವಳಿ-ಮಂಜಗುಣಿ ಸೇತುವೆ ನಿರ್ಮಾಣಗೊಂಡಿದ್ದರಿಂದ ಅವರು ಅಂಕೋಲಾದತ್ತ ಬರುತ್ತಿದ್ದಾರೆ. ಹೊನ್ನೆಬೈಲ್‌ನ ಹನೀಬೀಚನಲ್ಲಿಯೂ ಕೂಡ ವಸತಿಯನ್ನು ಮಾಡಿಕೊಂಡಿದ್ದಾರೆ.ಲ್ಲಿ ಸೇತುವೆ ನಿರ್ಮಾಣವಾಗಿರುವುದರಿಂದ ಪ್ರವಾಸಿಗರಿಗೆ ನುಕೂಲವಾಗಿದೆ. ಹಾಗೇ ಅಂಕೋಲಾ ಾಲೂಕಿನವರಿಗೂ ಕೂಡ ವ್ಯಾಪಾರ ವಹಿವಾಟು ಕೂಡ ಏರಿಕೆಯಾಗಲಿದೆ.

> “ ಹೊಸವರ್ಷಾಚರಣೆ ನಿಮಿತ್ತ ಎಲ್ಲ ಹೊಟೇಲ್, ರೆಸ್ಟೋರೆಂಟ್, ಹೋಮ್‌ಸ್ಟೇನವರಿಗೂ ಈಗಾಗಲೇ ಎಲ್ಲಿಯೂ ಕಾನೂನು ಮೀರದಂತೆ ನೋಡಿಕೊಳ್ಳಬೇಕೆಂದು ಸೂಚಿಸಲಾಗಿದೆ. ಹೀಗಾಗಿ ಆಯಾ ವಸತಿಯ ಮಾಲೀಕರು ಕೂಡ ಸಮಸ್ಯೆಯಾಗದಂತೆ ಅವರು ಕೂಡ ನೋಡಿಕೊಳ್ಳಲಿದ್ದಾರೆ. ಹೀಗಾಗಿ ಯಾವುದೇ ಅವಘಡಕ್ಕೂ ಅವಕಾಶ ನೀಡದೇ,ಕಾನೂನು ಬಾಹಿರ ಚಟುವಟಿಕೆ ನಡೆ-ಯದಂತೆ ಸೂಚಿಸಿದ್ದು ಅವರು ಕೂಡ ಸುರಕ್ಷತೆಯ ದೃಷ್ಟಿಯಿಂದಲೇ ಯಾವುದೇ ಅಹಿತಕರ ಘಟನೆ ನಡೆ-ಯದಂತೆ ನೋಡಿಕೊಳ್ಳುವ ಜವಾಬ್ದಾರಿಯಿದೆ. ನಾವು ಈಗಾಗಲೇ ಎಲ್ಲ ರೀತಿಯಿಂದಲೂ ಪ್ರವಾಸಿಗರಿಗೆ ತೊಂದ-ರೆಯಾಗದಂತೆ ವ್ಯವಸ್ಥೆ ಮಾಡಲಾಗಿದೆ.
>
> **- ಶ್ರೀಧರ ಎಸ್. ಆರ್ ಪೊಲೀಸ್ ನಿರೀಕ್ಷಕರು, ಗೋಕರ್ಣ**

# ಅನಧಿಕೃತ ತರಕಾರಿ ಮಾರುಕಟ್ಟೆ ಸ್ಥಳಾಂತರಕ್ಕೆ ವಿಳಂಬ ಧೋರಣೆ- ಖಂಡನೆ

- **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಅನಧಿಕೃತ ತರಕಾರಿ ಮಾರುಕಟ್ಟೆ ಸ್ಥಳಾಂತರ ಮಾಡುವಲ್ಲಿ ಸಂಪೂರ್ಣ ವಿಳಂಬಧೋರಣೆ ಅನುಸರಿಸಲಾಗುತ್ತಿದೆ ಎಂದು ರಾಯಚೂರು ನಗರ ಉಸ್ಮಾನಿಯಾ ತರಕಾರಿ ಮಾರಾಟಗಾರರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಎನ್. ಮಹಾವೀರ ಅವರು ಹೇಳಿದರು.ನಗರದ ಎಂ.ಈರಣ್ಣ ವೃತ್ತದಿಂದ ಆಕಾಶವಾಣಿ ಕೇಂದ್ರಕ್ಕೆ ಹೋಗುವ ರಸ್ತೆಯ ಮಧ್ಯಭಾಗದ ಸ್ಮಶಾನ ಬಳಿ ಸರ್ಕಾರಿ ಜಾಗದಲ್ಲಿ ಅನಧಿಕೃತ ತರಕಾರಿ ಮಾರುಕಟ್ಟೆಗಳು ತೆರವುಗೊಳಿಸುವ ಕುರಿತು



ಜಿಲ್ಲಾಧಿಕಾರಿ ಮತ್ತು ಪಾಲಿಕೆ ಆಯುಕ್ತರಿಗೆ ಗಮನಕ್ಕೆ ತಂದರೂ ಪ್ರಯೋಜನ ಇಲ್ಲದಂತಾಗಿದೆ. ಉಪ ಲೋಕಾಯುಕ್ತರು ಜಿಲ್ಲಾ ಪ್ರವಾಸ ಸಂದರ್ಭದಲ್ಲಿ ಅನಧಿಕೃತ ತರಕಾರಿ ಮಾರುಕಟ್ಟೆ ಬಗ್ಗೆ ಅವರ ಗಮನಕ್ಕೆ ತರಲಾಯಿತು.ಆದರೆ ಲೋಕಾಯುಕ್ತರು ಇದರ ವಿಚಾರಣೆ ನಡೆಸಿದಾಗ ಅನಧಿಕೃತವಾಗಿ ನಡೆಸಲಾಗುತ್ತಿದೆ ಎಂದು ಅವರು ಮಾಹಿತಿ ಸಂಗ್ರಹಿಸಿದರು. ವರದಿ ಬಂದ ನಂತರ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಆದರೆ ಇದುವರೆಗೂ ನಮ್ಮ ಕೈಯಲ್ಲಿ ಪತ್ರ ಸೇರಿಲ್ಲ. ಮಾರುಕಟ್ಟೆ ಸ್ಥಳಾಂತರ ರಾಜಕೀಯ ನಡೆಯುತ್ತಿದೆ ಎಂದು ಅವರು ಆರೋಪಿಸಿದರು.ಮಹಾನಗರ ಪಾಲಿಕೆ ಸಾಮಾನ್ಯ ಸಭೆಯಲ್ಲಿ ಅನಧಿಕೃತ ತರಕಾರಿ ಮಾರುಕಟ್ಟೆ ಸ್ಥಳಾಂತರಿಸಲು ತೀರ್ಮಾನಿಸಲಾಗಿತ್ತು.ಉಪಲೋಕಯುಕ್ತರು ಆದೇಶಕ್ಕೆ ಕಿಮ್ಮತ್ತು ಇಲ್ಲದಂತಾಗಿದೆ. ಸ್ಥಳಾಂತರಕ್ಕೆ ವಿಳಂಬ ಮಾಡಲಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಜನಪ್ರತಿನಿಧಿಗಳ ಒತ್ತಡಕ್ಕೆ ಮಹಾನಗರ ಪಾಲಿಕೆ ಅಧಿಕಾರಿಗಳು ಮಣಿಯಬಾರದು.ಮಹಾನಗರ ಪಾಲಿಕೆಯು ಅಧಿಕೃತವಾಗಿ ಗುರುತಿಸಿದ ಉಸ್ಮಾನಿಯಾ ತರಕಾರಿ ಮಾರುಕಟ್ಟೆ ಮತ್ತು ರೈತ ಮಾರುಕಟ್ಟೆಗಳಲ್ಲಿ ಮಾತ್ರ ತರಕಾರಿ ಮಾರಾಟಕ್ಕೆ ಅವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದರು.ಅನಧಿಕೃತ ಸ್ಥಳದಲ್ಲಿ ತರಕಾರಿ ಮಾರಾಟಕ್ಕೆ ಅವಕಾಶ ನೀಡುತ್ತಿರುವುದರಿಂದ ಮಹಾನಗರ ಪಾಲಿಕೆಗೆ ಆದಾಯವೂ ಕೈ ತಪ್ಪಿದೆ.

# ಸಂಭ್ರಮದಿಂದ ನಡೆದ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ, ಕಲೋತ್ಸವ



- **ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ :**

ಮಕ್ಕಳ ಪ್ರತಿಭೆಯನ್ನು ಬೆಳಕಿಗೆ ತರಲು ಪ್ರತಿಭಾ ಕಾರಂಜಿ ಅತ್ಯುತ್ತಮ ಮಾಧ್ಯಮವಾಗಿದೆ. ಸಾಹಿತ್ಯ, ಸಾಂಸ್ಕೃತಿಕವಾಗಿ ತೊಡಗಿಸಿಕೊಳ್ಳಲು ಈ ಸ್ಪರ್ಧೆಯು ಮಕ್ಕಳಲ್ಲಿ ಹೊಸ ಚೇತನ ಹಾಗೂ ಆತ್ಮವಿಶ್ವಾಸ ಮೂಡಿಸಲು ಕಾರಣವಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕಿ ಲತಾ ಎಂ. ನಾಯಕ ಹೇಳಿದರು.ಮಂಗಳವಾರ ಪಟ್ಟಣದ ಸ್ವಾತಂತ್ರ್ಯ ಸಂಗ್ರಾಮ ಭವನದಲ್ಲಿ ನಡೆದ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಉದ್ಘಾಟಿಸಿ ಅವರು ಮಾತನಾಡಿದರು. ಈ ಸ್ಪರ್ಧೆಯಲ್ಲಿ ಒಟ್ಟು ಹಿ.ಪ್ರಾ. ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ 37 ಸ್ಪರ್ಧೆಗಳು ನಡೆಯಲಿದ್ದು, 111 ನಿರ್ಣಾಯಕರು ಕಾರ್ಯನಿರ್ವಹಿಸಲಿದ್ದಾರೆ. ಇಂತಹ ಸ್ಪರ್ಧೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳು ತಮ್ಮ ಬದುಕಿನಲ್ಲಿ ಅನೇಕ ನಿರ್ಣಾಯಕ ಹಂತದ ಸ್ಪರ್ಧೆಯನ್ನು ಎದುರಿಸಿ ಉನ್ನತ ಸ್ಥಾನ ಪಡೆದಿರುತ್ತಾರೆ ಎಂದರು.

ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಕುಮಟಾ ಇದರ ಉಪ ನಿರ್ದೇಶಕ ಎನ್.ಆರ್. ಹೆಗಡೆ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಆನಂದು ಗಾಂವಕರ, ಪ್ರಮುಖರಾದ ಸುಧೀರ ನಾಯಕ, ಕಲ್ಪನಾ ನಾಯಕ, ಶುಭಾ ನಾಯಕ, ಜಗದೀಶ ಜಿ. ನಾಯಕ ಹೊಸ್ಕೇರಿ, ಮಂಜುನಾಥ ನಾಯಕ, ಮಂಜುನಾಥ ನಾಯಕ, ಮಹೇಶ ನಾಯಕ, ದೇವರಾಯ ನಾಯಕ, ಪದ್ಮಾ ನಾಯಕ, ನಾಗರಾಜ ರಾಯ್ಕರ, ಸಂಜಯ, ಗಣಪತಿ ನಾಯಕ, ಎಂ.ಜಿ. ನಾಯ್ಕ, ರಾಜೇಶ ನಾಯಕ ಉಪಸ್ಥಿತರಿದ್ದರು. ಶಿಕ್ಷಣಾಧಿಕಾರಿ ಮಂಗಲಲಕ್ಷ್ಮೀ ಪಾಟೀಲ ಸ್ವಾಗತಿಸಿದರು. ಶಿಕ್ಷಕ ರಾಜೇಶ ನಾಯಕ ನಿರೂಪಿಸಿದರು. ಭಾಸ್ಕರ ಗಾಂವಕರ ವಂದಿಸಿದರು.

# ಕುವೆಂಪು ಸಾಹಿತ್ಯ ಅಧ್ಯಯನದಿಂದ ಒಳ್ಳೆಯ ಭವಿಷ್ಯ- ಪ್ರೊ. ಬಿ.ಕೆ ರವಿ

**ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ :**

ರಾಷ್ಟ್ರಕವಿ ಕುವೆಂಪು ಅವರ ಜನ್ಮದಿನಾಚರಣೆಯನ್ನು ಕೊಪ್ಪಳ ವಿಶ್ವವಿದ್ಯಾಲಯದಲ್ಲಿ ಸಂಭ್ರಮದಿಂದ ಆಚರಿಸಲಾಯಿತು. ಕೊಪ್ಪಳ ವಿ.ವಿ. ಕುಲಪತಿಗಳಾದ ಪ್ರೊ. ಬಿ.ಕೆ. ರವಿಯವರು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ತಮ್ಮ ವಿದ್ಯಾರ್ಥಿ ಜೀವನದಲ್ಲಿ ಕುವೆಂಪು ಅವರು, ಸೇರಿದಂತೆ ಅನೇಕ ಹಿರಿಯ ಸಾಹಿತಿಗಳೊಂದಿಗಿನ ತಮ್ಮ ಒಡನಾಟವನ್ನು ಸ್ಮರಿಸಿದರಲ್ಲದೆ, ಅವರ ಸಾಹಿತ್ಯದ ಮಹತ್ವ, ಕುವೆಂಪು ಅವರ ರಾಮಾಯಣ ದರ್ಶನಂ ಕೃತಿ, ಅವರು ಹಳೆಗನ್ನಡ ಸಾಹಿತ್ಯಕ್ಕೆ ನೀಡಿರುವ ಕೊಡುಗೆ, ಅವರ ವಿಶ್ವ ಮಾನವ ಸಂದೇಶವನ್ನು ನೆನೆದರು. ವಿದ್ಯಾರ್ಥಿಗಳು ಅವರ ಸಾಹಿತ್ಯವನ್ನು ಅಧ್ಯಯನ ಮಾಡಿದರೆ ಒಳ್ಳೆಯ ಭವಿಷ್ಯವಿದೆ ಎಂದರು.

ಇದೇ ವೇಳೆ ಮಾತನಾಡಿದ ಇನ್ನೋರ್ವ ಮುಖ್ಯ ಅತಿಥಿಗಳಾದ ಕುಲಸಚಿವರಾದ ಪ್ರೊ. ಎಸ್ ವಿ.ಡಾಣಿಯವರು ಕುವೆಂಪುರವರು ಹೇಳಿದ ಮತಗಳು ಮನುಜ ಪಥಗಳಾಗಬೇಕೆಂಬ ಮಾತುಗಳು ಸೇರಿದಂತೆ, ಅವರ ವಿಶ್ವಮಾನವ ಸಂದೇಶವನ್ನು ಸಕಲರು ಪಸರಿಸಬೇಕೆಂದರು.



ವಿ.ವಿ. ಆಡಳಿತಾಧಿಕಾರಿ ಪ್ರೊ. ತಿಮ್ಮಾರೆಡ್ಡಿ ಮೇಟಿಯವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಕುವೆಂಪುರವರ ಭಾವಚಿತ್ರಕ್ಕೆ ಶ್ರದ್ಧಾ ಭಕ್ತಿಗಳಿಂದ ಪೂಜೆ, ಪ್ರಾರ್ಥನೆ ಸಲ್ಲಿಸಲಾಯಿತು. ವಿ.ವಿ.ಯ ಸಕಲ ಬೋಧಕ, ಬೋಧಕೇತರ ಸಿಬ್ಬಂಧಿ ಈ ವೇಳೆ ಉಪಸ್ಥಿತರಿದ್ದರು.

# ಆಸಕ್ತಿಯುಳ್ಳವರಿಂದ ಎಕ್ಸ್‌ಪ್ರೆಷನ್ ಆಫ್ ಇಂಟರೆಸ್ಟ್‌ನ್ನು ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಕಲಬುರಗಿಯ ವಾಜಪೇಯಿ ಬಡಾವಣೆಯಲ್ಲಿ ಹೊಸದಾಗಿ ನಿರ್ಮಿಸಲಾಗಿರುವ ಐ.ಎ.ಎಸ್./ಕೆ.ಎ.ಎಸ್. (IAS/KAS) ತರಬೇತಿ ಕೇಂದ್ರದಲ್ಲಿ 500 ಅಭ್ಯರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ನೀಡಲು ಉದ್ದೇಶಿಸಿದ್ದು, ಸದರಿ ತರಬೇತಿ ಕೇಂದ್ರದ ಉಪಹಾರ ಕೇಂದ್ರವನ್ನು ಮಾಸಿಕ ಬಾಡಿಗೆ ಆಧಾರದ ಮೇರೆಗೆ ಕ್ಯಾಂಟೀನ್ ನಡೆಸಲು ಆಸಕ್ತಿಯುಳ್ಳವರಿಂದ ಎಕ್ಸ್‌ಪ್ರೆಷನ್ ಆಫ್ ಇಂಟರೆಸ್ಟ್ (EOI) ನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ. ಈಗಾಗಲೇ ಡಿಸೆಂಬರ್ 31 ರಿಂದ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಆರಂಭಗೊಂಡಿದ್ದು, ಮಾಹೆಯಾನ ಬಾಡಿಗೆ ದರ ರೂ. 18,000 ನಿಗದಿಪಡಿಸಲಾಗಿದೆ. ಆಸಕ್ತಿಯುಳ್ಳ ಸಂಸ್ಥೆಯವರು ಬಿಡ್ ನಮೂನೆಯನ್ನು ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಕಚೇರಿಯಿಂದ ಪಡೆದು ನಿಗದಿತ ಅವಧಿಯೊಳಗೆ ಮತ್ತು ಉಪಹಾರದ ದರವನ್ನು ಭರ್ತಿ ಮಾಡಿ 2026ರ ಜನವರಿ 6 ರ ಸಂಜೆ 5 ಗಂಟೆಯೊಳಗಾಗಿ ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರ ಕಚೇರಿಯಲ್ಲಿ ಸಲ್ಲಿಸಬೇಕು. ತದನಂತರ ಬರುವ ಯಾವುದೇ ಎಕ್ಸ್‌ಪ್ರೆಷನ್ ಆಫ್ ಇಂಟರೆಸ್ಟ್‌ನ್ನು ಪರಿಗಣಿಸಲಾಗುವುದಿಲ್ಲ.

2026ರ ಜನವರಿ 7 ರಂದು ಬೆಳಿಗ್ಗೆ 11 ಗಂ–ಟೆಗೆ ಬಿಡ್ ತೆರೆಯಲಾಗುತ್ತದೆ. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರ ಕಚೇರಿಯನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ 08472–278621ಗೆ ಸಂಪರ್ಕಿಸಲು ಕೋರಲಾಗಿದೆ.

# ಅರ್ಜಿ ಸಲ್ಲಿಕೆ ಕೊನೆಯ ದಿನಾಂಕ ವಿಸ್ತರಣೆ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಪ್ರಸಕ್ತ 2025–26ನೇ ಸಾಲಿನ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳಾದ ಉದ್ಯೋಗಿನಿ, ಚೇತನಾ ಯೋಜನೆ, ಧನಶ್ರೀ ಯೋಜನೆ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ ಮತ್ತು ಮಾಜಿ ದೇವದಾಸಿ ಮಹಿಳೆಯರ ಆದಾಯೋತ್ಪನ್ನ ಚಟುವಟಿಕೆ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಜಿ ಸಲ್ಲಿಕೆ ಕೊನೆಯ ದಿನಾಂಕವನ್ನು ಕಾರಣಾಂತರಗಳಿಂದ 2026ರ ಜನವರಿ 15 ರವರೆಗೆ ವಿಸ್ತರಿಸಲಾಗಿದೆ.

ಈ ಹಿಂದೆ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕವನ್ನು 2025ರ ಡಿಸೆಂಬರ್ 15ರಂದು ನಿಗದಿಪಡಿಸಲಾಗಿತ್ತು. ಆಸಕ್ತರು ಸೇವಾಸಿಂಧು ಜಾಲತಾಣದಲ್ಲಿ ಆನ್‌ಲೈನ್ ಮೂಲಕ ಮೇಲ್ಕಂಡ ಕೊನೆಯ ದಿನಾಂಕದೊಳಗಾಗಿ ಅರ್ಜಿ ಸಲ್ಲಿಸಬೇಕೆಂದು ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೆಸರು ನೋಂದಣಿಗೆ ಜನವರಿ 7 ಕೊನೆಯ ದಿನ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

2025–26 ನೇ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಯುವಜನರಲ್ಲಿ ಸೃಜನಶೀಲತೆ ಮತ್ತು ನಾಯಕತ್ವದ ಕೌಶಲ್ಯಗಳನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಕಲಬುರಗಿ ಜಿಲ್ಲೆಯ ಯುವಜನರಿಗೆ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ 2026ರ ಜನವರಿ 10 ಹಾಗೂ 11 ರಂದು ಎರಡು ದಿನಗಳ ಕಾಲ ಕಲಬುರಗಿ ಜಿಲ್ಲೆಯ ಜಿಲ್ಲಾ ಕ್ರೀಡಾಂಗಣದಲ್ಲಿ ಸೃಜನಶೀಲತೆ ಮತ್ತು ವ್ಯಕ್ತಿತ್ವ ವಿಕಸನ ತರಬೇತಿಯನ್ನು ನೀಡಲಾಗುತ್ತಿದ್ದು, ಇದಕ್ಕಾಗಿ ಆಸಕ್ತಿಯುಳ್ಳ ಜಿಲ್ಲೆಯ ಯುವಜನರು ತಮ್ಮ ಹೆಸರನ್ನು ನೋಂದಣಿ ಮಾಡಿಕೊಳ್ಳಬೇಕೆಂದು ಎಂದು ಕಲಬುರಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಭ್ಯರ್ಥಿಗಳು ಯಾವುದೇ ಪದವಿ (2023–24 ನೇ ಸಾಲಿನ ನಂತರ ಪೂರ್ಣಗೊಳಿಸಿರಬೇಕು/ಅಂತಿಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರಬೇಕು. ಗರಿಷ್ಠ 29 ವರ್ಷ ವಯೋಮಾನದ ಆಸಕ್ತ ಯುವಕ/ಯುವತಿಯರು ಭಾಗವಹಿಸಬಹುದಾಗಿದೆ. ಅಭ್ಯರ್ಥಿಗಳು ಆಧಾರ ಕಾರ್ಡ, ಅಂಕ ಪಟ್ಟಿಗಳ ಝೆರಾಕ್ಸ್ ಪ್ರತಿ, ಹಾಗೂ ಇತ್ತೀಚಿನ 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳೊಂದಿಗೆ ಕಲಬುರಗಿ ಚಂದ್ರಶೇಖರ ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿನ ಯುವ ಸಬಲೀಖರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ 2026ರ ಜನವರಿ 7ರ ಸಂಜೆ 5 ಗಂಟೆಯೊಳಗಾಗಿ ನೋಂದಣಿ ಮಾಡಿಕೊಳ್ಳಬೇಕು. 60 ಜನ ಯುವಕ/ಯುವತಿಯರಿಗೆ ಮಾತ್ರ ಈ ತರಬೇತಿ ನೀಡಲಾಗುತ್ತಿದ್ದು, ಮೊದಲು ಬಂದವರಿಗೆ ಆದ್ಯತೆ ನೀಡಲಾಗುತ್ತದೆ. ಯುವಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸೃಜನಶೀಲತೆ ಮತ್ತು ವ್ಯಕ್ತಿತ್ವ ವಿಕಸನ ತರಬೇತಿಯ ಸದುಪಯೋಗ ಪಡೆಯಬೇಕೆಂದು ಅವರು ತಿಳಿಸಿದ್ದಾರೆ.

# ಅತ್ಯಾಧುನಿಕ ಸೇವೆಯೊಂದಿಗೆ ಆರೋಗ್ಯ ಕ್ಷೇತ್ರದಲ್ಲಿ ಹೊಸ ಯಗ ಆರಂಭವಾಗಲಿ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಅತಿ ಕಡಮೆ ವೆಚ್ಚದಲ್ಲಿ ಗುಣಮಟ್ಟದ ಚಿಕಿತ್ಸೆ ನೀಡುವ ಎಚ್‌ಎಸ್‌ಕೆ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆ ಸೇವೆ ಜನವರಿ 1ರಿಂದ ಪ್ರಾರಂಭದೊಂದಿಗೆ ಆರೋಗ್ಯ ಕ್ಷೇತ್ರದಲ್ಲಿ ಹೊಸ ಯುಗ ನಿರ್ಮಾಣವಾಗಲಿ ಎಂದು ಶ್ರೀಶೈಲ ಫೀಠದ ಜಗದ್ಗುರು ಡಾ.ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಮಿಗಳಿಗೆ ಎಂದು ಹೇಳಿದರು.

ಅವರು ಬುಧವಾರ ಬಿವಿವಿಸಂಘದ ಮೇಡಿಕಲ್ ಕಾಲೇಜಿನ ಆವರಣದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆಯ ಸೇವೆ 2026 ಜನವರಿಯಿಂದ ಪ್ರಾರಂಭಗೊಳ್ಳುವ ಸಂಧರ್ಭದಲ್ಲಿ ಭೇಟಿ ನೀಡಿ ಅಲ್ಲಿನ ಅತ್ಯಾಧುನಿಕ ಸೌಲಭ್ಯಗಳನ್ನು ವಿಕ್ಷಿಸಿ ಮಾತನಾಡಿದ ಅವರು ನಾಲ್ಕು ನೂರು ಹಾಸಿಗೆಗಳ ಈ ಆಸ್ಪತ್ರೆಯಲ್ಲಿ ಅತ್ಯಾಧುನಿಕ ಉಪಕರಣಗಳನ್ನೊಳಗೊಂಡ ಸುಸಜ್ಜಿತ ವಿಭಾಗಗಳಲ್ಲಿ ನುರಿತ ತಜ್ಞವೈದ್ಯರುಗಳಿದ್ದು, ಅತಿಕಡಿಮೆ ವೆಚ್ಚದಲ್ಲಿ ಗುಣಮಟ್ಟದ ಚಿಕಿತ್ಸೆ ನೀಡಲಿದ್ದಾರೆ. ನಗರದ ಸಾರ್ವಜನಿಕರು ಮತ್ತು ಗ್ರಾಮೀಣ ಪ್ರದೇಶದ ಜನತೆ ಈ ಸೇವಾ ಸೌಲಭ್ಯಗಳನ್ನು ಪಡೆದುಕೊಳ್ಳಬೇಕೆಂದು ಎಂದರು.

ವೈದ್ಯಕೀಯ ಕಾಲೇಜಿನ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ ಬೇವೂರ, ಸೂಪರ ಸ್ಪೇಷಾಲಿಟಿ ಆಸ್ಪತ್ರೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ನವೀನ ಚರಂತಿಮಠ, ಪ್ರಾಚಾರ್ಯ ಡಾ. ಭುವನೇಶ್ವರಿ ಯಳಿಮಲಿ, ಉಪ ಪ್ರಾಚಾರ್ಯ ಡಾ. ಸಿ.ಎಸ್. ಹಿರೇಮಠ, ವೈದ್ಯಕೀಯ ಅಧಿಕ್ಷಕ ಡಾ. ಶ್ರೀರಾಮ ಕೋರಾ ಸೇರಿದಂತೆ ಅನೇಕರು ಇದ್ದರು.

# ಸಚಿವರ ಆಪ್ತರ ನಿವಾಸದ ಮೇಲೆ ಸಿಬಿಐ ಅಧಿಕಾರಿಗಳಿಂದ ದಾಳಿ



ಬಳ್ಳಾರಿ: ಮಾಜಿ ಸಚಿವ ಬಿ.ನಾಗೇಂದ್ರ ಅವರ ಆಪ್ತರಾದ ವಿಶ್ವನಾಥ್ ಹಾಗೂ ಮಾರುತಿ ಅವರ ನಿವಾಸದ ಮೇಲೆ ಸಿಬಿಐ ಅಧಿಕಾರಿಗಳು ಬುಧವಾರ ಬೆಳ್ಳಂ ಬೆಳಿಗ್ಗೆ ದಾಳಿ ನಡೆಸಿ ಮಹತ್ವದ ದಾಖಲೆ ಹಾಗೂ ಮಾಹಿತಿಯನ್ನು ಕಲೆ ಹಾಕಿದರು. ನಗರದ ತೇರು ಬೀದಿಯ ವಿಶ್ವನಾಥ್ ಅವರ ನಿವಾಸ ಹಾಗೂ ನಗರದ ಹುಸೇನ್ ನಗರದ ಮಾರುತಿ ಅವರ ನಿವಾಸದ ಮೇಲೆ ಸಿಬಿಐ ಅಧಿಕಾರಿಗಳ ತಂಡ ಏಕಕಾಲಕ್ಕೆ ದಾಳಿ ನಡೆಸಿದರು. ಆದರೆ, ನಿವಾಸದಲ್ಲಿ ವಿಶ್ವನಾಥ್ ಹಾಗೂ ಮಾರುತಿ ಅವರು ಇರಲಿಲ್ಲ ಎಂದು ತಿಳಿದು ಬಂದಿದ್ದು, ವಿಶ್ವನಾಥ್ ಅವರ ಸಹೋದರ ಮಹೇಶ್ ಹಾಗೂ ಅವರ ಪತ್ನಿಯನ್ನು ವಿಚಾರಣೆಗೆ ಒಳಪಡಿಸಿ, ಮಾಹಿತಿಯನ್ನು ಕಲೆ ಹಾಕಿದರು. ನಾಗೇಂದ್ರ ಅವರ ಮತ್ತೊಬ್ಬ ಆಪ್ತರಾದ ಮಾರುತಿ ಅವರ ಸಂಬಂಧಿಕರನ್ನು ವಶಕ್ಕೆ ಪಡೆದು ವಿಚಾರಣೆಗೆ ಒಳಪಡಿಸಿದರು ಎಂದು ತಿಳಿದು ಬಂದಿದೆ. ಸಿಬಿಐ ಅಧಿಕಾರಿಗಳ ಈ ದಾಳಿ,

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣಕ್ಕೆ ಸಂಬಂಧಿಸಿ ನಡೆದಿದೆ ಎಂದು ತಿಳಿದು ಬಂದಿದೆ. ಮಾರುತಿ ಹಾಗೂ ವಿಶ್ವನಾಥ್ ಅವರ ಖಾತೆಯಲ್ಲಿ ನಡೆದ ಸಂಪೂರ್ಣ ಹಣಕಾಸಿನ ವ್ಯವಹಾರ, ವಹಿವಾಟು ಕುರಿತು ಅಧಿಕಾರಿಗಳು 4 ಗಂಟೆಗೂ ಹೆಚ್ಚು ಕಾಲ ತನಿಖೆ ನಡೆಸಿದರು ಎಂದು ತಿಳಿದು ಬಂದಿದೆ. ಹೊಸ ವರ್ಷದ ಸಂಭ್ರಮದ ಕ್ಷಣವನ್ನು ಕಣ್ತುಂಬಿಕೊಳ್ಳಲು ತುದಿಗಾಲ ಮೇಲೆ ನಿಂತಿದ್ದ, ಗ್ರಾಮಿಣ ಶಾಸಕ, ಮಾಜಿ ಸಚಿವ ಬಿ.ನಾಗೇಂದ್ರ ಹಾಗೂ ಅವರ ಆಪ್ತರಿಗೆ, ಸಿಬಿಐ ಅಧಿಕಾರಿಗಳು ಬೆಳ್ಳಂ ಬೆಳಿಗ್ಗೆ ಮನೆ ಮೇಲೆ ದಾಳಿ ನಡೆಸಿ ಶಾಕ್ ನೀಡಿದ್ದಾರೆ.

# ನಕಲಿ ದಾಖಲೆ ಸೃಷ್ಟಿಸಿ ವಂಚನೆ ಕ್ರಮಕ್ಕೆ ಒತ್ತಾಯ



**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಭೂಮಿ ಅತಿಕ್ರಮಣ ಸೇರಿ ನಕಲು ದಾಖಲೆಗಳನ್ನು ಸೃಷ್ಟಿಸಿ ಜನಗಳಿಗೆ ವಂಚನೆ ಮಾಡುತ್ತಿರುವ ಆಂಬೋಜಿರಾವ್ ಹಾಗೂ ಇವರ ಕುಟುಂಬ ಗಡಿಪಾರು ಮಾಡಬೇಕು ಎಂದು ಭೀಮಾ ಆರ್ಮಿ ಸಂಘಟನೆ ಜಿಲ್ಲಾಧ್ಯಕ್ಷರಾದ ಪ್ರವೀಣ್ ಕುಮಾರ ಅವರು ಒತ್ತಾಯಿಸಿದ್ದಾರೆ.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಸುಗುಣ ಬಾಯಿ ಗಂಡ ದತ್ತುರಾವ್ ಅವರ ಜಮೀನಿನ ಸರ್ವೆ ನಂ.114,15 ಎಕರೆ 3 ಗುಂಟೆ ವಿಸ್ತೀರ್ಣ ಇದ್ದು, ಯರಮರಸ್ ಸೀಮಂತರದಲ್ಲಿ ಇರುವ ಈ ಜಮೀನಿನ ವಾರಸುದಾರ ಆಗಿದ್ದು, ಈ ಜಮೀನಿನ ನಕಲು ದಾಖಲೆಗಳನ್ನು ಸೃಷ್ಟಿಮಾಡಿದ ವ್ಯಕ್ತಿ ಆಂಬೋಜಿ ರಾವ್ ತಂದೆ ಹೀರಲಾಲ್ ಮತ್ತು ಸ್ವಾತಿ ಗಂಡ ಆಂಬೋಜಿ ರಾವ್ ಇವರು ತಂದೆ ಹೀರಲಾಲ್ ಇವರೆಲ್ಲರೂ ಸೇರಿಕೊಂಡು ನಕಲು ಮರಣ ಪ್ರಮಾಣ ಪತ್ರ ಸೃಷ್ಟಿಸಿ ವಂಚನೆ ಮಾಡಲಾಗುತ್ತಿದೆ ಎಂದು ಆರೋಪಿಸಿದರು.

ನಕಲು ಆಧಾರ ಕಾರ್ಡ್ ಸಹ ಸೃಷ್ಟಿಮಾಡಿರುತ್ತಾರೆ. ತಹಸೀಲ್ದಾರ್ ಹಾಗೂ ಹೀಮಮಾಪಾಷ ಮತ್ತು ರಾಯಚೂರು ಜಿಲ್ಲೆ ಆರ್.ಐ ಅಧಿಕಾರಿ ಮತ್ತು ವಿ ಎ ಅಧಿಕಾರಿಗಳು, ಅಂಬೋಜಿ ರಾವ್ ಹೀರಲಾಲ್ ಹಾಗೂ ಸ್ವಾತಿ ಹೆಸರಿನಲ್ಲಿ ಎಲ್ಲರೂ ಸೇರಿಕೊಂಡು ನಕಲು ದಾಖಲೆ ಕೊಡುವುದಕ್ಕೆ ಕೈಜೋಡಿಸಿರುತ್ತಾರೆ. ಈ ಜಮೀನಿನ ಮೂಲ ಪಟ್ಟದಾರರಾದ ಸುಗುಣ ಬಾಯಿ ಅವರಿಗೆ ಸುಮಾರು ವರ್ಷಗಳ ಕಾಲ ಅವರ ಹೆಸರಿನಲ್ಲಿ ಜಮೀನು ಇರುತ್ತದೆ. ಸುಗುಣ ಬಾಯಿ ಅವರು ಮರಣ ಹೊಂದಿರುವುದನ್ನು ಅರಿತುಕೊಂಡು ಆಕೆಯ ಮರಣ ಪ್ರಮಾಣ ಪತ್ರವನ್ನು ಪಡೆದುಕೊಂಡು ಈ ಜಮೀನನ್ನು ಅಂಬೋಜಿ ರಾವ್ ಹೀರಲಾಲ್ ತನ್ನ ಹೆಸರು ಸೇರಿಸಿಕೊಳ್ಳಲು ಅಧಿಕಾರಿಗಳನ್ನು ಬಳಕೆ ಮಾಡಿದ್ದಾರೆ. ಮಹಾನಗರ ಪಾಲಿಕೆ ಸಿಬ್ಬಂದಿ ಅವರು ಮರಣ ಹೊಂದಿದ ವ್ಯಕ್ತಿಯ ಕುಟುಂಬಸ್ಥರನ್ನು ವಿಚಾರಣೆ ಮಾಡಿದೆ ಸರ್ಕಾರದ ಕಾನೂನಿನ ನಿಯಮ ಆದೇಶ

ದಿಕ್ಕರಿಸಿ, ಮನಸಿಗೆ ಬಂದಂತೆ ಕಾನೂನಿನ ನಿಯಮಗಳನ್ನು ಉಲ್ಲಂಘಿಸಿ ಮರಣ ಪ್ರಮಾಣ ಪತ್ರವನ್ನು ಕೊಟ್ಟಿದ್ದಾರೆ.

# ವೈಕುಂಠ ಏಕಾದಶಿ:ಎಸ್ ಆರ್ ರೆಡ್ಡಿಗೆ ಸನ್ಮಾನಿಸಿದ ತಿಪ್ಪರಾಜು ಹವಲ್ದಾರ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**



ವೈಕುಂಠ ಏಕಾದಶಿ ಯಂದು ರಾಯಚೂರು ನಗರದ ನವೋದಯ ಕಾಲೇಜು ಕ್ಯಾಂಪಸ್ ನಲ್ಲಿನ ಶ್ರೀವೆಂಕಟೇಶ್ವರ ದೇವಾಲಯಕ್ಕೆ ಕುಟುಂಬಸಮೇತವಾಗಿ ಆಗಮಿಸಿದ ಮಾಜಿ ಶಾಸಕರು ತಿಪ್ಪರಾಜು ಹವಲ್ದಾರ, ವೆಂಕಟರಮಣನ ದರ್ಶನ ಪಡೆದು ನವೋದಯ ವಿದ್ಯಾಸಂಸ್ಥೆಗಳ ಸಂಚಾಲಕರು, ತೆಲಂಗಾಣದ ನಾರಾಯಣಪೇಟೆ ಮಾಜಿ ಶಾಸಕ ಎಸ್ ಆರ್ ರೆಡ್ಡಿ ಅವರಿಗೆ ಶಾಲು ಹೊದಿಸಿ, ಹಾರ ಹಾಕಿ ಆತ್ಮೀಯವಾಗಿ ಸನ್ಮಾನಿಸಿದರು.

ಇಂತಹ ಪವಿತ್ರ ದಿನಗಳಂದು, ತಿರುಪತಿ ತಿಮ್ಮಪ್ಪನ ಸನ್ನಿಧಾನಕ್ಕೆ ಹೋಗಲಾರದ ಎಷ್ಟೋ ಭಕ್ತರಿಗೆ ಸಾಕ್ಷಾತ್ ತಿರುಪತಿ ದೇವಸ್ಥಾನದಷ್ಟೇ ಅಚ್ಚುಕಟ್ಟಾದ

ವ್ಯವಸ್ಥೆಗಳೊಂದಿಗೆ ದರ್ಶನ ಭಾಗ್ಯ ನಮ್ಮ ರಾಯಚೂರು ನಗರದಲ್ಲಿಯೇ ಸಿಗುವಂತಾಗಿರುವುದು ಎಸ್ ಆರ್ ರೆಡ್ಡಿಯವರ ಧಾರ್ಮಿಕ ನಿಷ್ಠೆಯ ಪ್ರತೀಕವಾಗಿದೆ ಎಂದು ತಿಪ್ಪರಾಜು ಬಣ್ಣಿಸಿದರು. ವೈಕುಂಠ ಏಕಾದಶಿಯ ಪವಿತ್ರ ದಿನವಾದ ಮಂಗಳವಾರ ಸಹಸ್ರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದು, ಸಂಪೂರ್ಣ ನವೋದಯ ಕ್ಯಾಂಪಸ್ ಭಕ್ತ ಸಮೂಹದಿಂದ ತುಂಬಿಹೋಗಿದ್ದು, ಸಾಕಷ್ಟು ವಿದ್ಯುತ್ ಹಾಗೂ ಹೂಗಳ ಅಲಂಕಾರ ಎಲ್ಲರ ಮನ ಸೆಳೆಯುವಂತಿದ್ದದ್ದು ವಿಶೇಷವಾಗಿತ್ತು.

# ವಿಜೃಂಭಣೆಯಿಂದ ಶ್ರೀ ಸದ್ಗುರು ಮಹಾದೇವ ತಾತನವರ ಮಹಾರಥೋತ್ಸವ

• **ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ:**

ನಗರದ ಊರು ವಲಯದ ಹೊಸಪೇಟೆ ರಸ್ತೆಯ ವಿನಾಯಕ ನಗರದಲ್ಲಿ ನೆಲೆಸಿರುವ ಅಲ್ಲಿಪುರ ಶ್ರೀ ಸದ್ಗುರು ಮಹಾದೇವ ತಾತನ 38ನೇ ವರ್ಷದ ಮಾಹಾ ಮಹೋತ್ಸವ ಸಂದರ್ಭವಾಗಿ ವೈಕುಂಠ ಏಕಾದಶಿ ದಿನದಂದು ಮಹಾ ರಥೋತ್ಸವ ವಿಜೃಂಭಣೆಯಿಂದ ನಡೆಯಿತು. ಈ ಮಹಾ ರಥೋತ್ಸವಕ್ಕೆ ಸಾವಿರಾರು ಸಂಖ್ಯೆ ಭಕ್ತರು ಪಾಲ್ಗೊಂಡರು. ಸದ್ಗುರು ಮಹಾದೇವ ತಾತನವರ ಮಹಾರಥೋತ್ಸವಕ್ಕೆ ಅಲ್ಲಿಪುರ ವಿನಾಯಕನಗರ ಹಾಗೂ ಸುತ್ತಮುತ್ತಿನ ಅನೇಕ ಗ್ರಾಮಗಳು ಹಬ್ಬವನ್ನು ಆಚರಣೆ ಮಾಡಿದ್ದಾರೆ ಈ ಮಹಾ ರಥೋತ್ಸವಕ್ಕೆ ಅನೇಕ ಜನ ಮಹಾ ಗಣ್ಯ ವ್ಯಕ್ತಿಗಳು ಹಾಗೂ ಅನೇಕ ರಾಜಕೀಯ ಪ್ರಮುಖರು ಪಾಲ್ಗೊಂಡು ತಾತನ ಆಶೀರ್ವಾದಕ್ಕೆ ಭಾಗಿಯಾಗಿದ್ದಾರೆ. ಮಹ ರಥೋತ್ಸವ ಶಾಂತಿ ನಮ್ಮ ದಿಂದ ಜರುಗಿದೆ. ರಥೋತ್ಸವಕ್ಕೆ ಭಕ್ತರು ಊಹು ,ಹಣ್ಣನ್ನು ಎಸೆದು ತಾತನ ಕೃಪೆಗೆ ಭಾಗಿಯಾದರು ಯಾವುದೇ ಗೊಂದಲ ಸೃಷ್ಟಿಯಾಗಲಾರದಂತೆ ಪೊಲೀಸ್ ಇಲಾಖೆ ಹಾಗೂ ತಾತನ ಮಠದ ಕಮಿಟಿ ಸದಸ್ಯರು ಪದಾಧಿಕಾರಿಗಳು, ಹಾಗೂ ವಿನಾಯಕ ನಗರದ ಪ್ರಮುಖ ಮುಖಂಡರು ಅಲ್ಲಿಪುರ ಗ್ರಾಮದ ಪ್ರಮುಖರು ಪಾಲ್ಗೊಂಡರು.



# ಕೌಶಲ್ಯಾಭಿವೃದ್ಧಿ ಮತ್ತು ಉದ್ಯೋಗ ಸೃಷ್ಟಿ




**ಮಲ್ಲಮ್ಮ ನುಡಿ ವಾರ್ತೆ,ಬಳ್ಳಾರಿ:**

ಜೆ ಎಸ್ ಡಬ್ಲ್ಯೂ ಫೌಂಡೇಶನ್ ವತಿಯಿಂದ ಸಂಡೂರು ತಾಲೂಕಿನ ತೋರಣಗಲ್ಲು ಓ ಪಿ ಜೆ ಕೇಂದ್ರದಲ್ಲಿ ಕಳೆದ 45 ದಿನಗಳಿಂದ ಗ್ರಾಮೀಣ ಯುವಕರಿಗೆ ಮೊಬೈಲ್ ಅಸೆಂಬ್ಲಿ ಹಾಗೂ ರಿಪೇರಿ ತರಬೇತಿ ನೀಡಲಾಗುತ್ತಿತ್ತು. ಈ ತರಬೇತಿಯ ಮೊದಲ ತಂಡದಲ್ಲಿ 28 ಅಭ್ಯರ್ಥಿಗಳು ಯಶಸ್ವಿಯಾಗಿ ತರಬೇತಿಯನ್ನು ಪೂರ್ಣಗೊಳಿಸಿದ್ದಾರೆ.

ಈ ಪೈಕಿ 19 ಅಭ್ಯರ್ಥಿಗಳಿಗೆ ಈಗಾಗಲೇ ಬೆಂಗಳೂರು ಸಮೀಪದಲ್ಲಿರುವ ಟಾಟಾ ಎಲೆಕ್ಟ್ರಾನಿಕ್ಸ್ ಮತ್ತು ರಾನ್ಸಾಂಡ್ ಕಂಪನಿಯಲ್ಲಿ ಉದ್ಯೋಗ ಲಭಿಸಿದ್ದು 19000 ದಿಂದ 21000 ಸಾವಿರದವರೆಗೆ ವೇತನ ದೊರಕಿದೆ.

ಓ ಪಿ ಜೆ ಕೇಂದ್ರದದಲ್ಲಿ ತರಬೇತಿ ಸಮಾರೋಪ ಸಮಾರಂಭ ಏರ್ಪಡಿಸಿದ್ದು ಜೆ ಎಸ್ ಡಬ್ಲ್ಯೂ ಎನರ್ಜಿ ಲಿಮಿಟೆಡ್ ಸಿ ಎಸ್ ಆರ್ ಸಂಯೋಜಕರಾದ ಶ್ರೀಕಾಂತ್ ಹೆಗಡೆ ಅಭ್ಯರ್ಥಿಗಳಿಗೆ ಉದ್ಯೋಗ ಪತ್ರ ಮತ್ತು ತರಬೇತಿ ಪ್ರಮಾಣ ಪತ್ರ ವಿತರಿಸಿ ಮಾತನಾಡಿ "ಗ್ರಾಮೀಣ ಪ್ರದೇಶದ ಯುವಕರಿಗೆ

ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ಈ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಯುವಕರಿಗೆ ಇಂತಹ ಕೌಶಲ್ಯಾಭಿವೃದ್ಧಿ ತರಬೇತಿಗಳನ್ನು ನೀಡಲಾಗುವುದು, ಗ್ರಾಮೀಣ ಯುವಜನತೆ ಯಾವುದು ಕೀಳರಿಮೆಯಿಲ್ಲದೆ ಧೈರ್ಯ ಮತ್ತು ಶ್ರೇದ್ಧೆಯಿಂದ ಕೆಲಸ ನಿರ್ವಹಿಸಬೇಕು ಮತ್ತು ಬೆಂಗಳೂರು ಮುಂತಾದ ನಗರಗಳಲ್ಲಿ ಹೆಚ್ಚಿನ ಉದ್ಯೋಗಾವಕಾಶಗಳಿದ್ದು ಯುವಕರು ಕೌಶಲ್ಯವಂತರಾಗಿ ತಮ್ಮ ಬದುಕನ್ನು ಕಟ್ಟಿಕೊಳ್ಳುವಂತೆ" ಪ್ರೋತ್ಸಾಹಿಸಿದರು

ತರಬೇತಿ ಪೂರ್ಣಗೊಳಿಸಿದ ದೇವಗಿರಿ ಗ್ರಾಮದ ಅಕ್ಷತಾ ಮತ್ತು ತೋರಣಗಲ್ಲು ಗ್ರಾಮದ ಗಾಯತ್ರಿ ಮಾತನಾಡಿ "ನಾವು ಪದವಿ ಪೂರ್ಣಗೊಳಿಸಿದ್ದರು ಯಾವುದೇ ಉದ್ಯೋಗಾವಕಾಶ ಸಿಗದೇ ಈ ತರಬೇತಿಗೆ ಸೇರಿಕೊಂಡೆವು, ಇಲ್ಲಿ

ಮೊಬೈಲ್ ಅಸೆಂಬ್ಲಿ ಮತ್ತು ರಿಪೇರಿ ತರಬೇತಿ ಪಡೆದಿದ್ದೇವೆ ಮತ್ತು ನಮಗೆ ಉದ್ಯೋಗಕ್ಕೆ ಬೇಕಾದ ಸಂವಹನ ಮತ್ತು ಸಂದರ್ಶನದ ತರಬೇತಿಯನ್ನು ಸಹ ನೀಡಿದ್ದಾರೆ ಮತ್ತು

ಉತ್ತಮ ವೇತನದ ಕೆಲಸವು ಲಭಿಸಿದೆ ಇದರಿಂದ ನಮಗೆ ಅನುಕೂಲವಾಗಿದೆ" ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕಾರ್ಯಕ್ರಮ ಅನುಷ್ಠಾನ ಮಾಡುತ್ತಿರುವ ಬೆಂಗಳೂರು ಮೂಲದ ಹೆಡ್ ಹೆಲ್ಡ್ ಹೈ ಫೌಂಡೇಶನ್ ಕಾರ್ಯಕ್ರಮ ನಿರ್ದೇಶಕರಾದ ಕುಮಾರ್ ಮಂಜುನಾಥ್, ರಾಘವೇಂದ್ರ.

ಜೆ ಎಸ್ ಡಬ್ಲ್ಯೂ ಹನುಮಂತ ರಾವ್, ರಾಜಶೇಖರ್ ರಾಜು, ಶ್ರೇಷ್ಠ ಮತ್ತು ಸಿ ಎಸ್ ಆರ್ ಸಿಬ್ಬಂದಿಗಳು, ತರಬೇತುದಾರರು ಮತ್ತು 2 ನೇ ಬ್ಯಾಚ್ ಹೊಸ ಅಭ್ಯರ್ಥಿಗಳು ಭಾಗವಹಿಸಿದ್ದರು

# ತಮನ್ನಾ ಶಾಲೆ ವಿಶೇಷ ಮಕ್ಕಳಿಂದ 'ಭಕ್ತ ಪ್ರಹ್ಲಾದ' ನಾಟಕ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**



.ಜೆಎಸ್‌ಡಬ್ಲ್ಯುಫೌಂಡೇಶನ್ ತೋರಣಗಲ್ಲು ಓಪಿಜೆ ತಮನ್ನಾ ವಿಶೇಷ ಮಕ್ಕಳ ಶಾಲೆಯಲ್ಲಿ ಇತ್ತೀಚೆಗೆ ವಿಶ್ವ ವಿಕಲಚೇತನರ ದಿನಾಚರಣೆ ಹಾಗೂ ವಾರ್ಷಿಕೋತ್ಸವವನ್ನು ಸಡಗರ ಮತ್ತು ಸಂಭ್ರಮದೊಂದಿಗೆ ಆಚರಿಸಲಾಯಿತು. ಈ ಕಾರ್ಯಕ್ರಮದ ಮುಖ್ಯ ಉದ್ದೇಶವು ವಿಕಲಾಂಗತೆಯನ್ನು ನಿವಾರಣೆ ಮಾಡುವುದು, ಮಕ್ಕಳಿಗೆ ಪೂರ್ಣ ಗೌರವ, ಸಕಾಲಿಕ ಸಹಾಯ ಮತ್ತು ಪ್ರೋತ್ಸಾಹ ನೀಡುವುದು, ಮತ್ತು ಅವರನ್ನು ಸಮಾಜದ ಮುಖ್ಯವಾಹಿನಿಯಲ್ಲಿ ಸೇರಿಸುವುದಾಗಿದೆ.

ಕಾರ್ಯಕ್ರಮವನ್ನು ಜೆಎಸ್‌ಡಬ್ಲ್ಯುಸ್ಟೀಲ್ ಲಿಮಿಟೆಡ್‌ನ ಹಿರಿಯ ಉಪಾಧ್ಯಕ್ಷರಾದ ಸುನಿಲ್ ರಾಲ್ಫ್ ಉದ್ಘಾಟಿಸಿ ಮಾತನಾಡಿ "ವಿಶೇಷ ಮಕ್ಕಳ ಸಮಗ್ರ ಬೆಳವಣಿಗೆಯಲ್ಲಿ ಪೋಷಕರ ಸಹಕಾರದ ಮಹತ್ವವಾಗಿದೆ, ಪೋಷಕರು ಮತ್ತು ಸಂಬಂಧಿಕರು ಅವರ ವಿಶೇಷ ಅಗತ್ಯಗಳನ್ನು ತಿಳಿದು, ಅದಕ್ಕೆ ಅನುಗುಣವಾಗಿ ಬೆಂಬಲ ನೀಡುವುದು ಅತ್ಯಂತ ಅವಶ್ಯವಾಗಿದೆ. ವಿಕಲಾಂಗತೆಯು ಯಾವುದೇ ಸಾಮಾಜಿಕ ಕಳಂಕ ಅಥವಾ ಮೌಢ್ಯತೆಯಿಂದ ಕೂಡಿರುವುದಿಲ್ಲ, ಮಕ್ಕಳಿಗೆ ಸೂಕ್ತ ಆರೈಕೆ ಮತ್ತು ಪ್ರೋತ್ಸಾಹ ನೀಡಬೇಕಾಗುತ್ತದೆ. ತಮನ್ನಾ ಶಾಲೆಯಲ್ಲಿ ನಾವು ಅವರಿಗೆ ಮೂಲಭೂತ ಜೀವನ ಕೌಶಲ್ಯಗಳು ಮತ್ತು ದಿನನಿತ್ಯದ ಅಭ್ಯಾಸಗಳಲ್ಲಿ ತೊಡಗಿಸಿಕೊಡುವ ಮೂಲಕ ಸಂಪೂರ್ಣ ಬೆಂಬಲವನ್ನು ನೀಡುತ್ತಿದ್ದೇವೆ" ಎಂದು ತಿಳಿಸಿದರು. ಪ್ರಾಂಶುಪಾಲೆ ಸವಿತಾ ಎನ್. ಅವರು ಶಾಲೆಯಲ್ಲಿ ಲಭ್ಯವಿರುವ ಸೌಲಭ್ಯಗಳು, ತರಬೇತಿ ಕಾರ್ಯಕ್ರಮಗಳು ಮತ್ತು ಸಹಾಯಕ ಅಧ್ಯಯನ ವಾತಾವರಣದ ಬಗ್ಗೆ ವಿವರಿಸಿದರು.

ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿ, ವಿಶೇಷ ಮಕ್ಕಳು "ಭಕ್ತ ಪ್ರಹ್ಲಾದ" ಕುರಿತ ಪೌರಾಣಿಕ ನಾಟಕವನ್ನು ಅತ್ಯಂತ ಮನಮುಟ್ಟುವಂತೆ ಪ್ರದರ್ಶಿಸಿದರು. ಈ ನಾಟಕವು ವಿದ್ಯಾರ್ಥಿಗಳ ವಿಭಿನ್ನ ಜ್ಞಾನ, ಪ್ರತಿಭೆ ಮತ್ತು ಕೌಶಲ್ಯಗಳು ಮೆರೆದವು. ಈ ಕಾರ್ಯಕ್ರಮವು ಪ್ರತಿಯೊಬ್ಬ ವಿದ್ಯಾರ್ಥಿಯ ಅದ್ಭುತ ವೈಶಿಷ್ಟ್ಯತೆ ಗುರುತಿಸಿ, ಅವರಿಗೆ ಸೂಕ್ತ ಮಾರ್ಗದರ್ಶನ ಮತ್ತು ಬೆಂಬಲ ನೀಡುವ ಅಗತ್ಯವನ್ನು ಒತ್ತಿ ಹೇಳಿತು. ಮತ್ತು ನಾಟಕ ಕಲಿಸಿಕೊಟ್ಟ ನೃತ್ಯ ಶಿಕ್ಷಕ ರವಿ ಕುಮಾರ್ ಮತ್ತು ವೇಷಭೂಷಣ ಸಿದ್ದಪಡಿಸಿದ ಕಲೆ ಮತ್ತು ಕರಕುಶಲ ಶಿಕ್ಷಕ ಶಶಿಧರ್ ಪೋಷಕರ ಮೆಚ್ಚುಗೆಗಳಿಸಿದರು.

ಕಾರ್ಯಕ್ರಮದಲ್ಲಿ ಒಟ್ಟು 70 ವಿಶೇಷ ಮಕ್ಕಳು ಮತ್ತು 130 ಕ್ಕೂ ಹೆಚ್ಚು ಪೋಷಕರು ಮತ್ತು ಸಂಬಂಧಿಕರು ಮತ್ತು ತಮನ್ನಾ ಶಾಲೆಯ ಸಿಬ್ಬಂದಿಗಳು ಮತ್ತು ಜೆ ಎಸ್ ಡಬ್ಲ್ಯೂ ಫೌಂಡೇಶನ್ ಸಿಬ್ಬಂದಿಗಳು ಭಾಗವಹಿಸಿದ್ದರು

ಮಲ್ಲಮ್ಮ ನುಡಿ | ಪ್ರಾದೇಶಿಕ ಕನ್ನಡ ದಿನಪತ್ರಿಕೆ | ಬಾಗಲಕೋಟೆ | ಗುರುವಾರ 01.01.2026 

# ಛಾಯಾಗ್ರಹಣ ಒಂದು ಅದ್ಭುತ ಕ್ಷೇತ್ರ



• **ಮಲ್ಲಮ್ಮ ನುಡಿ ವಾರ್ತೆ ಹುಣಸೂರು:**

ತಾಲ್ಲೂಕು ಛಾಯಾಗ್ರಾಹಕರ ಸಂಘದ ನೂತನ ವರ್ಷದ ಕ್ಯಾಲಂಡರನ್ನು ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್ ರವರು ಬಿಡುಗಡೆ ಮಾಡಿದರು. ನಗರದ ಮಾಪ್ಲಾಜಾದಲ್ಲಿ ನಡೆದ ಸಮಾರಂಭದಲ್ಲಿ ಕ್ಯಾಲೆಂಡರ್ ಬಿಡುಗಡೆ ಮಾಡಿ ಮಾತನಾಡಿದ ಅವರು ಛಾಯಾಗ್ರಹಣ ಒಂದು ಅದ್ಭುತ ಕ್ಷೇತ್ರ. ಕಳೆದು ಹೋದ ಒಂದು ಘಟನೆಗಳನ್ನು ನೆನಪಿಸುವ ಶಕ್ತಿ ಛಾಯಾಚಿತ್ರಕ್ಕೆ ಇದೆ. ಹಳೆಯ ನೆನಪುಗಳನ್ನು ಮೆಲಕು ಹಾಕುವ ಸುಂಧರ ಕ್ಷಣಗಳನ್ನು ಛಾಯಾಚಿತ್ರ ನೀಡುತ್ತದೆ. ಛಾಯಾಗ್ರಾಹಕರೊಂದಿಗೆ ಮಾತನಾಡಿದರೆ ಅದ್ಭುತ ವಿಷಯಗಳು ಸಿಗುತ್ತದೆ. ಛಾಯಾಗ್ರಹಣದಲ್ಲಿ ಹೊಸ ತಂತ್ರಜ್ಞಾನವನ್ನು ಬಳಸಿ ಛಾಯಾಗ್ರಹಣದಲ್ಲಿ ಮುಂದೆ ಬರಬೇಕು. ನೀವು ಹೊಸತನವನ್ನು ತರಲು ಪ್ರಯತ್ನಿಸುತ್ತಿರಬೇಕು. ಛಾಯಾಗ್ರಾಹಕರು ಒಂದು ಸ್ತಬ್ಧ ಚಿತ್ರವಾಗದೆ, ಎಂದು ಚಾಲನೆಯಲ್ಲಿರಬೇಕು. ನಿಮ್ಮ ಕ್ಯಾಲೆಂಡರ್ ಗಳಲ್ಲಿ ಛಾಯಾಗ್ರಾಹಕರೆ ತೆಗೆದ ಉತ್ತಮ 12 ಚಿತ್ರಗಳನ್ನು ಒಳಗೊಂಡಂತಹ, ಗ್ರಾಹಕರು ಹಣ ಪಾವತಿಸಿ ಖರೀದಿಸುವಂತಹ ಕ್ಯಾಲೆಂಡರನ್ನು, ನಿವು ವಿನ್ಯಾಸಗೊಳಿಸಬೇಕು. ಅದಕ್ಕೆ ಅದರದೆ ಆದತಂಹ ಶಕ್ತಿ ಇದೆ. ಹೊಸ ಹೊಸ ತಂತ್ರಜ್ಞಾವನ್ನು ಬಳಸಿಕೊಂಡು ಮುಂದೆ ಬನ್ನಿ ಎಂದು ಕರೆನೀಡಿದರು. ತಾಲ್ಲೂಕಿನ ಛಾಯಾಗ್ರಾಹಕರಿಗೆ ಛಾಯಾಚಿತ್ರ ಸ್ಪರ್ಧೆ ಏರ್ಪಡಿಸಿ ಉತ್ತಮ ಮೂರು ಛಾಯಾಚಿತ್ರಗಳಿಗೆ ಪ್ರಥಮ 25000, ದ್ವಿತೀಯ 15000, ತೃತೀಯ 10000 ಸಾವಿರ ರೂ. ನಗದು ಬಹುಮಾನ ನೀಡುವುದಾಗಿ ತಿಳಿಸಿದರು. ಈ ಸಂಧರ್ಬದಲ್ಲಿ ಛಾಯಾಗ್ರಾಹಕರ ಸಂಘದ ಅಧ್ಯಕ್ಷ ರಾಮಸ್ವಾಮಿ, ಉಪಾಧ್ಯಕ್ಷ ದಾಮೋದರ್, ಕಾರ್ಯದರ್ಶಿ ಸುರೇಶ್, ಖಜಾಂಚಿ ಅರುಣ್ ಕುಮಾರ್, ನಿರ್ದೇಶಕರುಗಳಾದ ರಘು, ಲೋಕೇಶ್, ಗಜೇಂದ್ರ, ಶಿವರಾಜ್, ಕಾಂತರಾಜ್, ವಕೀಲ ಪುಟ್ಟರಾಜು, ಮಾಜಿ ಆಶ್ರಯ ಸಮಿತಿ ಸದಸ್ಯ ಚಿಕ್ಕಸ್ವಾಮಿ, ಹಾಗೂ ಛಾಯಾಗ್ರಾಹಕರುಗಳು ಹಾಜರಿದ್ದರು.

# 15 ದಿನಗಳಲ್ಲಿ ಸ್ಪಂದಿಸದಿದ್ದರೆ ರಸ್ತೆ ತಡೆ ಪ್ರತಿಭಟನೆ ಎಚ್ಚರಿಕೆ

• **ಮಲ್ಲಮ್ಮ ಲಿಂಗಸುಗೂರು:**



ಜಿಲ್ಲೆಯ ಸುಪ್ರಸಿದ್ಧ ಆರಾಧ್ಯ ದೈವವಾದ ಶ್ರೀ ಅಮರೇಶ್ವರ ದೇವಸ್ಥಾನ ಕ್ರಾಸ್ ಹತ್ತಿರ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಕೆಕೆಆರ್‌ಟಿಸಿ ಯ ಎಲ್ಲಾ ಬಸ್‌ಗಳ ನಿಲುಗಡೆ ಮಾಡುವಂತೆ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ಲಿಂಗಸಗೂರು ತಾಲೂಕು ಘಟಕದ ಅಧ್ಯಕ್ಷರಾದ ಜಿಲಾನಿ ಪಾಶ ವತಿಯಿಂದ ಘಟಕ ವ್ಯವಸ್ಥಾಪಕರಿಗೆ ಮನವಿ ಸಲ್ಲಿಸಲಾಯಿತು.

ಜಿಲ್ಲೆಯ ವಿವಿಧ ಭಾಗಗಳಿಂದ ಹಾಗೂ ನೆರೆಯ ರಾಜ್ಯಗಳಿಂದ ನೂರಾರು ಭಕ್ತರು ಪ್ರತಿದಿನ ಶ್ರೀ ಅಮರೇಶ್ವರ ದೇವಸ್ಥಾನಕ್ಕೆ ಆಗಮಿಸುತ್ತಿದ್ದು, ಸಮರ್ಪಕ ಸಾರಿಗೆ ವ್ಯವಸ್ಥೆ ಇಲ್ಲದ ಕಾರಣ ಭಕ್ತರು ತೀವ್ರ ತೊಂದರೆ ಅನುಭವಿಸುವಂತಾಗಿದೆ ಎಂದು ಸಂಘಟನೆಯ ಪದಾಧಿಕಾರಿಗಳು ಆಕ್ರೋಶ ವ್ಯಕ್ತಪಡಿಸಿದರು.

ಪ್ರಸ್ತುತ ಕೇವಲ 2–3 ಬಸ್‌ಗಳು ಮಾತ್ರ ಸಂಚರಿಸುತ್ತಿದ್ದು, ಅವು ಸಹ ವಿದ್ಯಾರ್ಥಿಗಳ ಶಾಲಾ–ಕಾಲೇಜು ಸಮಯಕ್ಕೆ ಮಾತ್ರ ಸೀಮಿತವಾಗಿವೆ. ನಂತರದ ಸಮಯದಲ್ಲಿ ಬಸ್‌ಗಳೇ ಇಲ್ಲದ ಪರಿಸ್ಥಿತಿ ನಿರ್ಮಾಣವಾಗಿದ್ದು, ಇದ್ದರೂ ಸಮಯಕ್ಕೆ ಸರಿಯಾಗಿ ಬಾರದ ಕಾರಣ ಭಕ್ತರು ನಡೆದು ಹೋಗುವಂತಾಗಿದೆ ಎಂದು ಆರೋಪಿಸಿದರು.

ಸರ್ಕಾರದ ಕರ್ತವ್ಯವೆಂದರೆ ಭಕ್ತರಿಗೆ ಸುಲಭವಾಗಿ ದೇವರ ದರ್ಶನಕ್ಕೆ ಅನುಕೂಲವಾಗುವಂತೆ ಸಮರ್ಪಕ ಸಾರಿಗೆ ವ್ಯವಸ್ಥೆ ಕಲ್ಪಿಸುವುದಾಗಿದೆ. ಈ ಹಿನ್ನೆಲೆಯಲ್ಲಿ ಅಮರೇಶ್ವರ ದೇವಸ್ಥಾನ ಕ್ರಾಸ್ ಹತ್ತಿರ ಎಲ್ಲಾ ಕೆಕೆಆರ್‌ಟಿಸಿ ಬಸ್‌ಗಳ ನಿಲುಗಡೆ ಮಾಡಬೇಕು ಹಾಗೂ ಕೆಲವು ಬಸ್‌ಗಳನ್ನು ನೇರವಾಗಿ ಶ್ರೀ ಕ್ಷೇತ್ರಕ್ಕೆ ಹೋಗಿ ಬರುವಂತೆ ವ್ಯವಸ್ಥೆ ಮಾಡಬೇಕು ಎಂದು ಆಗ್ರಹಿಸಲಾಯಿತು.

ಇನ್ನು ಈ ಮನವಿಗೆ 15 ದಿನಗಳೊಳಗಾಗಿ ಸ್ಪಂದಿಸದಿದ್ದಲ್ಲಿ ಅಮರೇಶ್ವರ ದೇವಸ್ಥಾನ ಕ್ರಾಸ್ ಬಳಿ ರಸ್ತೆ ತಡೆ ನಡೆಸಿ ತೀವ್ರ ಪ್ರತಿಭಟನೆ ಕೈಗೊಳ್ಳಲಾಗುವುದು ಎಂದು ಸಂಘಟನೆಯು ಎಚ್ಚರಿಕೆ ನೀಡಿತು.

ಈ ಸಂದರ್ಭದಲ್ಲಿ ಸಂಘಟನೆಯ ತಾಲೂಕು ಉಪಾಧ್ಯಕ್ಷ ತಿಮ್ಮನಗೌಡ ಪೊಲೀಸ್ ಪಾಟೀಲ್, ರವಿಕುಮಾರ ಬರಗುಡಿ, ಅಜೀಜ್ ಪಾಶಾ, ಮೊಸೀನ್ ಖಾನ್, ಅಲ್ಲಾದ್ದೀನ್ ಬಾಬಾ, ತಿಮ್ಮನಗೌಡ, ಬಸನಗೌಡ, ಮಲ್ಲಣ್ಣ, ಮಾರೆಪ್ಪ, ರಹೀಮ್, ಹರೀಫ್, ಪ್ರಭುಗೌಡ, ರಾಜು, ನಾಗರಾಜ, ಖಾಸೀಂಸಾಬ, ನಬೀಸಾಬ, ವೀರೇಶ ಹೀರೆಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸಮಗ್ರ ಅಭಿವೃದ್ಧಿಗೆ ಶಿಕ್ಷಣವೇ ಪ್ರಮುಖ ಅಸ್ತ್ರ: ಡಾ.ಶೈಲೇಂದ್ರ ಬೆಲ್ದಾಳೆ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:**




ದೇಶದ ಭದ್ರ ಬುನಾದಿ, ಸಮಗ್ರ ಪ್ರಗತಿಗೆ ಶಿಕ್ಷಣ. ಪ್ರಮುಖ ಅಸ್ತವಾಗಿದೆ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಹೇಳಿದರು.

ತಾಲೂಕಿನ ಹಾಲಹಳ್ಳಿ(ಕೆ) ಗ್ರಾಮದ ಕೆ. ಎಲ್.ಪಬ್ಲಿಕ್ ಶಾಲೆಯಲ್ಲಿ ಸೋಮವಾರ ಆಯೋಜಿಸಿದ್ದ 13ನೆಯ ವಾರ್ಷಿಕೋತ್ಸವ ಸಮಾರಂಭಉದ್ಘಾಟಿಸಿ ಅವರು ಮಾತನಾಡಿದರು. ಇಂದಿನ ದಿನಗಳಲ್ಲಿ ಖಾಸಗಿ ಶಾಲೆಗಳು ನಡೆಸುವುದು ಸವಾಲಿನ ಕೆಲಸ. ಆದರೂ ಕೂಡ ಯಾವುದೇ ಅನುದಾನ ಇಲ್ಲದೇ ಗ್ರಾಮೀಣ ಭಾಗದಲ್ಲಿ ಕೆ.ಎಲ್.ಪಬ್ಲಿಕ್ ಶಾಲೆ ಸುತ್ತಮುತ್ತಲಿನ ಹಳ್ಳಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕಲ್ಪಿಸುತ್ತಿರುವುದು ಸಂತಸ ತರಿಸಿದೆ ಎಂದು ತಿಳಿಸಿದರು.

ಮಾಜಿ ಶಾಸಕ ಪ್ರಕಾಶ ಖಂಡ್ರೆ ಮಾತನಾಡಿ, ಗ್ರಾಮೀಣ ಪ್ರದೇಶದಲ್ಲಿ ಕೆ.ಎಲ್.ಪಬ್ಲಿಕ್ ಶಾಲೆ ಕಡಿಮೆ ಖರ್ಚಿನಲ್ಲಿ ಉತ್ತಮ ಶಿಕ್ಷಣ ಜತೆಗೆ ಮಕ್ಕಳಿಗೆ ಅತ್ಯಾಧುನಿಕ ಸೌಲಭ್ಯ ಕಲ್ಪಿಸುತ್ತಿದೆ ಎಂದು ಮೆಚ್ಚುಗೆ ವ್ಯಕ್ತ ಪಡಿಸಿದರು. ನಾರಂಜಾ ಸಕ್ಕರೆ ಕಾರ್ಖಾನೆ ಮಾಜಿ ಅಧ್ಯಕ್ಷ ಡಿ.ಕೆ.ಸಿದ್ರಾಮ ಮಾತನಾಡಿ, ಇಂದಿನ ದಿನಗಳಲ್ಲಿ ಮಕ್ಕಳಿಗೆ ಕೇವಲ ಬ್ಯಾಂಕ್, ಸರ್ಟಿಫಿಕೇಟ್ ಕೊಡುವ ಶಿಕ್ಷಣ ಬೇಕಾಗಿಲ್ಲ. ಬದಲಾಗಿ ಶಿಕ್ಷಣದ ಮಾನವೀಯ ಮೌಲ್ಯ ಕಲಿಸಿ ಕೊಡುವಂತಹ ಶಿಕ್ಷಣ ಬೇಕಾಗಿದೆ. ಆ ಕೆಲಸ ಈ ಭಾಗದಲ್ಲಿ ಕೆ. ಎಲ್.ಪಬ್ಲಿಕ್ ಶಾಲೆ ಮಾಡುತ್ತಿದೆ ಎಂದು ಹೆಮ್ಮೆ ವ್ಯಕ್ತ ಪಡಿಸಿದರು.

ಭಾಲ್ಕಿ ತಾಲೂಕಿನ ಹಾಲಹಳ್ಳಿ(ಕೆ) ಗ್ರಾಮದ ಕೆ.ಎಲ್.ಪಬ್ಲಿಕ್ ಶಾಲೆಯಲ್ಲಿ ನಡೆದ 13ನೇ ವಾರ್ಷಿಕೋತ್ಸವ ಸಮಾರಂಭ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಉದ್ಘಾಟಿಸಿದರು. ಗುರುಬಸವ ಪಟ್ಟದ್ದೇವರು, ಮಾಜಿ ಶಾಸಕ ಪ್ರಕಾಶ ಖಂಡ್ರೆ, ಡಿ.ಕೆ.ಸಿದ್ರಾಮ, ನಟಿ ರಾಧಾ ಭಗವತಿ, ರಾಜ ಕುಮಾರ ಲಿಂಗಬಶೆಟ್ಟಿ ಸೇರಿದಂತೆ ಹಲವರು ಇದ್ದರು.

ಭಾಲ್ಕಿಯ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವಪಟ್ಟದ್ದೇವರು ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿ, ಗ್ರಾಮೀಣ ಭಾಗದಲ್ಲಿ ಕೆ.ಎಲ್ ಪಬ್ಲಿಕ್ ಶಾಲೆ ಗುಣಾತ್ಮಕ ಶಿಕ್ಷಣಕ್ಕೆ ಹೆಸರುವಾಸಿಯಾಗಿದೆ. ಮಕ್ಕಳಿಗೆ ಉತ್ತಮ ಶಿಕ್ಷಣ, ಸಂಸ್ಕಾರ ಕಲ್ಪಿಸಿ ದೇಶದ ಉತ್ತಮ ನಾಗರಿಕರನ್ನಾಗಿ ಬೆಳೆಸುತ್ತಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ತರುಣ ಸೂರ್ಯಕಾಂತ ನಾಗಮಾರಪಳ್ಳಿ ಮಾತನಾಡಿದರು. ಸಂಸ್ಥೆಯ ಅಧ್ಯಕ್ಷ ರಾಜಕುಮಾರ ಲಿಂಗಬಶೆಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸರಕಾರಿ ನೌಕರರ ಸಂಘದ ಅಧ್ಯಕ್ಷ ಸೋಮಶೇಖರ ಬಿರಾದಾರ್, ಕಾರ್ಯದರ್ಶಿ ಪ್ರಭುಲಿಂಗ ತೂಗಾಂವೆ, ಜಿಲ್ಲಾ ಕಸಾಪ ಅಧ್ಯಕ್ಷ ಸುರೇಶ್ ಚನ್ನಶೆಟ್ಟಿ, ಸಿಆರ್‌ಪಿ ಶಿರೋಮಣಿ, ಗ್ರಾಪಂ ಅಧ್ಯಕ್ಷ ಅಶೋಕ ಜಾಧವ, ಸಂಜುಕುಮಾರ ಸಿದ್ದಾಪುರ, ಶ್ರೀಕಾಂತ ದಾನಿ, ನಾಗೇಂದ್ರ ಸೊರಳ್ಳಿ. ಅನಿಲಕುಮಾರ ಹಂಗರಗಿ ಸೇರಿದಂತೆ ಹಲವರು ಇದ್ದರು.

# ಕಲಬುರಗಿ ಜಿಲ್ಲೆಯಾದ್ಯಂತ 8,936 ಮತದಾರರು: ಬಿ.ಫೌಜಿಯಾ ತರನ್ನುಮ್

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**



ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಅಂತಿಮ ಪಟ್ಟಿ ಮಂಗಳವಾರ ಪ್ರಕಟಿಸಲಾಗಿದ್ದು, ಕಲಬುರಗಿ ಜಿಲ್ಲೆಯಾದ್ಯಂತ 4,818 ಪುರುಷರು ಮತ್ತು 4,118 ಮಹಿಳೆಯರು ಸೇರಿ ಒಟ್ಟು 8,936 ಜನ ಮತದಾರರು ಹೆಸರು ನೋಂದಾಯಿಸಿಕೊಂಡಿದ್ದಾರೆ ಎಂದು ಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಯಾಗಿರುವ ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌ–ಜಿಯಾ ತರನ್ನುಮ್ ತಿಳಿಸಿದ್ದಾರೆ.

ಕಳೆದ ನವೆಂಬರ್ 25 ರಂದು ಪ್ರಕಟಿಸಿದ ಕರಡು ಮತದಾರರ ಪಟ್ಟಿಯಲ್ಲಿ 4,300 ಪುರುಷರು, 3,584 ಮಹಿಳೆಯರು ಸೇರಿ 7,884 ಮತದಾರರು ಹೆಸರು ನೊಂದಾಯಿಸಿಕೊಂಡಿದ್ದರು.

ತದನಂತರ ಜರುಗಿದ ನಿರಂತರ ನೋಂದಣಿ ಪ್ರಕ್ರಿಯೆಯಲ್ಲಿ 518 ಪುರುಷರು ಮತ್ತು 534 ಮಹಿಳೆಯರು ಹೆಸರು ಸೇರ್ಪಡೆ ಮಾಡಿಕೊಂಡಿದ್ದು, ಅಂತಿಮವಾಗಿ ಜಿಲ್ಲೆಯಾದ್ಯಂತ 8,936 ಜನ ಮತದಾರರು ನೋಂದಾಯಿತರಾದಂತಾಗಿದೆ.

ಮತದಾರರ ಪಟ್ಟಿಯನ್ನು ಡಿ.ಸಿ. ಕಚೇರಿ ಸೇರಿದಂತೆ ಕಲಬುರಗಿ ಮಹಾನಗರ ಪಾಲಿಕೆ, ಕಲಬುರಗಿ ಹಾಗೂ ಸೇಡಂ ಸಹಾಯಕ ಆಯುಕ್ತರ ಕಚೇರಿ ಹಾಗೂ ತಹಶೀಲ್ದಾರರ ಕಚೇರಿಯಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲಾಗಿದ್ದು, ಸಾರ್ವಜನಿಕರು ಪಟ್ಟಿಯನ್ನು ವೀಕ್ಷಿಸಬಹುದಾಗಿದೆ ಎಂದು ಡಿ.ಸಿ. ಅವರು ತಿಳಿಸಿದ್ದಾರೆ.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ದಿ.01–11–2025 ಅರ್ಹತಾ ದಿನವನ್ನಾಗಿ ಪರಿಗಣಿಸಿ ಅಂತಿಮ ಮತದಾರರ ಪಟ್ಟಿಯನ್ನು ಅಂತಿಮಗೊಳಿಸಿದೆ. 16 ಕಿ.ಮೀ ಅಂತರದಲ್ಲಿ ಪ್ರತಿ ಮತಗಟ್ಟೆ ಇದ್ದು, ಕನಿಷ್ಠ 30 ಮತದಾರರು ಒಳಗೊಂಡಿರಬೇಕೆಂಬ ಮಾರ್ಗಸೂಚಿ ಹಿನ್ನೆಲೆಯಲ್ಲಿ ಮತದಾರರ ಸಂಖ್ಯೆ ಅನುಗುಣವಾಗಿ ಪ್ರಸ್ತುತ ಜಿಲ್ಲೆಯಲ್ಲಿ 41 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಮುಂದಿನ ದಿನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮತದಾರರು ನೋಂದಾಯಿಸಲ್ಪಟ್ಟದಲ್ಲಿ ಚುನಾವಣಾ ಸಮಯದಲ್ಲಿ ಇದನ್ನು ಪರಿಷ್ಕರಿಸಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಹೆಸರು ಸೇರ್ಪಡೆಗೆ ಡಿ.ಸಿ. ಮನವಿ: ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಅಂತಿಮವಾಗಿದ್ದರು ಸಹ ಚುನಾವಣೆ ಘೋಷಣೆಯಾಗಿ ನಾಮಪತ್ರ ಸಲ್ಲಿಸಲು ನಿಗದಿ ಮಾಡುವ ಕೊನೆಯ ದಿನಾಂಕದ ವರೆಗೆ ಮತದಾರರ ಪಟ್ಟಿಗೆ ಹೆಸರು ಸೇರಿಸಲು ಅವಕಾಶ ಕಲ್ಪಿಸಿದೆ. ಅರ್ಹ ಮತದಾರರು (ಶಿಕ್ಷಕರು) ಅವಶ್ಯಕ ದಾಖಲೆಗಳೊಂದಿಗೆ ತಮ್ಮ ಹೆಸರನ್ನು ಸಹಾಯಕ ಮತದಾರರ ನೋಂದಣಾಧಿಕಾರಿಗಳಾಗಿರುವ ತಹಶೀಲ್ದಾರರು, ಸಹಾಯಕ ಆಯುಕ್ತರು, ಕಲಬುರಗಿ ಮಹಾನಗರ ಪಾಲಿಕೆ ಹಾಗೂ ಜಿಲ್ಲಾಧಿಕಾರಿಗಳ ಕಚೇರಿಗೆ ಅರ್ಜಿ ಸಲ್ಲಿಸಿ ಮತದಾರರ ಪಟ್ಟಿಯಲ್ಲಿ ನೋಂದಾಯಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಬಿ.ಫೌ–ಜಿಯಾ ತರನ್ನುಮ್ ಮನವಿ ಮಾಡಿದ್ದಾರೆ.

## : CITATION :

IN THE COURT OF THE PRL. CIVIL JUDGE AND JMFC., AT HUMNABAD.

CRL. MISC. No.2713/2025.

<u>Petitioners</u> :

1. Basvareddy S/o late. Papareddy, Age: 52-year. Occu: Agriculture.
2. Gundareddy S/o late. Papareddy. Age: 71-year, Occu: Agriculture.
3. Prabhu reddy S/o late. Papareddy. Age: 65-year. Occu: Agriculture. Petitioner No.1 to 3 R/o Village Kathalli, Tq. Humnabad. Dist. Bidar.
4. Smt. Sangamma D/o late. Papareddy, Age: 74-year. Occu: House hold.
5. Smt. Yenkamma D/o late. Papareddy, Age: 65-year. Occu: House hold.
6. Bharath reddy S/o late. Papareddy, Age: 59-year, Occu: Agriculture. Petitioner No.4 to 6 R/o Village Kathalli. Now at Wanjri Town Humnabad.
7. Smt. Rajamma D/o late. Papareddy, Age: 64-year. Occu: House hold. R/o Village Kathalli. Now at Bemalkheda. Tq. Chitguppa.

**<u>Respondent</u>**:

The Registrar of Birth and Death through The Tahasildar Humnabad.

Sub:- Petition U/Sec. 13(3) of Birth and Death Registration Act-1969

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Mother of petitioner No.1 to 7. Deceased by namely LATE. SMT. RAMAKKAW/OLATE. PAPAREDDY, she was died on 09.03.2023 at Village Kathalli. Tq. Humnabad. Dist. Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 29.01.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 30-12-2025

//By order of the court//
Chief Ministerial Officer,
Prl. Civil Judge & JMFC Court,
Humnabad.

# ದೇವದಾಸಿಯರ ಕೊನೆಯ ದಿನಾಂಕ ವಿಸ್ತರಣೆ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಪ್ರಸಕ್ತ 2025–26ನೇ ಸಾಲಿನ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳಾದ ಉದ್ಯೋಗಿನಿ, ಚೇತನಾ ಯೋಜನೆ, ಧನಶ್ರೀ ಯೋಜನೆ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ ಮತ್ತು ಮಾಜಿ ದೇವದಾಸಿ ಮಹಿಳೆಯರ ಆದಾಯೋತ್ಪನ್ನ ಚಟುವಟಿಕೆ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಜಿ ಸಲ್ಲಿಕೆ ಕೊನೆಯ ದಿನಾಂಕವನ್ನು ಕಾರಣಾಂತರಗಳಿಂದ 2026ರ ಜನವರಿ 15 ರವರೆಗೆ ವಿಸ್ತರಿಸಲಾಗಿದೆ.

ಈ ಹಿಂದೆ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕವನ್ನು 2025ರ ಡಿಸೆಂಬರ್ 15ರಂದು ನಿಗದಿಪಡಿಸಲಾಗಿತ್ತು. ಆಸಕ್ತರು ಸೇವಾಸಿಂಧು ಜಾಲತಾಣದಲ್ಲಿ ಆನ್‌ಲೈನ್ ಮೂಲಕ ಮೇಲ್ಕಂಡ ಕೊನೆಯ ದಿನಾಂಕದೊಳಗಾಗಿ ಅರ್ಜಿ ಸಲ್ಲಿಸಬೇಕೆಂದು ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## : CITATION:

IN THE COURT OF THE PRL. CIVIL JUDGE AND JMFC., AT HUMNABAD.

CRL. MISC. No.4465/2025.

<u>Petitioners</u>:

1. Vanita W/o Late Prabhu Hallse, Age: 42-yrs. Occu : Household, R/o Village Hunsgera, Humnabad. Dist. Bidar.

Respondent:

The Registrar of Birth and Death through The Tahasildar Humnabad. Dist. Humnabad.

Sub:- Petition U/Sec. 13(3) of Birth and Death Registration Act-1969

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Husband of petitioner by namely LATE. PRABHU HALLSE S/O KALAPPA HALLSE, who was died on 05.12.2017 at Village Hunsgera. Tq. Humnabad, Dist. Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 29.01.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 27-12-2025.

//By order of the court//
Chief Ministerial Officer, Prl. Civil Judge & JMFC Court, Humnabad.

# ಕೊನೆಯ ದಿನ

ಕಲಬುರಗಿ:2025–26 ನೇ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಯುವಜನರಲ್ಲಿ ಸೃಜನಶೀಲತೆ ಮತ್ತು ನಾ ಯಕತ್ವದ ಕೌಶಲ್ಯಗಳನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಕಲಬುರಗಿ ಜಿಲ್ಲೆಯ ಯುವಜನರಿಗೆ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ 2026ರ ಜನವರಿ 10 ಹಾಗೂ 11 ರಂದು ಎರಡು ದಿನಗಳ ಕಾಲ ಕಲಬುರಗಿ ಜಿಲ್ಲೆಯ ಜಿಲ್ಲಾ ಕ್ರೀಡಾಂಗಣದಲ್ಲಿ ಸೃಜನಶೀಲತೆ ಮತ್ತು ವ್ಯಕ್ತಿತ್ವ ವಿಕಸನ ತರಬೇತಿಯನ್ನು ನೀಡಲಾಗುತ್ತಿದ್ದು, ಇದಕ್ಕಾಗಿ ಆಸಕ್ತಿಯುಳ್ಳ ಜಿಲ್ಲೆಯ ಯುವಜನರು ತಮ್ಮ ಹೆಸರನ್ನು ನೋಂದಣಿ ಮಾಡಿಕೊಳ್ಳಬೇಕೆಂದು ಎಂದು ಕಲಬುರಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಭ್ಯರ್ಥಿಗಳು ಯಾವುದೇ ಪದ ವಿ (2023–24 ನೇ ಸಾಲಿನ ನಂತರ ಪೂರ್ಣಗೊಳಿಸಿರಬೇಕು/ಅಂತಿಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರಬೇಕು. ಗರಿಷ್ಠ 29 ವರ್ಷ ವಯೋಮಾನದ ಆಸಕ್ತ ಯುವಕ/ಯುವತಿಯರು ಭಾಗವಹಿಸಬಹುದಾಗಿದೆ. ಅಭ್ಯರ್ಥಿಗಳು ಆಧಾರ ಕಾರ್ಡ, ಅಂಕ ಪಟ್ಟಿಗಳ ಝೆರಾಕ್ಸ್ ಪ್ರತಿ, ಹಾಗೂ ಇತ್ತೀಚಿನ 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳೊಂದಿಗೆ ಕಲಬುರಗಿ ಚಂದ್ರಶೇಖರ ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿನ ಯುವ ಸಬಲೀಖರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ 2026ರ ಜನವರಿ 7ರ ಸಂಜೆ 5 ಗಂಟೆಯೊಳಗಾಗಿ ನೋಂದಣಿ ಮಾಡಿಕೊಳ್ಳಬೇಕು. 60 ಜನ ಯುವಕ/ಯುವತಿಯರಿಗೆ ಮಾತ್ರ ಈ ತರಬೇತಿ ನೀಡಲಾಗುತ್ತಿದ್ದು, ಮೊದಲು ಬಂದವರಿಗೆ ಆದ್ಯತೆ ನೀಡಲಾಗುತ್ತದೆ. ಯುವಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸೃಜನಶೀಲತೆ ಮತ್ತು ವ್ಯಕ್ತಿತ್ವ ವಿಕಸನ ತರಬೇತಿಯ ಸದುಪಯೋಗ ಪಡೆಯಬೇಕೆಂದು ಅವರು ತಿಳಿಸಿದ್ದಾರೆ.

# ಪಟ್ಟಣವನ್ನು ಕಲ್ಯಾಣ ಕರ್ನಾಟಕದಲ್ಲಿಯೇ ಮಾದರಿ ನಗರವನ್ನಾಗಿ ಮಾಡುವ ಗುರಿ



• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:**

ತಾಲೂಕು ಸೇರಿದಂತೆ ಭಾಲ್ಕಿ ಪಟ್ಟಣವನ್ನು ಕಲ್ಯಾಣ ಕರ್ನಾಟಕದಲ್ಲಿಯೇ ಮಾದರಿ ನಗರವನ್ನಾಗಿ ಮಾಡುವ ಗುರಿ ನಮ್ಮದಾಗಿದೆ ಎಂದು ಕ್ಷೇತ್ರದ ಶಾಸಕರೂ ಆಗಿರುವ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಪಟ್ಟಣದ ಗುರುಕಾಲೋನಿಯ ಮಹಾದೇವಮಂದಿರದಲ್ಲಿ ಬುಧವಾರ ನಡೆದ ಭಾಲ್ಕಿ ಪಟ್ಟಣದ 10 ಕೋಟಿ ರೂ. ವೆಚ್ಚದ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು. ಗುರು ಕಾಲೋನಿಯ ಮಹಾದೇವಮಂದಿರದ ತೋಟದ ಕಾಂಪೌಡ್ ಗೋಡೆಗಾಗಿ 10 ಲಕ್ಷ ರೂ. ಸೇರಿದಂತೆ ಪಕ್ಕದ ರಸ್ತೆಗಳಿಗಾಗಿ 25 ಲಕ್ಷ ರೂ. ಅನುದಾನ ನೀಡಲಾಗಿದೆ. ಲೆಕ್ಚರ್ ಕಾಲೋನಿ, ಗುರುಕಾಲೋನಿಗಳು ಜಿಲ್ಲೆಯಲ್ಲಿಯೇ ಮಾದರಿ ಕಾಲೋನಿಗಳಾಗಿ ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಕಾಮಗಾರಿಗಳನ್ನು ಮಾಡಲಾಗುತ್ತಿದ ಎಂದರು. ನಂತರ 2024–25ನೇ ಸಾಲಿನ ವಿಶೇಷ ಯೋಜನೆಯ ಅಡಿಯಲ್ಲಿ 1.45 ಕೋಟಿ ರೂ. ವೆಚ್ಚದಲ್ಲಿ ವಾರ್ಡ ಸಂಖೆ 1 ರಿಂದ 9 ರಲ್ಲಿ ಕಾಂಕ್ರಿಟ್ ಚರಂಡಿ, ರಸ್ತೆ ನಿರ್ಮಾಣ, 2 ಕೋಟಿ ರೂ. ವೆಚ್ಚದಲ್ಲಿ ವಾಡ್ ಸಂ.10,11,12,13,14 ರಲ್ಲಿ ಸಿಸಿ ರಸ್ತೆ, ಚರಂಡಿ ನಿರ್ಮಾಣಕ್ಕೆ ಗುದ್ದಲಿ ಪೂಜೆ ನೆರವೇರಿಸಿದರು. ನಂತರ ವಾಡ್ ಸಂಖೆ 15,16,17,18 ರಲ್ಲಿ 40 ಲಕ್ಷ ರೂ. ಸಿಸಿ ರಸ್ತೆ, ಚರಂಡಿ ನಿರ್ಮಾಣ ಮತ್ತು ವಾರ್ಡ ಸಂಖೆ 19,20,21 ರಲ್ಲಿ 1.30 ಕೊಟಿ ರೂ. ವೆಚ್ಚದಲ್ಲಿ ಸಿ.ಸಿ.ರಸ್ತೆ, ಚರಂಡಿ ನಿರ್ಮಾಣ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು. ಒಟ್ಟಿನಲ್ಲಿ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡುವ ಮೂಲಕ ಸ್ವಕ್ಷೇತ್ರ ಭಾಲ್ಕಿಗೆ ಸಚಿವ ಈಶ್ವರ ಖಂಡ್ರೆ ನೂತನ ವರ್ಷದ ಉಡುಗೊರೆ ನೀಡಿದಂತಾಗಿದೆ.

ಈ ಸಂದರ್ಭದಲ್ಲಿ ಪ್ರಮುಖರಾದ ಅರಣ್ಯ ನಿಗಮದ ಉಪಾಧ್ಯಕ್ಷ ಹಣಮಂತರಾವ ಚವ್ಹಾಣ, ಪುರಸಭೆ ಮುಖ್ಯಾಧಿಕಾರಿ ಸಂಗಮೇಶ ಕಾರಬಾರಿ, ಪುರಸಭೆ ಅಧ್ಯಕ್ಷೆ ಶಶಿಕಲಾ ಸಿಂಧನಕೆರೆ, ಪುರಸಭೆ ಮಾಜಿ ಅಧ್ಯಕ್ಷ ಬಸವರಾಜ ವಂಕೆ, ರಾಹುಲ ಪೂಜಾರಿ, ಸಹಾಯಕ ಆಯುಕ್ತ ಪ್ರಕಾಶ ಕುದರಿ, ಓಣಿಯ ಪ್ರಮುಖರಾದ ನ್ಯಾಯವಾದಿ ಉಮಾಕಾಂತ ವಾರದ, ರಮೇಶ ಗೊನ್ನಾಳೆ, ಬಾಲರಾಜ ಕುಂಬಾರ, ಬಸವರಾಜ ಕುರುಬಖೇಳಗೆ, ಅಶೋಕ ಬಾವುಗೆ, ಮಂಗಲಾ ಟೀಚರ, ಪುರಸಭೆ ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜಯರಾಜ ದಾಬಶೆಟ್ಟಿ ಉಪಸ್ತಿತರಿದ್ದರು.

ಉಮಾಕಾಂತ ವಾರದ ಸ್ವಾಗತಿಸಿದರು. ದೀಪಕ ಥಮಕೆ ನಿರೂಪಿಸಿದರು. ಸಿದ್ರಾಮಯ್ಯಾ ಸ್ವಾಮಿ ವಂದಿಸಿದರು.

# ಹೊಸ ವರುಷ, ಗಣ್ಯರ ಮಾತಿನ ಹರುಷ..



2026ರ ಹೊಸ ಭರವಸೆಯ ಗುರಿ. 1. ಭಾಲ್ಕಿ ಹಿರೇಮಠವು ಧಾರ್ಮಿಕ ಶೈಕ್ಷಣಿಕ, ಸಾಮಾಜಿಕ ಕ್ಷೇತ್ರಗಳಲ್ಲಿ ಮಹತ್ವದ ಕಾರ್ಯ ಮಾಡುತ್ತಿದೆ. ಹೊಸದಲ್ಲಿ ಸಮಾಜೋ ಧಾರ್ಮಿಕ ಕಾರ್ಯಗಳು ದೊಡ್ಡ ಪ್ರಮಾಣದಲ್ಲಿ ನಡೆಯಲಿವೆ. ಶ್ರೀ ಮಠವು ಅನ್ನ ,ಅಕ್ಷರ ,ಆಶ್ರಯವನ್ನು ಕೊಟ್ಟು ಶಿಕ್ಷಣ ಕ್ರಾಂತಿಯನ್ನು ಇನ್ನು ಹೆಚ್ಚಿನ ಮಟ್ಟದಲ್ಲಿ ಮಾಡಲಾಗುತ್ತಿದೆ.

–ಗುರುಬಸವ ಪಟ್ಟದ್ದೇವರು
ಹಿರೇಮಠ ಸಂಸ್ಥಾನ ಭಾಲ್ಕಿ.



ಹಾಸ್ಟೆಲ್, ಅಂಗನವಾಡಿ ಕೇಂದ್ರಗಳು, ಶಿಶುಪಾಲನ ಕೇಂದ್ರಗಳ ಸುಧಾರಣೆಗೆ ಶ್ರಮಿಸುತ್ತಿದ್ದೇನೆ. ಮಕ್ಕಳಿಗೆ ಅತ್ಯಂತ ಸುರಕ್ಷಿತ, ಸುಖದಾಯಕ ವ್ಯವಸ್ಥೆ ಇರುವಂತೆ ಮಾಡುವುದು ಹೊಸ ವರ್ಷದ ಕನಸಾಗಿದೆ.

–ಶಶಿಧರ ಕೋಸಂಬೆ
ಅಧ್ಯಕ್ಷರು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರು.



ನಮ್ಮಲ್ಲಿ ಹೊಸ ವರ್ಷಕ್ಕೆ ಹೊಸ ದಿನ ಎನ್ನುವ ಉತ್ಸಾಹದ ಭಾವನೆ ಎಲ್ಲರಲ್ಲಿಯೂ ಮೂಡುತ್ತದೆ. ಧನಾತ್ಮಕ ಆಲೋಚನೆಯಿಂದ ಯುವಶಕ್ತಿ ಸಮಯವನ್ನು ಸದುಪಯೋಗಪಡಿಸಿಕೊಳ್ಳಬೇಕು. ಹೊಸ ಭರವಸೆಗಳನ್ನು ಇಟ್ಟುಕೊಂಡು ಗುರಿ ತಲುಪಬೇಕು.

–ಸಾಗರ್ ಈಶ್ವರ್ ಖಂಡ್ರೆ
ಸಂಸದರು ಬೀದರ್



ಹೊಸ ವರ್ಷವೂ ಹೊಸ ಸಂಕಲ್ಪದೊಂದಿಗೆ ಸಾಗಲಿ ಎಂದು ದೇವರಲ್ಲಿ ಪ್ರಾರ್ಥಿಸಿಕೊಳ್ಳುತ್ತಾ, ಹೊಸ ಉತ್ಸಾಹದ ಭಾವನೆ ಎಲ್ಲರಲ್ಲೂ ಮೂಡಿ ಸಕರಾತ್ಮಕ ವಿಚಾರಗಳು ಎಲ್ಲರಲ್ಲೂ ಹರಡಲಿ. ಗೊತ್ತಿಲ್ಲದೆ ಮಾಡಿದ ತಪ್ಪುಗಳನ್ನು ಮಾಡದೆ ಮುಂದಿನ ದಿನಗಳನ್ನು ಉತ್ತಮವಾಗಿ ಬೆಳೆಸಿಕೊಳ್ಳಬೇಕು. ವಿದ್ಯಾರ್ಥಿಗಳು ಅಭ್ಯಾಸದಲ್ಲಿ ಕಠಿಣ ಪರಿಶ್ರಮದೊಂದಿಗೆ ನಿಶ್ಚಿತ ಗುರಿಯನ್ನು ತಲುಪಬೇಕು. –ಶ್ರೀಮತಿ ಭಾಗ್ಯಶ್ರೀ ಜೋಶಿ, ಗೃಹಿಣಿ, ಹುಬ್ಬಳ್ಳಿ



ಹೊಸ ವರ್ಷದ ನೆಪದಲ್ಲಿ ದುಶ್ಚಟಗಳನ್ನು ಮಾಡದೆ ಅಮೂಲ್ಯವಾದ ದೇಹವನ್ನು ಕಾಪಾಡಿಕೊಳ್ಳಬೇಕು. ಹೊಸ ಗುರಿಯನ್ನು ಜೀವನದಲ್ಲಿ ಹೊಂದಿ ಮುಂದೆ ಸಾಗಬೇಕು. ಸಂಸ್ಕಾರಯುತವಾಗಿ ಜೀವನ ನಡೆಸುವ ಸಂಕಲ್ಪ ಮಾಡಬೇಕು. ಮಹಾನ್ ವ್ಯಕ್ತಿಗಳ ತತ್ವಗಳನ್ನು ಪಾಲಿಸಲು ಶಪಥ ಮಾಡಬೇಕು.

–ಚನ್ನಬಸವಣ್ಣ ಬಳತೆ, ಉದ್ದಿಮೆದಾರರು ಭಾಲ್ಕಿ
























Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)